₹ 4 | ಪುಟ: 4 | ಸಂಪುಟ: 4 | ಸಂಚಿಕೆ 82 | newsbelagavi@gmail.com | 9900332089 | 9900332089



# ಬೆಳಗಾವಿ ವರದಿ

ಪ್ರಧಾನ ಸಂಪಾದಕರು: ಸತೀಶ್.ಬಿ.ಜಿ
BELAGAVI VARADI KANNADA DAILY
ಕನ್ನಡ ದಿನಪತ್ರಿಕೆ
Volume : 4 | Issue: 82 | Saturday, 13, MAY, 2023 | RNI: KARKAN/2020/79084 | Regn,No:G-2/PMG/KA/NK/BM/139/2021-23 | 24

# ಷರತ್ತು ಒಪ್ಪಿಕೊಂಡ್ರೆ ಮೈತ್ರಿಗೆ ಸಿದ್ಧ: ಎಚ್‌ಡಿಕೆ

ಬೆಂಗಳೂರು: ನನಗೆ ಮೈತ್ರಿ ಮಾಡಿಕೊಳ್ಳುವುದರಲ್ಲಿ ಯಾವುದೇ ಅಸಮಾಧಾನವಿಲ್ಲ. ನಮ್ಮ ಷರತ್ತುಗಳನ್ನು ಯಾವ ಪಕ್ಷ ಪೂರೈಸುತ್ತದೆ ಎಂಬುದರ ಆಧಾರದ ಮೇಲೆ ಬಿಜೆಪಿ ಅಥವಾ ಕಾಂಗ್ರೆಸ್ ಜೊತೆ ಮೈತ್ರಿ ಮಾಡಿಕೊಳ್ಳುವುದನ್ನು ನಿರ್ಧರಿಸುತ್ತೇವೆ. ಮೈತ್ರಿಗೆ ನಾವು ಸಿದ್ಧ ಎಂದು ಹೆಚ್ಡಿ ಕುಮಾರಸ್ವಾಮಿ ತಿಳಿಸಿದ್ದಾರೆ.

ಬುಧವಾರ ಮತದಾನ ನಡೆದ ದಿನದಂದು 10 ಎಕ್ಸಿಟ್ ಪೋಲ್‌ಗಳು ಹೊರಬಿದ್ದಿದ್ದವು ಈ ಪೈಕಿ ಬಹುತೇಕ ಸಮೀಕ್ಷೆಯಲ್ಲಿ ಕಾಂಗ್ರೆಸ್ ಬಹುಮತ ಸಾಧಿಸುತ್ತೆ ಎಂದು ಭವಿಷ್ಯ ಹೊರ ಬಿದ್ದಿದೆ. ಮತ್ತೊಂದೆಡೆ ನಾವೇ ಗೆಲ್ಲುತ್ತೇವೆ ಎಂಬ ವಿಶ್ವಾಸದಲ್ಲೇ ಬಿಜೆಪಿ ಕಾದು ಕುಳಿತಿ-ದೆ. ಹೀಗಾಗಿ ಜೆಡಿಎಸ್ ಪಕ್ಷದ ಸಹಾಯ ಹಸ್ತದತ್ತ ಚಿತ್ತ ನೆಟ್ಟಿದ್ದು ಒಳಗೊಳಗೆ ಕಸರತ್ತು ಶುರುವಾಗಿದೆ. ಇನ್ನು ಮತ ಎಣಿಕೆಯ ದಿನ (ಮೇ 10) ವಿಶ್ರಾಂತಿಗಾಗಿ ಸಿಂಗಾಪುರಕ್ಕೆ ತೆರಳುವ ಮೊದಲು ಹೆಚ್ಡಿ ಕುಮಾರಸ್ವಾಮಿ ಮಾತನಾಡಿದ್ದು, ಕ್ಸಿಟ್ ಪೋಲ್ಗಳ ಬಗ್ಗೆ ಮಾತನಾಡಿದ್ದಾರೆ. ಹಾಗೂ ಅವುಗಳಲ್ಲಿ ಹಲವು ಸಮೀಕ್ಷೆಗಳು ಜೆಡಿ-ಎಸ್ ಪಾರ್ಟಿಗೆ ಬಹಳ ಕಡಿಮೆ ಸೀಟ್ಗಳು ಸಿಗುತ್ತವೆ ಎಂದು ತಿಳಿಸಿವೆ. ಆದ್ರೆ ನನಗೆ 50 ಸ್ಥಾನಗಳನ್ನು ಗೆಲ್ಲುವ ವಿಶ್ವಾಸವಿದೆ. ಈ



ಬಾರಿ ನನ್ನ ಷರತ್ತುಗಳನ್ನು ಈಡೇರಿಸಲು ಒಪ್ಪುವ ಪಕ್ಷದೊಂದಿಗೆ ಹೋಗುತ್ತೇನೆ ಎಂದು ಹೆಚ್.ಡಿ. ಕುಮಾರಸ್ವಾಮಿ ಅವರು ತಿಳಿಸಿದ್ದಾರೆ. ಈ ಮೂಲಕ ಮೈತ್ರಿಗೆ ಸಿದ್ಧ ಎಂಬ ಸಂದೇಶ ರವಾನಿಸಿದ್ದಾರೆ.

ಸಮ್ಮಿಶ್ರ ಸರ್ಕಾರಗಳ ಅಡಿಯಲ್ಲಿ ಎರಡು ಬಾರಿ ಮುಖ್ಯಮಂತ್ರಿಯಾದಾಗ, ಒಮ್ಮೆ ಬಿಜೆಪಿ (2006) ಮತ್ತು ನಂತರ ಕಾಂಗ್ರೆಸ್ (2018) ನೊಂದಿಗೆ ಕುಮಾರಸ್ವಾಮಿ ಅವರು ಎದುರಿಸಿದ ಬಿಕ್ಕಟ್ಟುಗಳಿಂದಾಗಿ ಕುಮಾರಸ್ವಾಮಿ ಅವರು ಈ ಬಾರಿ ನಿಟ್ಟ ನಿಲುವನ್ನು ಹೊಂದಿದ್ದಾರೆ. ಹೀಗಾಗಿ ಈ ಬಾರಿ ಮೈತ್ರಿಗೆ ಸಹಿ ಹಾಕುವ ಮೊದಲು ಅವರ ಕೆಲವು ಷರತ್ತುಗಳನ್ನು ಪೂರೈಸಲಾಗುತ್ತದೆಯೇ ಎಂದು ಖಚಿತಪಡಿಸಿಕೊಂಡ ನಂತರವೇ ಆ ಪಕ್ಷಗಳ ಜೊತೆ ಮೈತ್ರಿ ಮಾಡಿಕೊಳ್ಳುವುದು ಎಂಬ ನಿರ್ಧಾರಕ್ಕೆ ಬಂದಿದ್ದಾರೆ. ಸ್ಥೂಲವಾಗಿ ಹೇಳುವುದಾದರೆ, ಮುಖ್ಯಮಂತ್ರಿಯಾಗಿ ಹೆಚ್ಡಿ ಕುಮಾರಸ್ವಾಮಿ ಅವರು ಸರ್ಕಾರವನ್ನು ನಡೆಸಲು ಅವರಿಗೆ ಸ್ವತಂತ್ರ ನೀಡಬೇಕು. ಯಾರ ಅಪ್ಪಣೆಯೂ ತೆಗೆದುಕೊಳ್ಳುವಂತಿ-ರಬಾರದು. ಹಾಗೂ ಯಾರು ಹಿಡಿತಸಾಧಿಸಬಾರದು ಎಂಬುವುದು ಕುಮಾರಸ್ವಾಮಿಯವರ ಷರತ್ತು. ನಿರ್ದಿಷ್ಟವಾಗಿ ಹೇಳುವುದಾದರೆ, ಜೆಡಿಎಸ್ ಶಾಸಕರು ಜಲಸಂಪನ್ಮೂಲ, ವಿದ್ಯುತ್ ಮತ್ತು ಸಾರ್ವಜನಿಕ ಕೆಲಸಗಳಂತಹ ಖಾತೆಗಳನ್ನು ಪಡೆಯಬೇಕೆಂದು ಕುಮಾರಸ್ವಾಮಿ ಬಯಸುತ್ತಾರೆ. ಜೆಡಿಎಸ್ ಪ್ರಣಾಳಿಕೆಯಲ್ಲಿ ನೀಡಿರುವ ಭರವಸೆಗಳನ್ನು ಜಾರಿಗೆ ತರಲು ಸಮ್ಮಿಶ್ರ ಪಕ್ಷದ ಪಾಲುದಾರರು ಅವಕಾಶ ನೀಡಬೇಕು ಎಂದು ಹೆಚ್ಡಿ ಕುಮಾರಸ್ವಾಮಿ ತಮ್ಮ ಷರತ್ತುಗಳ ಬಗ್ಗೆ ವಿವರಿಸಿದ್ದಾರೆ.

ಕುಮಾರಸ್ವಾಮಿ ಅವರಿಗೆ 2018ರಲ್ಲಿ ಕಾಂಗ್ರೆಸ್ ಜೊತೆ ಕೈಜೋಡಿಸಿದಾಗ ರಚನೆಯಾದ ಸಮ್ಮಿಶ್ರ ಸಮನ್ವಯ ಸಮಿತಿ ಬೇಕಿಲ್ಲವಂತೆ. ಹಾಗೂ ತಮ್ಮ ಸಮ್ಮಿಶ್ರ ಪಾಲುದಾರ ಪಕ್ಷವು ಮಂಡ್ಯ ಮತ್ತು ಹಾಸನ ಕ್ಷೇತ್ರಗಳಿಂದ ದೂರವಿರಬೇಕು. ಯಾವುದೇ ಸಿದ್ಧಾಂತಕ್ಕೆ ಸಂಬಂಧಿಸಿದ ನಿರ್ಧಾರಗಳನ್ನು ಚರ್ಚೆಯಿಲ್ಲದೆ ಮಾಡಬಾರದು ಎಂದು ಕುಮಾರಸ್ವಾಮಿ ತಮ್ಮ ಷರತ್ತುಗಳನ್ನು ತಿಳಿಸಿದ್ದಾರೆ.

ಜೆಡಿಎಸ್ ಮೂಲಗಳ ಪ್ರಕಾರ, ಬಿಜೆಪಿ ಮತ್ತು ಕಾಂಗ್ರೆಸ್ ಎರಡೂ ರಾಷ್ಟ್ರೀಯ ನಾಯಕರೊಂದಿಗೆ ಉತ್ತಮ ಬಾಂಧವ್ಯವನ್ನು ಹೊಂದಿರುವ ಪಕ್ಷದ ರಾಷ್ಟ್ರೀಯ ಅಧ್ಯಕ್ಷ ಹೆಚ್ ಡಿ ದೇವೇಗೌಡರು ಸಮ್ಮಿಶ್ರ ರಚನೆಯ ಬಗ್ಗೆ ಅಂತಿಮ ನಿರ್ಧಾರ ತೆಗೆದುಕೊಳ್ಳುತ್ತಾರೆ. ಈ ಬಾರಿಯ ವಿಧಾನಸಭಾ ಚುನಾವಣೆಯ ಪೂರ್ವಭಾವಿಯಾಗಿ ಒಂದೆರೆಡು ಬಾರಿ ಜನಾದೇಶ ಮುರಿದು ಬೀಳಲಿದೆ ಎಂದು ಕುಮಾರಸ್ವಾಮಿ ಭವಿಷ್ಯ ನುಡಿದಿದ್ದರು. 2022 ರ ಡಿಸೆಂಬರ್‌ನಲ್ಲಿ, 2023 ರ ಚುನಾವಣೆಯ ನಂತರ ಕೇಸರಿ ಪಕ್ಷವು ತನ್ನ ಬಳಿಗೆ ಹೋಗಬೇಕಾಗುತ್ತದೆ ಎಂದು ಕುಮಾರಸ್ವಾಮಿ ಬಿಜೆಪಿಗೆ ಎಚ್ಚರಿಕೆ ನೀಡಿದ್ದರು.

ನಂತರ, ಮಾರ್ಚ್‌ನಲ್ಲಿ, ಕುಮಾರಸ್ವಾಮಿ ಅವರು ಬಿಜೆಪಿ ಮತ್ತು ಕಾಂಗ್ರೆಸ್ ಹೈಕಮಾಂಡ್‌ಗಳಿಂದ ಪ್ರಸ್ತಾವನೆಯನ್ನು ಸ್ವೀಕರಿಸಿದ್ದರಂತೆ.

ಇದನ್ನು ದೇವೇಗೌಡರು ಸಹ ದೃಢಪಡಿಸಿದ್ದಾರೆ. ಕರ್ನಾಟಕವು 2018, 2008 ಮತ್ತು 2004 ರಲ್ಲಿ ಜನಾದೇಶ ಯಾವ ಪಕ್ಷಕ್ಕೂ ಬಹುಮತ ಇರಲಿಲ್ಲ, ಇದರ ಪರಿಣಾಮವಾಗಿ ಸಮ್ಮಿಶ್ರ ಸರ್ಕಾರಕ್ಕೆ ಕಾರಣವಾಯಿತು.

## ಯಡಿಯೂರಪ್ಪ ನಿವಾಸದಲ್ಲಿ ಮಹತ್ವದ ಸಭೆ



ಬೆಂಗಳೂರು: ವಿಧಾನಸಭಾ ಚುನಾವಣೆಯ ರಣ ರೋಚಕ ರಿಸಲ್ಟ್‌ಗೆ ಕೌಂಟ್‌ಡೌನ್ ಶುರುವಾಗಿದೆ. 224 ಕ್ಷೇತ್ರದ ಅಭ್ಯರ್ಥಿಗಳ ಹಣೆಬರಹ ನಿರ್ಧ-ರಿಸುವ ಫಲಿತಾಂಶ ಹತ್ತಿರವಾಗುತ್ತಿದ್ದಂತೆ ರಾಜ್ಯ ರಾಜಕೀಯದ ಚಟುವಟಿಕೆಗಳು ಗರಿಗೆದರಿದೆ. ಕಾಂಗ್ರೆಸ್, ಬಿಜೆಪಿ, ಜೆಡಿಎಸ್ ನಾಯಕರು ಮತ್ತೆ ಅಧಿಕಾರಕ್ಕೇರಲು ರಣತಂತ್ರಗಳನ್ನು ಹೆಣೆಯುತ್ತಿದ್ದಾರೆ.

ಚುನಾವಣೋತ್ತರ ಸಮೀಕ್ಷೆಗಳಲ್ಲಿ ಅತಂತ್ರ ಫಲಿತಾಂಶ ಬರಬಹುದು ಅನ್ನೋ ವರದಿಯಾಗಿದೆ. ಹೀಗಾಗಿ ಮತ್ತೆ ಅಧಿಕಾರಕ್ಕೇರಲು ಬಿಜೆಪಿ ನಾಯಕರು ಮುಂದಾಗಿದ್ದಾರೆ. ಮಾಜಿ ಸಿಎಂ ಯಡಿಯೂರಪ್ಪ ಅವರ ನಿವಾಸದಲ್ಲಿ ಕಾಂಗ್ರೆಸ್ಗೆ ಟಕ್ಕರ್ ಕೊಡಲು ಬಿಜೆಪಿ ನಾಯಕರು ಭರ್ಜರಿ ಮೀಟಿಂಗ್ ಮಾಡಿದ್ದಾರೆ.

ಶನಿವಾರದ ಚುನಾವಣೆಯ ಫಲಿತಾಂಶದ ಹಿನ್ನೆಲೆಯಲ್ಲಿ ಸಿಎಂ ಬಸವರಾಜ ಬೊಮ್ಮಾಯಿ ಬೆಂಗಳೂರಿನ ಕುಮಾರಕೃಪಾ ರಸ್ತೆಯಲ್ಲಿರುವ ಬಿಎಸ್‌ವೈ ಅವರ ಕಾವೇರಿ ನಿವಾಸಕ್ಕೆ ಆಗಮಿಸಿದ್ದರು. ಸಿಎಂಗೆ ಬಿಜೆಪಿ ನಾಯಕರಾದ ಲೇಹರ್ ಸಿಂಗ್, ಎ.ಟಿ ರಾಮಸ್ವಾಮಿ, ಮುರುಗೇಶ್ ನಿರಾಣಿ, ಭೈರತಿ ಬಸವರಾಜ ಸಾಥ್ ನೀಡಿದ್ದರು.

ಯಡಿಯೂರಪ್ಪ ನಿವಾಸಕ್ಕೆ ತೆರಳಿದ ಬಿಜೆಪಿ ನಾಯಕರು ಪ್ರಮುಖವಾಗಿ ಶನಿವಾರದ ಚುನಾವಣಾ ಫಲಿತಾಂಶದ ಕುರಿತು ಚರ್ಚೆ ನಡೆಸಿದ್ದಾರೆ.

ಈ ವೇಳೆ ಪಕ್ಷದ ನಾಯಕರಿಗೆ ಯಡಿಯೂರಪ್ಪ ಮಹತ್ವದ ಸೂಚನೆ ನೀಡಿದ್ದಾರೆ. ಕಾಂಗ್ರೆಸ್ ಪಕ್ಷದ ವಿದ್ಯಮಾನಗಳು ಹಾಗೂ ಕಾಂಗ್ರೆಸ್ ನಾಯಕರ ಚಲನವಲನಗಳ ಮೇಲೆ ಸೂಕ್ಷ್ಮವಾದ ನಿಗಾ ಇಡಿ ಎಂದಿದ್ದಾರೆ.

ಪಕ್ಷೇತರರು ಯಾರೆಲ್ಲ ಗೆಲ್ಲುವ ಸಾಧ್ಯತೆ ಇದೆಯೋ ಅವರ ಸಂಪರ್ಕ ಸಾಧಿಸಿ, ವಿಶ್ವಾಸಕ್ಕೆ ಪಡೆದುಕೊಳ್ಳಿ. ಕುಮಾರಸ್ವಾಮಿ ಅವರ ಮೈತ್ರಿ ಆಫರ್ ಮತ್ತು ಷರತ್ತುಗಳ ಬಗ್ಗೆ ಹೈಕಮಾಂಡ್ ಗಮನಕ್ಕೆ ತರಲಾಗಿದೆ. ಜೆಡಿಎಸ್ ಜೊತೆಗಿನ ಮೈತ್ರಿ ಬಗ್ಗೆ ಹೈಕಮಾಂಡ್ ನಾಯಕರೇ ನೋಡಿಕೊಳ್ಳಲಿದ್ದಾರೆ.

ಪ್ರಮುಖವಾಗಿ ಪಕ್ಷ ಬಿಟ್ಟು ಹೋದವರ ಮೇಲೂ ನಿಗಾ ವಹಿಸಿ ಎಂದು ಯಡಿಯೂರಪ್ಪ ಹೇಳಿದ್ದಾರೆ.

## ಈ ಬಾರಿ ಕಪ್ ನಮ್ದೇ ಅಂದ ಬಿಜೆಪಿ
### ಕಪ್ ನೀವೇ ಇಟ್ಕೊಳ್ಳಿ, ಸರಕಾರ ನಮ್ದು: ಕಾಂಗ್ರೆಸ್

ಬೆಂಗಳೂರು : ಈ ಬಾರಿ ರೆಸಾರ್ಟ ರಾಜಕೀಯ ಆಗುವುದಿಲ್ಲ ಮತ್ತು ಅದೆಲ್ಲ ನಡೆಯುವುದೂ ಇಲ್ಲ. ಮತ ಎಣಿಕೆಗೂ ಮುನ್ನ ಎಲ್ಲ ಪಕ್ಷದವರು ತಮ್ಮ ತಮ್ಮಶಾಸಕರನ್ನು ಹಿಡಿದಿಟ್ಟುಕೊಳ್ತಾರೆ ಎಂದು ರಾಜ್ಯ ಕಾಂಗ್ರೆಸ್ ಅಧ್ಯಕ್ಷ ಡಿ ಕೆ ಶಿವಕುಮಾರ ಹೇಳಿದರು.

ಚುಣಾವಣೆಗೆ ಬಿಜೆಪಿ ಎಷ್ಟೇ ಹಣ ಖರ್ಚು ಮಾಡಿರಬಹುದು, ಪ್ರಚಾರಕ್ಕೆ ಎಷ್ಟೇ ನಾಯಕರನ್ನು ಕರೆಸಿರಬಹುದು. ಆದರೆ ಕಾಂಗ್ರೆಸ್‌ಗೆ ಬಹುಮತ ಬರಲಿದೆ ಎಂದರು.

ಶುಕ್ರವಾರ ಬೆಂಗಳೂರಿನಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಯಾವ ಅಧಿಕಾರ ಹಂಚಿಕೆ, ಸಮಿಶ್ರ ಸರಕಾರ ರಚನೆಯೂ ಇಲ್ಲ. ಕಾಂಗ್ರೆಸ್ ನಿಚ್ಚಳ ಬಹುಮತಗಳನ್ನು ಪಡೆದು ಸರ್ಕಾರ ರಚನೆ ಮಾಡಲಿದೆ ಇದು ತಮ್ಮ ದೃಢ ನಂಬಿಕೆ ಎಂದು ಅವರು ಹೇಳಿದರು.



ಅವರ ಎಷ್ಟೇ ನಂಬರ್ ಬಂದರೂ ನಾವೇ ಸರ್ಕಾರ ರಚನೆ ಮಾಡುತ್ತೇವೆ. ಈ ಬಾರಿ ಕಪ್ ನಮ್ಮದೇ ಎಂಬ ಸಚಿವ ಆರ್ ಅಶೋಕ ಅವರ ಹೇಳಿಕೆಗೆ ಅವರು ಪ್ರತಿಕ್ರಯಿಸಿ, “ಆರ್ ಸಿಬಿ ಸ್ಲೋಗನ್ ತರಹಾ ಅಶೋಕ ಅವರೇ ಕಪ್ ಇಟ್ಟುಕೊಳ್ಳಲಿ. ನಾವು ಸರ್ಕಾರ ಇಟ್ಟುಕೊಳ್ಳುತ್ತೇವೆ. ಜನಪರ ಆಡಳಿತ ನೀಡುತ್ತೇವೆ” ಎಂದು ಡಿಕೆಶಿ ಉತ್ತರಿಸಿದರು.

ಚುನಾವಣ್ಣೋತ್ತರ ಸಮೀಕ್ಷೆ ಕು-ರಿತು ಮಾತನಾಡಿದ ಶಿವಕುಮಾರ, ಎಕ್ಸಿಟ್ ಪೋಲ್ ಬಗ್ಗೆ ನನಗೆ ನಂಬಿಕೆಯಿಲ್ಲ. ಕಾಂಗ್ರೆಸ್ ಪರವಾಗಿ ವರದಿ ಬಂದಿರುವುದಕ್ಕೆ ಸಂತೋಷ. ನನ್ನ ನಂಬಿಕೆ 141 ಸ್ಥಾನಗಳು. ಈ ಬಾರಿ ಕಾಂಗ್ರೆಸ್ ಬಹುಮತದಿಂದ ಅಧಿಕಾರಕ್ಕೆ ಬರಲಿದೆ ಎಂದರು.

ದಿನೇಶ ಗುಂಡೂರಾವ್ ಅವರ ಕೆಪಿಸಿಸಿ ಅಧ್ಯಕ್ಷ ಸ್ಥಾನದ ಅವಧಿ ಮುಕ್ತಾಯವಾದಾಗ ಸೋನಿಯಾ ಗಾಂಧಿಯವರು ನನಗೆ ಜವಾಬ್ದಾರಿ ಕೊಟ್ಟರು. ನಾನು ಜವಾಬ್ದಾರಿ ಪಡೆದ ಬಳಿಕ ಒಂದು ದಿನವೂ ವಿಶ್ರಾಂತಿ ಪಡೆದಿಲ್ಲ, ನಾನು ಪಕ್ಷಕ್ಕಾಗಿ ದುಡಿದಿದ್ದೇನೆ.

ಒಂದು ದಿನವೂ ಮಲಗಿಲ್ಲ, ಮಲಗಲೂ ಬಿಟ್ಟಿಲ್ಲ. ಹಿರಿಯರು, ಕಿರಿಯರು ಎಲ್ಲರೂ ಸಹಕಾರ ನೀಡಿದ್ದಾರೆ. ನನಗೆ ವಿಶ್ವಾಸವಿದೆ. ಕಾಂಗ್ರೆಸ್ ಈ ಬಾರಿ ಬಹುಮತದಿಂದ ಅಧಿಕಾರಕ್ಕೆ ಬರಲಿದೆ. ನಾವು ಉತ್ತಮವಾದ ಆಡಳಿತ ಕೊಡುತ್ತೇವೆ ಎಂದರು.

## ಕಾಂಗ್ರೆಸ್ ಸರ್ಕಾರ ರಚಿಸುವುದು ನಿಶ್ಚಿತ: ಸತೀಶ್ ಜಾರಕಿಹೊಳಿ

ಬೆಳಗಾವಿ: ನಾನು ಮುಂಚೆಯೇ 120 ಸೀಟು ಗೆಲ್ಲುತ್ತೇವೆ ಎಂದು ಹೇಳಿದ್ದೆ, 120ಕ್ಕೂ ಹೆಚ್ಚು ಅಭ್ಯರ್ಥಿಗಳು ಗೆಲುವು ಸಾಧಿಸಲಿದ್ದು, ಈ ಭಾರೀ ಕಾಂಗ್ರೆಸ್ ಸರ್ಕಾರ ರಚಿಸುವುದು ನಿಶ್ಚಿತವಿದೆ ಎಂದು ಕೆಪಿಸಿಸಿ ಕಾರ್ಯಾಧ್ಯಕ್ಷ, ಶಾಸಕ ಸತೀಶ್ ಜಾರಕಿಹೊಳಿ ಅವರು ಹೇಳಿದರು.

ನಗರದ ಕಾಂಗ್ರೆಸ್ ಭವನದಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಸಿಎಂ ಯಾರು ಆಗುತ್ತಾರೆ ಎನ್ನುವುದಕ್ಕಿಂತ ರಾಜ್ಯದಲ್ಲಿ ಕಾಂಗ್ರೆಸ್ ಸರ್ಕಾರ ಬರುವುದು ಮುಖ್ಯವಿದೆ. ಬಹುಮತ ಸಿಕ್ಕ ನಂತರ ಎಲ್ಲಾ



ಶಾಸಕರು ಸೇರಿ ಸಿಎಂ ಆಯ್ಕೆ ಬಗ್ಗೆ ಚರ್ಚೆ ನಡಸಲಿದ್ದಾರೆ ಎಂದರು.

ಮೈತ್ರಿಗೆ ನಾವು ಸಿದ್ಧ ಎಂಬ ಹೆಚ್.ಡಿ. ಕುಮಾರಸ್ವಾಮಿ ಹೇಳಿಕೆ ವಿಚಾರವಾಗಿ ಪ್ರತಿಕ್ರಿಯಿಸಿದ ಅವರು, ಒಳ್ಳೆಯ ಸರ್ಕಾರದ ಆಡಳಿತ ಮಾಡಲು ಒಳ್ಳೆಯದಾಗುತ್ತದೆ. ದೇವೇಗೌಡರ ದ್ದು, ಕುಮಾರಸ್ವಾಮಿ ಸಲಹೆ ಇದ್ದರೆ ಒಳ್ಳೆಯದು. ಬಿಜೆಪಿಯವರು ಆಪರೇಷನ್ ಕಮಲ ಮಾಡುವುದು ಅವರ ಹಗಲುಗನಸಾಗಿದೆ. ಅತಂತ್ರ ಫಲಿತಾಂಶ ನೂರಕ್ಕೆ ನೂರರಷ್ಟು ಬರಲ್ಲ ಎಂದು ಹೇಳಿದರು.


ಬಿಜೆಪಿ ವಿರೋಧಿ ಅಲೆ, ಬೆಲೆ ಏರಿಕೆ, 4 ವರ್ಷದಿಂದ ಯಾವುದೇ ಅಭಿವೃದ್ಧಿ ಯೋಜನೆಗಳಿಲ್ಲ. ವಿಶೇಷವಾಗಿ 40 ಪರ್ಸೆಂಟ್ ಸರ್ಕಾದ ಇಡೀ ವಿಶ್ವದಲ್ಲೇ ಫೇಮಸ್ ಆಯ್ತು. ರಾಷ್ಟ್ರೀಯ ವಾಹಿನಿಗಳಲ್ಲೂ ಸಹ 40 ಪರ್ಸೆಂಟ್ ಸರ್ಕಾರ ಅಂತಾ ಹೇಳುತ್ತಾರೆ. ನಮ್ಮ ನಾಯಕರು ಕಲೆಕ್ಟೀವ್ ಆಗಿ ಪ್ರಚಾರ ಮಾಡಿದರು. ರಾಹುಲ್ ಗಾಂಧಿ, ಪ್ರಿಯಾಂಕಾ ಗಾಂಧಿ, ಡಿಕೆಶಿ, ಸಿದ್ದರಾಮಯ್ಯ ಎಲ್ಲರೂ ತಮ್ಮ ತಮ್ಮ ಭಾಗದಲ್ಲಿ ಒಳ್ಳೆಯ ಪ್ರಚಾರ ಮಾಡಿದರು ಎಂದರು.

ಕಡಿಮೆ ಕ್ಷೇತ್ರ ಬಂದರೂ ಸರ್ಕಾರ ಮಾಡ್ತೀವಿ ಎಂಬ ಆರ್. ಅಶೋಕ್ ಹೇಳಿಕೆ ವಿಚಾರವಾಗಿ ಪ್ರತಿಕ್ರಿಯಿಸಿ, ಆಪರೇಷನ್ ಕಮಲ ಮಾಡಲು ಆಗಲ್ಲ, ಬಹಳ ಗ್ಯಾಪ್ ಇದೆ. ಸರ್ಕಾರ ಮಾಡಲು 30 ರಿಂದ 40 ಸೀಟ್ ಅವರಿಗೆ ಬೇಕಾಗುತ್ತದೆ. ಆದರೆ ಅದು ಅಸಾಧ್ಯ. ವಿಪಕ್ಷದಲ್ಲಿ ಕುಳಿತು ಒಳ್ಳೆಯ ಸಲಹೆ ನೀಡುವುದು ಸೂಕ್ತ. ಬಿಜೆಪಿ 75 ರಿಂದ 80 ಕ್ಷೇತ್ರ ಮಾತ್ರ ಬರುತ್ತೆ. ಅತಂತ್ರ ಫಲಿತಾಂಶ ನೂರಕ್ಕೆ ನೂರು ಬರಲ್ಲ. ಕಾಂಗ್ರೆಸ್ ಸರ್ಕಾರ ರಚನೆ ಆಗಿಯೇ ಆಗುತ್ತೆ ಎಂದು ವಿಶ್ವಾಸ ವ್ಯಕ್ತಪಡಿಸಿದರು. }2ನೇ ಪುಟಕ್ಕೆ

## ನೇಮಕಾತಿ: ರೈಲ್ವೆಯಿಂದ ಅಗ್ನಿವೀರರಿಗೆ ಶೇ 15ರಷ್ಟು ಮೀಸಲಾತಿ

ನವದೆಹಲಿ: ವಿವಿಧ ಇಲಾಖೆಗಳಲ್ಲಿನ ನಾನ್ ಗೆಜೆಟೆಡ್ ಹುದ್ದೆಗಳ ಭರ್ತಿಗೆ ನಡೆಯುವ ನೇರ ನೇಮಕಾತಿಯಲ್ಲಿ ರೈಲ್ವೆಯು ಅಗ್ನಿವೀರರಿಗೆ ಶೇ 15ರಷ್ಟು ಒಟ್ಟು ಮೀಸಲಾತಿ, ವಯೋಮಿತಿಯಲ್ಲಿ ಸಡಿಲಿಕೆ ಹಾಗೂ ದೈಹಿಕ ಪರೀಕ್ಷೆಯಿಂದ ವಿನಾಯಿತಿ ನೀಡಲಿದೆ ಎಂದು ಮೂಲಗಳು ಗುರುವಾರ ಹೇಳಿವೆ.

ಅಗ್ನಿವೀರರಿಗೆ ಈ ಸೌಲಭ್ಯಗಳನ್ನು ನೀಡುವುದಕ್ಕೆ ಸಂಬಂಧಿಸಿ ಕ್ರಮ ಕೈಗೊಳ್ಳುವಂತೆ ರೈಲ್ವೆ ವಲಯಗಳ ಪ್ರಧಾನ ವ್ಯವಸ್ಥಾಪಕರಿಗೆ ರೈಲ್ವೆ ಮಂಡಳಿ ಪತ್ರ ಬರೆದಿದೆ.



ಅಗ್ನಿವೀರರಿಗಾಗಿ ರೈಲ್ವೆ ಭದ್ರತಾ ಪಡೆಯಲ್ಲಿ (ಆರ್ಪಿಎಫ್) ಕೂಡ ಮೀಸಲಾತಿ ನೀತಿಯನ್ನು ಜಾರಿಗೆ ತರಲಾಗುತ್ತದೆ ಎಂದು ಇವೇ ಮೂಲಗಳು ಹೇಳಿವೆ.

ಮೊದಲ ಬ್ಯಾಚ್‌ನ ಅಗ್ನಿವೀರರಿಗೆ ವಯೋಮಿತಿಯಲ್ಲಿ ಐದು ವರ್ಷ ಹಾಗೂ ನಂತರದ ಬ್ಯಾಚ್‌ಗಳ ಅಗ್ನಿವೀರರಿಗೆ ಮೂರು ವರ್ಷಗಳಷ್ಟು ಸಡಿಲಿಕೆ ನೀಡಲಾಗುವುದು. ರೈಲ್ವೆಯ ವಿವಿಧ ವಿಭಾಗಗಳಲ್ಲಿನ ಹಂತ–1 ಹಾಗೂ ಹಂತ–2 ಹಾಗೂ ಅದಕ್ಕೂ ಮೇಲ್ಪಟ್ಟ ಹುದ್ದೆಗಳಿಗೆ ಈ ಸೌಲಭ್ಯ ನೀಡಲಾಗುತ್ತದೆ ಎಂದು ಮೂಲಗಳು ಹೇಳಿವೆ.

## ಚುನಾವಣೆ ಮುಗಿದ ಬೆನ್ನಲ್ಲೇ ವಿದ್ಯುತ್ ದರ ಏರಿಕೆ ಶಾಕ್: ಯೂನಿಟ್ ಗೆ 70 ಪೈಸೆ ಹೆಚ್ಚಳ

ಬೆಂಗಳೂರು: ಪ್ರತಿ ಯೂನಿಟ್‌ಗೆ 70 ಪೈಸೆ ದರ ಹೆಚ್ಚಳಕ್ಕೆ ಕರ್ನಾಟಕ ವಿದ್ಯುತ್ ನಿಯಂತ್ರಣ ಆಯೋಗ ಒಪ್ಪಿಗೆ ನೀಡಿದೆ.

ಏಪ್ರಿಲ್ 1ರಿಂದ ಪೂರ್ವಾನ್ವಯವಾಗುವಂತೆ ಪ್ರತಿ ಯೂನಿಟ್ ಮೇಲೆ ರೂ 1.46 ಹೆಚ್ಚು ಮಾಡುವಂತೆ ಎಸ್ಕಾಂಗಳು ಬೇಡಿಕೆ ಸಲ್ಲಿಸಿದ್ದವು.

ಹೊಸ ದರ ಜಾರಿ ಹಿನ್ನೆಲೆಯಲ್ಲಿ ಗ್ರಾಹಕರ ಪ್ರತಿ ತಿಂಗಳ ಬಿಲ್‌ನಲ್ಲಿ ಶೇ 8.31. ರಷ್ಟು ಹೆಚ್ಚಳವಾಗಲಿದೆ.

ಪ್ರತಿ ಯುನಿಟ್ ಗೆ 146 ಪೈಸೆ ಹೆಚ್ಚಿಸುವ ಕುರಿತಂತೆ ಎಲ್ಲ ಎಸ್ಕಾಂ ಗಳು ಅನುಮತಿ ಕೇಳಿದ್ದವು. ಆದರೆ ಪ್ರತಿ ಯುನಿಟ್ ಗೆ 70 ಪೈಸೆ ಬೆಲೆ ಏರಿಕೆ ಮಾಡಲು ಕರ್ನಾಟಕ ವಿದ್ಯುಚ್ಛಕ್ತಿ ನಿಯಂತ್ರಣ ಆಯೋಗ ಅನುಮತಿ ನೀಡಿದೆ. ಈ ಹೊಸ ದರವು ಏಪ್ರಿಲ್ 1ರಿಂದಲೇ ಪೂರ್ವಾನ್ವಯ ಆಗುವಂತೆ ಜಾರಿಗೆ ಬರಲಿದೆ.

ತಾವು ಅಧಿಕಾರಕ್ಕೆ ಬಂದರೆ ಉಚಿತ ವಿದ್ಯುತ್ ನೀಡಲಾಗುವುದು ಕರ್ನಾಟಕ ವಿಧಾನಸಭಾ ಚುನಾವಣೆ ಹಿನ್ನೆಲೆಯಲ್ಲಿ ಮತ ಯಾಚನೆ ವೇಳೆ ಕಾಂಗ್ರೆಸ್ ಆಶ್ವಾಸನೆ ನೀಡಿತ್ತು. ಯಾವ ಪಕ್ಷ ಅಧಿಕಾರಕ್ಕೆ ಬರಲಿದೆ ಎಂಬ ಅಸಲಿಯತ್ತು ನಾಳೆ ಬಹಿರಂಗಗೊಳ್ಳಲಿದೆ.

## ಬೈಕ್‌ನಿಂದ ಪೆಟ್ರೋಲ್ ತೆಗೆದು ಬೆಂಕಿ ಹಚ್ಚಿದ ಮಹಿಳೆ

ದೆಹಲಿ: ಮನೆ ಮುಂದೆ ನಿಲ್ಲಿಸಿದ್ದ ಬೈಕ್‌ಗೆ ಮಹಿಳೆ ಪೆಟ್ರೋಲ್ ಸುರಿದು ಬೆಂಕಿ ಹಚ್ಚಿದ ಘಟನೆಯೊಂದು ದೆಹಲಿಯ ಆಗ್ನೇಯ ಜಿಲ್ಲೆಯ ಜೈತ್‌ಪುರ ಪೊಲೀಸ್ ಠಾಣಾ ವ್ಯಾಪ್ತಿಯಲ್ಲಿ ನಡೆದಿದೆ. ಈ ಕುರಿತು ವರದಿಯಾಗಿದೆ.

ಮಹಿಳೆಯ ಈ ಕೃತ್ಯವು ಸಿಸಿಟಿವಿಯಲ್ಲಿ ಸೆರೆಯಾಗಿದ್ದು, ಶುಕ್ರವಾರ ಬೆಳಗಿನ ಜಾವ 2:42ರ ಸುಮಾರಿಗೆ ಘಟನೆ ನಡೆದಿದೆ.

ಮಹಿಳೆ ಈ ರೀತಿ ಮಾಡಲು ಕಾರಣವೇನು ಎಂಬುದು ತಿಳಿದು ಬಂದಿಲ್ಲ. ಸದ್ಯ ಈ ವಿಡಿಯೋ ಎಲ್ಲೆಡೆ ಹರಿದಾಡುತ್ತಿದೆ.

## ಪ್ರಮಾಣವಚನ ಕಾರ್ಯಕ್ರಮ ಸುವರ್ಣ ವಿಧಾನಸೌಧದಲ್ಲಿ ನಡೆಸಲು ಆಗ್ರಹ



ಬೆಳಗಾವಿ: 2023ರ ವಿಧಾನಸಭಾ ಚುನಾವಣೆಯಲ್ಲಿ ಆಯ್ಕೆಯಾದ ಜನಪ್ರತಿನಿಧಿಗಳ ಪ್ರಮಾಣ ವಚನ ಕಾರ್ಯಕ್ರಮವನ್ನು ಇಲ್ಲಿನ ಸುವರ್ಣ ವಿಧಾನಸೌಧದಲ್ಲಿ ಆಯೋಜಿಸಬೇಕು ಎಂದು ಆಗ್ರಹಿಸಿ ಕರ್ನಾಟಕ ರಾಜ್ಯ ರೈತ ಸಂಘ ಹಾಗೂ ಹಸಿರು ಸೇನೆಯ ಮುಖಂಡರು ಜಿಲ್ಲಾಧಿಕಾರಿ ಕಚೇರಿ ಆವರಣದಲ್ಲಿ ಶುಕ್ರವಾರ ಪ್ರತಿಭಟನೆ ನಡೆಸಿದರು. ಬಳಿಕ, ಜಿಲ್ಲಾಡಳಿತ ಮೂಲಕ ರಾಜ್ಯಪಾಲರಿಗೆ ಮನವಿ ಸಲ್ಲಿಸಿದರು.ಹೊಸದಾಗಿ ಶಾಸಕರಾದವರು ಮುಂದಿನ 5 ವರ್ಷಗಳವರೆಗೆ ಭ್ರಷ್ಟಾಚಾರ ಮುಕ್ತ ಆಡಳಿತ ನೀಡುತ್ತೇವೆ. ರೈತರ ಪರವಾಗಿ ಹೋರಾಡುತ್ತೇವೆ ಎಂದು ಪ್ರತಿಜ್ಞೆ ಮಾಡಬೇಕು. ಇಲ್ಲದಿದ್ದರೆ ಮುಂದಿನ ಅಧಿವೇಶನ ವೇಳೆ, ಪ್ರತಿಭಟನೆ ನಡೆಸಲಾಗುವುದು ಎಂದು ಎಚ್ಚರಿಕೆ ಕೊಟ್ಟರು.


ಪ್ರಕಾಶ ನಾಯಕ, ಸೋಮು ರೈನಾಪೂರ, ರವೀಂದ್ರ ಸೂಪಣ್ಣವರ, ಮಾಧವರಾವ್ ರಾಣೆ, ವಿಶ್ವನಾಥ ಕೆ, ರಂಗಪ್ಪ ಗಂಗಾರಡ್ಡಿ, ಶೇಖರ ತೀಲಾರಿ ಇದ್ದರು.

## ದಕ್ಷಿಣ ಆಫ್ರಿಕಾದಲ್ಲಿ ಬಳಸಿದ ಇವಿಎಂ ಬಳಸಿಲ್ಲ

ನವದೆಹಲಿ: ಮೇ 10ರಂದು ಕರ್ನಾಟಕ ವಿಧಾನಸಭೆಗೆ ನಡೆದ ಚುನಾವಣೆಯಲ್ಲಿ ಬಳಸಲಾದ ವಿದ್ಯುನ್ಮಾನ ಮತ ಯಂತ್ರಗಳನ್ನು (ಇವಿಎಂ) ಈ ಮೊದಲು ದಕ್ಷಿಣ ಆಫ್ರಿಕಾದಲ್ಲಿ ಉಪಯೋಗಿಸಲಾಗಿತ್ತು ಎಂಬ ಕಾಂಗ್ರೆಸ್ ಪಕ್ಷದ ಆರೋಪವನ್ನು ಕೇಂದ್ರ ಚುನಾವಣಾ ಆಯೋಗ (ಇಸಿಐ) ಅಲ್ಲಗಳೆದಿದೆ.

ಇಂತಹ ಸುಳ್ಳು ವದಂತಿಗಳನ್ನು ಹರಡುವವರನ್ನು ಸಾರ್ವಜನಿಕ ವಾಗಿ ಬಹಿರಂಗಪಡಿಸುವಂತೆ ಕಾಂಗ್ರೆಸ್‌ಗೆ ಸೂಚಿಸಿದೆ.

ಈ ಕುರಿತು ಪಕ್ಷದ ಮುಖಂಡ ರಣದೀಪ್ ಸಿಂಗ್ ಸುರ್ಜೇವಾಲಾ ಅವ-ರಿಗೆ ಪತ್ರ ಬರೆದಿರುವ ಆಯೋಗ “ಎಲೆಕ್ಟ್ರಾನಿಕ್ಸ್ ಕಾರ್ಪೊರೇಷನ್ ಆಫ್ ಇಂಡಿಯಾ ಲಿಮಿಟೆಡ್ (ಇಸಿಐ-ಎಲ್) ತಯಾರಿಸಿರುವ ಹೊಸ ಇವಿ-ಎಂಗಳನ್ನು ಕರ್ನಾಟಕದಲ್ಲಿ ನಡೆದ ಚುನಾವಣೆಯಲ್ಲಿ ಬಳಕೆ ಮಾಡಲಾಗಿದೆ” ಎಂದು ಸ್ಪಷ್ಟಪಡಿಸಿದೆ. ಇವಿಎಂಗಳನ್ನು



ದಕ್ಷಿಣ ಆಫ್ರಿಕಾಕ್ಕೆ ಕಳುಹಿಸಿಲ್ಲ/ ಇಸಿ ಯಾವುದೇ ದೇಶದಿಂದ ಇವಿಎಂಗಳನ್ನು ಆಮದು ಮಾಡಿಕೊಂಡಿಲ್ಲ. ದಕ್ಷಿಣ ಆಫ್ರಿಕಾದಲ್ಲಿ ಚುನಾವಣೆಗಳಲ್ಲಿ ಇವಿ-ಎಂಗಳನ್ನು ಬಳಸಲಾಗುವುದಿಲ್ಲ ಎಂಬ ಅಂಶವನ್ನು ದಕ್ಷಿಣ ಆಫ್ರಿಕಾದ ಚುನಾವಣಾ ಆಯೋಗದ ವೆಬ್‌ಸೈಟ್‌ನಲ್ಲಿ ರಾಷ್ಟ್ರೀಯ ಮತ್ತು ಪ್ರಾಂತೀಯ ಚುನಾವಣೆ ಇಲ್ಲಸ್ಟ್ರೇಟೆಡ್ ಬುಕ್‌ಲೆಟ್ ಮೂಲಕ ಸುಲಭವಾಗಿ ಪರಿಶೀಲಿಸಬಹುದು” ಎಂದು ಆಯೋಗ ಸ್ಪಷ್ಟಪಡಿಸಿದೆ.

ಇವಿಎಂಗಳ ಕುರಿತಾಗಿ ತಪ್ಪು ಮಾಹಿತಿ ಹಬ್ಬಿಸುತ್ತಿರುವ ಮೂಲಗಳನ್ನು ಪಕ್ಷ ಬಹಿರಂಗಪಡಿಸಬೇಕು.

ಈ ಕುರಿತು ಕ್ರಮ ಕೈಗೊಳ್ಳಲಾಗಿದೆ ಎಂಬುದನ್ನು ಮೇ 15ರ ಸಂಜೆ 5 ಗಂಟೆ ಒಳಗೆ ಕಾಂಗ್ರೆಸ್ ದೃಢಪಡಿಸಬೇಕು. ಮತಯಂತ್ರಗಳನ್ನು ದಕ್ಷಿಣ ಆಫ್ರಿಕಾಕ್ಕೆ ಕಳುಹಿಸಿರಲಿಲ್ಲ.

ಆ ರಾಷ್ಟ್ರವು ಚುನಾವಣೆಯಲ್ಲಿ ಮತಯಂತ್ರಗಳನ್ನು ಬಳಕೆ ಮಾಡುವುದೂ ಇಲ್ಲ ಎಂದು ಆಯೋಗ ಇನ್ನೊಂದು ಬಾರಿ ಸ್ಪಷ್ಟಪಡಿಸಿದೆ.

ಇಸಿಐಎಲ್ ತಯಾರಿಸಿರುವ ಹೊಸ ಮತಯಂತ್ರಗಳನ್ನು ಮಾತ್ರ ಕರ್ನಾಟಕದಲ್ಲಿ ಬಳಕೆ ಮಾಡಲಾಗುತ್ತದೆ ಎಂಬ ಬಗ್ಗೆ ಕಾಂಗ್ರೆಸ್ ಪಕ್ಷಕ್ಕೆ ಮಾಹಿತಿ ಇತ್ತು.

ಇವಿಎಂಗಳ ಸಾಗಣೆ ಹಾಗೂ ಅವುಗಳ ಬಳಕೆಯ ಪ್ರತಿ ಹಂತದಲ್ಲಿಯೂ ಕಾಂಗ್ರೆಸ್ ಪ್ರತಿನಿಧಿಗಳು ಇದ್ದರು ಎಂದು ಆಯೋಗ ಹೇಳಿದೆ.

ಭಾರತದ ಚುನಾವಣಾ ಆಯೋಗದ ದಾಖಲೆಗಳ ಪ್ರಕಾರ, ಕರ್ನಾಟಕ ಚುನಾವಣೆಗೆ ಬಳಸಲಾಗುವ ಇವಿಎಂಗಳಿಗೆ ಸಂಬಂಧಿಸಿದ ಮೇಲಿನ ಪ್ರಮಾಣಿತ ಕಾರ್ಯಾಚರಣಾ ಕಾರ್ಯ ವಿಧಾನವು ಪ್ರತಿ ಹಂತದಲ್ಲೂ ಐಎನ್‌ಸಿ ಪ್ರತಿನಿಧಿಗಳು ಭಾಗವಹಿಸಿದ್ದ ದೃಢೀಕರಣವನ್ನು ಹೊಂದಿದೆ ಎಂದು ತಿಳಿಸಿದೆ.

ದಕ್ಷಿಣ ಆಫ್ರಿಕಾದಲ್ಲಿ ಬಳಸಲಾಗಿದ್ದ ಮತಯಂತ್ರಗಳನ್ನೇ ಕರ್ನಾಟಕ ಚುನಾವಣೆಯಲ್ಲಿ ಮರು ಬಳಕೆ ಮಾಡಲಾಗುತ್ತಿದೆ ಎಂಬ ಬಗ್ಗೆ ಆತಂಕ ವ್ಯಕ್ತಪಡಿಸಿ ಕಾಂಗ್ರೆಸ್ ಮೇ 8ರಂದು ಆಯೋಗಕ್ಕೆ ಪತ್ರ ಬರೆದು, ಕೆಲ ಸ್ಪಷ್ಟೀಕರಣ ಕೇಳಿತ್ತು. ಈ ಆರೋಪಗಳಿಗೆ ಚುನಾವಣಾ ಆಯೋಗ ಪ್ರತಿಕ್ರಿಯಿಸಿದೆ.

ಇವಿಎಂ ಪ್ರೋಟೋಕಾಲ್ ಪ್ರಕಾರ, “ಎಲ್ಲ ಮಾನ್ಯತೆ ಪಡೆದ ರಾಷ್ಟ್ರೀಯ ಮತ್ತು ರಾಜ್ಯ ಪಕ್ಷಗಳ ಪ್ರತಿನಿಧಿಗಳಿಗೆ ಇವಿ-ಎಂಗಳನ್ನು ಸ್ವೀಕರಿಸುವ ಸ್ಥಳದ ಬಗ್ಗೆ ತಿಳಿಸಲಾಗುತ್ತದೆ ಮತ್ತು ಪ್ರಕ್ರಿಯೆಯನ್ನು ವಿಡಿಯೋಗ್ರಾಫ್ ಮಾಡಲಾಗುತ್ತದೆ.

ವಾಸ್ತವವಾಗಿ, ಇವಿಎಂಗಳೊಂದಿಗೆ ಸಂಪರ್ಕ ಹೊಂದಿದ ಪ್ರತಿಯೊಂದು ಪ್ರಕ್ರಿಯೆಯಲ್ಲಿ ಪಕ್ಷದ ಪ್ರತಿನಿಧಿಗಳು ಹಾಜರಿರಲು ಕೇಳಲಾಗುತ್ತದೆ. ಇದು ಯಾದೃಚ್ಛಿಕಗೊಳಿಸುವಿಕೆ ಅಣಕು ಮತದಾನದ ಕಾರ್ಯಾರಂಭ” ಎಂದು ಆಯೋಗ ಹೇಳಿದೆ.

## ಮುಖ್ಯಮಂತ್ರಿಯಾಗೋ ಆಸೆ ಬಿಚ್ಚಿಟ್ಟ ಬಿಜೆಪಿ ನಾಯಕ

ಬೆಂಗಳೂರು: ರಾಜ್ಯ ವಿಧಾನಸಭಾ ಚುನಾವಣಾ ಮತದಾನ ಬುಧವಾರ ಸಂಜೆ ಅಂತ್ಯಗೊಂಡಿದೆ. ಈ ನಡುವೆ ಪ್ರಕಟಗೊಂಡ ಎಕ್ಸಿಟ್ ಪೋಲ್ ನಿಂದಾಗಿ ಕಾಂಗ್ರೆಸ್ ಸರ್ಕಾರ ರಚನೆಸುವ ಪ್ಲಾನ್ ನಡೆಸಿದ್ದು, ಈ ಬಾರೀ ಸಮೀಕ್ಷೆಯಲ್ಲಿ ಬಿಜೆಪಿಗೆ ಬಾರೀ ಅಘಾತವಾಗಿದೆ.



ಈಗಾಗಲೇ ಬಹುತೇಕ ಎಕ್ಸಿಟ್ ಪೋಲ್‌ಗಳು ಈ ಬಾರಿಯೂ ಅತಂತ್ರ ಫಲಿತಾಂಶ ಬರುತ್ತದೆ ಎಂದು ಭವಿಷ್ಯ ನುಡಿದಿವೆ. ಆದ್ದರಿಂದ ರಾಜ್ಯದ ಎರಡು ಪ್ರಮುಖ ಪಕ್ಷಗಳಾಗಿರುವ ಕಾಂಗ್ರೆಸ್ ಮತ್ತು ಬಿಜೆಪಿ ಈಗಾಗಲೇ ಮುಂದಿನ ಸರ್ಕಾರ ರಚನೆಯ ಕಸರತ್ತು ಶುರುಮಾಡಿದ್ದು, ಜೆಡಿಎಸ್ ನಾಯಕರಿಗೆ ತಲೆಬಿಸಿ ಆಗಿದೆ.

ಫಲಿತಾಂಶ ಮೇ 13ರ (ಶನಿವಾರ) ಪ್ರಕಟವಾಗಲಿದ್ದು, ಇದರ ನಡುವೆಯೇ ಹಲವು ಅಭ್ಯರ್ಥಿಗಳು ಸೋಲು ಗೆಲುವಿನ ಲೆಕ್ಕಾಚಾರ ಶುರು ಮಾಡಿದ್ದಾರೆ. ಇನ್ನೂ ಸಮೀಕ್ಷೆಯಲ್ಲಿ ಬಿಜೆಪಿಗೆ ಹಿನ್ನಡೆಯಾದರೂ ಮುಂದಿನ ಮುಖ್ಯಮಂತ್ರಿ ವಿಚಾರವಾಗಿ ಚರ್ಚೆಯಾಗುತ್ತಿದೆ.

ಹೌದು ಸಚಿವ ಆರ್ ಅಶೋಕ್ ಮುಖ್ಯಮಂತ್ರಿಯಾಗುವ ಆಸೆಯನ್ನ ವ್ಯಕ್ತಪಡಿಸಿದ್ದಾರೆ.

ನಾನು ಈ ಎಕ್ಸಿಟ್ ಪೋಲ್ ಸಮೀಕ್ಷೆಗಳನ್ನ ನಂಬುವುದಿಲ್ಲ, ನಮ್ಮ ನಮ್ಮ ಸಮೀಕ್ಷೆ ಪ್ರಕಾರ ಬಿಜೆಪಿಗೆ ಸ್ಪಷ್ಟ ಬಹುಮತ ಬರೋದು ನಿಶ್ಚಿತ . ಅಂತಿಮವಾಗಿ ಬಿಜೆಪಿ ಪಕ್ಷದ ಮೇಲೆ ವಿಶ್ವಾಸವಿದೆ, ರಾಜ್ಯದ ಜನತೆ ಅಂತಿಮವಾಗಿ ತಿರ್ಮಾನ ಮಾಡುತ್ತಾರೆ ಎಂದು ಹೇಳಿದರು.

ಕಾಂಗ್ರೆಸ್ ನಾಯಕರು ಏನು ಬೇಕಾದರೂ ಮಾಡಲಿ, ಅಂತಿಮವಾಗಿ ಸರ್ಕಾರ ರಚನೆ ಮಾಡುವುದು ನಾವೇ, ಮುಖ್ಯಮಂತ್ರಿ ಆಗುವ ಅವಕಾಶ ನನಗೂ ಬರಬಹುದು.

ಎಲ್ಲರಿಗೂ ಒಂದೊಂದು ಅವಕಾಶ ಸಿಗುತ್ತದೆ. ಯಾರು ನಿರೀಕ್ಷೆ ಮಾಡದಂತೆ ಕಳೆದ ಬಾರಿ ಬಸವರಾಜ ಬೊಮ್ಮಾಯಿ ಆಗಿಲ್ವಾ? ಹಾಗೇ ನನಗೂ ಒಂದು ಅವಕಾಶ ಸಿಗಬಹುದು.

ಆದರೆ ಅಂತಿಮವಾಗಿ ಈ ಬಗ್ಗೆ ಸಂಸದೀಯ ಮಂಡಲಿ ತೀರ್ಮಾನ ಮಾಡುತ್ತದೆ ಎಂದು ಸಚಿವ ಆರ್ ಅಶೋಕ್ ವಿಶ್ವಾಸ ವ್ಯಕ್ತಪಡಿಸಿದರು.

# ಕಾಂಗ್ರೆಸ್ ಸರ್ಕಾರ ರಚಿಸುವುದು ನಿಶ್ಚಿತ: ಸತೀಶ್ ಜಾರಕಿಹೊಳಿ

}ಮೊದಲನೇ ಪುಟದಿಂದ

ಪ್ರಧಾನಿ ಮೋದಿ ಪ್ರಚಾರ ವಿಚಾರವಾಗಿ ಪ್ರತಿಕ್ರಿಯಿಸಿದ ಅವರು, ಕರ್ನಾಟಕದ್ದು ಬೇರೆ, ಲೋಕಸಭಾ ಚುನಾವಣೆ ಬೇರೆ. ಜನ ಅಭಿವೃದ್ಧಿ ನೋಡ್ತಾರೆ. ಬೆಲೆ ಏರಿಕೆ ಆಗಲು ಮೋದಿ ಕಾರಣ. ಹೀಗಾಗಿ ಮೋದಿಯವರ ಭಾಷಣ ಕರ್ನಾಟಕ ಜನ ತಿರಸ್ಕಾರ ಮಾಡಿದ್ದಾರೆ ಎಂದು ಟೀಕಿಸಿದರು.

ಬೆಳಗಾವಿ ನಗರ ವ್ಯಾಪ್ತಿಯಲ್ಲಿ ಕಡಿಮೆ ಮತದಾನ ವಿಚಾರವಾಗಿ ಮಾತನಾಡಿ, ಮುಂಚೆಯಿಂದಲೂ ಸಹ ನಗರ ಪ್ರದೇಶಗಳಲ್ಲಿ ಕಡಿಮೆ ಮತದಾನ ಆಗುತ್ತದೆ. ಬೆಂಗಳೂರು ನಗರದಲ್ಲಿಯೂ ಸಹ ಕಡಿಮೆ ಮತದಾನ ಆಗಿದೆ ಎಂದರು.

ಶಾಸಕ ಅಭಯ ಪಾಟೀಲ್ ಹೇಳಿಕೆಗೆ ಪ್ರತಿಕ್ರಿಯೆ ನೀಡಿದ ಅವರು, ಬೆಳಗಾವಿ ದಕ್ಷಿಣ ಕ್ಷೇತ್ರದಲ್ಲಿ ಎಂಇಎಸ್‌ಗೆ ಕಾಂಗ್ರೆಸ್ ಬೆಂಬಲ ನೀಡಿಲ್ಲ. ಅಭಯ ಪಾಟೀಲ್ ಮಾಡಿದ ಕರ್ಮ ಕಾಂಡ, ಕಾರ್ಯವೈಖರಿ, ಅಧಿಕಾರಿಗಳ, ಪೊಲೀಸರನ್ನು ದುರುಪಯೋಗ ಮಾಡಿಕೊಂಡಿದ್ದರಿಂದ ಜನ ಅವರನ್ನು ಸೋಲಿಸಲು ಬೆನ್ನು ಹತ್ತಿದ್ದಾರೆ. ಅದು ನಮ್ಮ ವೈಫಲ್ಯ ಅಲ್ಲ. ಬೆಳಗಾವಿಯಲ್ಲಿ ಎಂಇಎಸ್ ಅಸ್ತಿತ್ವ ಹುಟ್ಟಿಕೊಳ್ಳಲು ಅಭಯ್ ಪಾಟೀಲ್ ಕಾರಣ ಎಂದು ವಾಗ್ದಾಳಿ ನಡೆಸಿದರು.

ಮರಾಠಾ ಜನರ ಮೇಲೆ ಸುಮಾರು ಕೇಸ್ ಹಾಕಿದ್ದು, ತಹಶಿಲ್ದಾರ್ ಕಚೇರಿ, ಸಬ್‌ರಿಜಿಸ್ಟರ್ ಕಚೇರಿಗಳಿಂದ ತೊಂದರೆ ಕೊಟ್ಟಿದ್ದು, ಲೇಔಟ್‌ಗಳಲ್ಲಿ ತೊಂದರೆ ಕೊಟ್ಟಿದ್ದರಿಂದ ಮರಾಠಿಗರು ಸೇರಿದಂತೆ ಎಲ್ಲಾ ಸಮುದಾಯದ ಜನ ಅಭಯ್ ಪಾಟೀಲ್ ಅವರನ್ನು ಸೋಲಿಸಲು ನಿರ್ಣಯ ಮಾಡಿದ್ದಾರೆ ಎಂದು ತಿಳಿಸಿದರು.

ಈ ಸಂದರ್ಭದಲ್ಲಿ ಕೆಪಿಸಿಸಿ ಪ್ರಧಾನ ಕಾರ್ಯದರ್ಶಿ ಸುನೀಲ್ ಹಣಮನ್ನವರ್, ಬೆಳಗಾವಿ ಜಿಲ್ಲಾ ಗ್ರಾಮೀಣ ಅಧ್ಯಕ್ಷ ವಿನಯ ನಾವಲಗಟ್ಟಿ, ಬೆಳಗಾವಿ ಜಿಲ್ಲಾ ಪ್ರಧಾನ ಕಾರ್ಯದರ್ಶಿ ಪ್ರದೀಪ್ ಎಂ.ಜೆ., ಸವದತ್ತಿ ಕಾಂಗ್ರೆಸ್ ಅಭ್ಯರ್ಥಿ ವಿಶ್ವಾಸ ವೈದ್ಯ ಸೇರಿದಂತೆ ಅನೇಕ ಜಿಲ್ಲಾ ಮುಖಂಡರು ಇದ್ದರು.

# ಫಲಿತಾಂಶಕ್ಕೆ ಕೆಲವೇ ಗಂಟೆಗಳು: ಬಿರುಸುಗೊಂಡ ಬೆಟ್ಟಿಂಗ್ ದಂಧೆ

ರಾಜ್ಯ ವಿಧಾನಸಭೆಗೆ ಚುನಾವಣೆ ಮುಗಿದಿದ್ದು, ಫಲಿತಾಂಶಕ್ಕೆ ಕೆಲವೇ ಗಂಟೆಗಳು ಬಾಕಿ ಉಳಿದಿವೆ. ಈ ಮಧ್ಯೆ ರಾಜ್ಯಾದ್ಯಂತ ಅವ್ಯಾಹತವಾಗಿ ಬೆಟ್ಟಿಂಗ್ ದಂಧೆ ಬಿರುಸುಗೊಂಡಿದೆ.

ಮತದಾನಕ್ಕೆ ಮುಂಚಿತವಾಗಿ ಒಂದೆರಡು ದಿನಗಳಿಂದ ಈ ಬೆಟ್ಟಿಂಗ್ ಆರಂಭವಾಗುತ್ತದೆ. ಆಯಾ ಕ್ಷೇತ್ರಗಳ ಟ್ರೆಂಡ್ ಆಧರಿಸಿ ಬೆಟ್ಟಿಂಗ್ ಆರಂಭವಾಗುತ್ತದೆ. ಎಕ್ಸಿಟ್ ಪೋಲ್ ಹೊರಬೀಳುತ್ತಿದ್ದಂತೆ ಬೆಟ್ಟಿಂಗ್ ಬಿರುಸು ಪಡೆದುಕೊಂಡಿದೆ. ಬೀದರ್ ನಿಂದ ಚಾಮರಾಜ ನಗರದವರೆಗೆ ಬೆಟ್ಟಿಂಗ್ ನಡೆಯುತ್ತದೆ. ನೂರು ರೂ. ಗಳಿಂದ ನೂರು ಲಕ್ಷದವರೆಗೆ ಬೆಟ್ಟಿಂಗ್ ನಡೆಯುತ್ತದೆ. ಬೆಟ್ಟಿಂಗ್ ಗೆ ನಗದು ಹಣವೇ ಬೇಕು ಎಂದೇನೂ ಇಲ್ಲ. ಜಮೀನು, ಚಿನ್ನ, ವಾಹನ, ಫಸಲು, ಅಡಕೆ, ಬೇವು ಮಾವು ತೆಂಗಿನ ಮರ ಹೀಗೆ ಎಲ್ಲವನ್ನೂ ಬೆಟ್ಟಿಂಗ್ ಗೆ ಪಣವಾಗಿ ಇಡಲಾಗುತ್ತದೆ. ಕುರಿ, ಹಸು, ಎತ್ತು,ಮೇಕೆಯಂತಹ ಪ್ರಾಣಿಗಳೂ ಬೆಟ್ಟಿಂಗ್ ಗೆ ಆಧಾರವಾಗುತ್ತವೆ.

ಹಣ ಗೆಲ್ಲಬೇಕು ಎನ್ನುವುದಕ್ಕಿಂತ ತಮ್ಮ ನೆಚ್ಚಿನ ಅಭ್ಯರ್ಥಿ ಮೇಲೆ ಬೆಟ್ಟಿಂಗ್ ಕಟ್ಟುವವರು ಇಟ್ಟಿರುವ ಅಭಿಮಾನದ ಪರಾಕಾಷ್ಠೆಯನ್ನು ತೋರಿಸುತ್ತದೆ. ಬೆಟ್ಟಿಂಗ್ ಹೆಚ್ಚಲು ಮತ್ತೊಂದು ಕಾರಣವಿದೆ. ಮತದಾನದವರೆಗೂ ಬಿಜೆಪಿ ಅಧಿಕಾರಕ್ಕೆ ಬಂದೇ ಬಿಟ್ಟಿತು ಎಂದು ಮಾಧ್ಯಮಗಳು ನಿರಂತರವಾಗಿ ಸುದ್ದಿ ಬಿತ್ತರಿಸುತ್ತಿದ್ದವು. ಮತದಾನದ ನಂತರ ಕಾಂಗ್ರೆಸ್ ಅಧಿಕಾರದ ಹತ್ತಿರದಲ್ಲಿದೆ ಎಂದು ಸಮೀಕ್ಷೆಗಳು ಹೇಳತೊಡಗಿದಾಗ ಬೆಟ್ಟಿಂಗ್ ಚುರುಕುಗೊಂಡಿತು.


ಸುಖಾ ಸುಮ್ಮನೆ ಕುಳಿತು ಹರಟೆ ಹೊಡೆಯುವಾಗ ಬೆಟ್ಟಿಂಗ್ ನಡೆಯುತ್ತದೆ. ಆತ ಗೆಲ್ಲುತ್ತಾನೆ ಈ ಪಕ್ಷ ಗೆಲ್ಲುತ್ತದೆ ಎಂದು ವಾದ ಮಂಡಿಸುವಾಗ ಇದ್ದುದನ್ನು ಪಣಕ್ಕಿಡುತ್ತಾನೆ.

ಬೆಟ್ಟಿಂಗ್ ಕುರಿತು ರಾಜ್ಯಾದ್ಯಂತ ಬೆಳಕಿಗೆ ಬಂದಿರುವ ಕೆಲವು ಪ್ರಕರಣಗಳನ್ನು ನೋಡೋಣ.

ಎಚ್.ಡಿ.ಕೋಟೆ ಕ್ಷೇತ್ರದಲ್ಲಿ ಕಾಂಗ್ರೆಸ್ ಪರವಾಗಿ ಜಯರಾಂ ನಾಯಕ್ ಮತ್ತು ಜೆಡಿಸ್ ಪರವಾಗಿ ಶಿವರಾಜ್ ಎಂಬುವರು 5 ಲಕ್ಷ ರೂಪಾಯಿ ಬೆಟ್ಟಿಂಗ್ ಕಟ್ಟಿದ್ದು, ಛಾಪಾ ಕಾಗದದಲ್ಲಿ ಕರಾರು ಮಾಡಿಕೊಂಡಿದ್ದಾರೆ. ಈ ಪತ್ರ ಎಲ್ಲೆಡೆ ವೈರಲ್ ಆಗಿದೆ.

ಗುಂಡ್ಲುಪೇಟೆ ಬಿಜೆಪಿ ಅಭ್ಯರ್ಥಿ ಸಿ.ಎಸ್. ನಿರಂಜನಕುಮಾರ್ ಗೆಲುವು ಖಚಿತ ಎಂದು 1 ಕೋಟಿ ರೂಪಾಯಿ ಬೆಟ್ಟಿಂಗ್ ಕಟ್ಟಲು ಸಿದ್ಧ ಎಂದು ಗುಂಡ್ಲುಪೇಟೆ ಪುರಸಭಾ ಸದಸ್ಯ ಕಿರಣ್ ಗೌಡ ಎಂಬುವರು ಹೇಳಿರುವ ತುಣುಕು ಸಾಮಾಜಿಕ ಜಾಲತಾಣಗಳಲ್ಲಿ ಹರಿದಾಡುತ್ತಿದೆ. ಕಾಂಗ್ರೆಸ್ ಅಭ್ಯರ್ಥಿ ಪರ ಬೆಂಬಲಿಗರೊಬ್ಬರು 3 ಲಕ್ಷ ರೂಪಾಯಿ ಬಾಜಿ ಕಟ್ಟುವುದಾಗಿ ಹೇಳಿದ್ದಾರೆ.

ಧಾರವಾಡದಲ್ಲಿ ಕಾಂಗ್ರೆಸ್ ಅಭ್ಯರ್ಥಿ ವಿನಯ್ ಕುಲಕರ್ಣಿ ಬೆಂಬಲಿಗರೊಬ್ಬರು ಕುರಿಗಳನ್ನು ಪಣವಾಗಿ ಕಟ್ಟಿದ್ದರು. ಮತ್ತೊಬ್ಬ ವ್ಯಕ್ತಿ ತಮ್ಮ ಮಗನಿಗೆ ವಿನಯ್ ಎಂದು ಹೆಸರಿಟ್ಟಿದ್ದು, ವಿನಯ್ ಕುಲಕರ್ಣಿ ಸೋತರೇ ಹೆಸರು ಬದಲಿಸುವುದಾಗಿ ಹೇಳಿದ್ದಾರೆ.



ಕರಡಿ ಗುಡ್ಡ ಮತ್ತು ಬೈಲಹೊಂಗಲದಲ್ಲೂ ಹಣವನ್ನು ಬೆಟ್ಟಿಂಗ್ ಕಟ್ಟಲಾಗಿದೆ ಎಂಬ ಮಾಹಿತಿ ಇದೆ.

ತುಮಕೂರು, ನೆಲಮಂಗಲ, ಮಂಡ್ಯ, ಕಲಬುರಗಿ, ರಾಯಚೂರು, ಚಿತ್ರದುರ್ಗ, ಶಿವಮೊಗ್ಗ, ಬೀದರ್, ಯಾದಗಿರಿ ಕೊಪ್ಪಳ, ಮೈಸೂರು ಜಿಲ್ಲೆಗಳಲ್ಲೂ ಬೆಟ್ಟಿಂಗ್ ಧಂದೆ ಜೋರಾಗಿ ನಡೆಯುತ್ತಿದೆ.

ಗಂಗಾವತಿ ಕ್ಷೇತ್ರದಲ್ಲಿ ಕಾಂಗ್ರೆಸ್ ಪರವಾಗಿ ವ್ಯಕ್ತಿಯೊಬ್ಬರು ಜಾನುವಾರುಗಳನ್ನು ಬೆಟ್ಟಿಂಗ್ ಕಟ್ಟಿದ್ದರೆ, ಕೊಪ್ಪಳದಲ್ಲಿ ಅಪಾರ ಪ್ರಮಾಣದ ಹಣ ಮತ್ತು ಉಳುವ ಭೂಮಿಯನ್ನು ಬೆಟ್ಟಿಂಗ್ ಕಟ್ಟಲಾಗಿದೆ. ರಾಯಚೂರು, ಮಸ್ಕಿ ಹಾಗೂ ಲಿಂಗಸುಗೂರಿನಲ್ಲಿ ನಗದು ಮತ್ತು ಭೂಮಿಯನ್ನು ಪಣಕ್ಕೆ ಇಡಲಾಗಿದೆ.

ಮೈಸೂರಿನ ಪಿರಿಯಾಪಟ್ಟಣದಲ್ಲೂ 5 ಲಕ್ಷ ರೂಪಾಯಿವರೆಗೂ ಬೆಟ್ಟಿಂಗ್ ಕಟ್ಟಲಾಗಿದೆ ಎಂದು ಮೂಲಗಳು ತಿಳಿಸಿವೆ. ಹುಣಸೂರು, ಚಾಮರಾಜನಗರದ ಗುಂಡ್ಲುಪೇಟೆ ಹಾಗೂ ಕೊಳ್ಳೇಗಾಲದಲ್ಲೂ ವ್ಯಕ್ತಿಗಳ ಗೆಲುವಿನ ಅಂತರದ ಮೇಲೆ ಬೆಟ್ಟಿಂಗ್ ಕಟ್ಟಲಾಗಿದೆ, ತುಮಕೂರಿನಲ್ಲಿ ಬೆಳೆದ ಬೆಳೆಯನ್ನು ಬೆಟ್ಟಿಂಗ್ ಕಟ್ಟಲಾಗಿದ್ದರೆ ಕೊರಟಗೆರೆಯಲ್ಲಿ ಬೈಕ್ ಗಳನ್ನು ಬೆಟ್ಟಿಂಗ್ ಕಟ್ಟಲಾಗಿದೆ ಎಂದು ಬಂದಿದೆ.

ನಾಯಕರ ಹೆಸರಿನಲ್ಲಿ ಬೆಟ್ಟಿಂಗ್ ಜೋರು ಜೋರಾಗಿ ನಡೆದಿದೆ. ಸಿದ್ದರಾಮಯ್ಯ, ಕುಮಾರಸ್ವಾಮಿ, ಪರಮೇಶ್ವರ್ ಅವರಂತಹ ಗಣ್ಯರ ಹೆಸರಿನಲ್ಲಿ ಬಾಜಿ ಕಟ್ಟುವುದು ಹೆಚ್ಚಿದೆ. ವರುಣ ವಿಧಾನಸಭಾ ಕ್ಷೇತ್ರದಲ್ಲಿ ಕಾಂಗ್ರೆಸ್ ಅಭ್ಯರ್ಥಿ ಸಿದ್ದರಾಮಯ್ಯ ಪರವಾಗಿ ಹೆಚ್ಚಿನ ಮೊತ್ತದ ಬೆಟ್ಟಿಂಗ್ ನಡೆದಿದೆ. ತಿ.ನರಸೀಪುರ, ಕೆ.ಆರ್.ನಗರದಲ್ಲಿ ಹಣ, ಬೈಕ್, ಕಾರ್ ಮತ್ತು ಸಾಕು ಪ್ರಾಣಿಗಳನ್ನು ಬೆಟ್ಟಿಂಗ್‌ಗೆ ಕಟ್ಟುತ್ತಿದ್ದಾರೆ. ಕೆ.ಆರ್.ನಗರದ ಕಾಂಗ್ರೆಸ್ ಅಭ್ಯರ್ಥಿ ಡಿ. ರವಿಶಂಕರ್ ಪರ ಅಭಿಮಾನಿಯೊಬ್ಬ 5 ಲಕ್ಷದವರೆಗೂ ಬೆಟ್ಟಿಂಗ್ ಸವಾಲು ಹಾಕಿದ್ದು, ಬಿಜೆಪಿ ಜೆಡಿಎಸ್ ಬೆಂಬಲಿಗರು ಸವಾಲು ಸ್ವೀಕರಿಸಲು ಮುಂದೆ ಬರುತ್ತಿಲ್ಲ ಎಂಬ ಮಾಹಿತಿ ಇದೆ. ಈ ಸಂಬಂಧದ ವಿಡಿಯೋ ಸಾಮಾಜಿಕ ಜಾಲತಾಣದಲ್ಲಿ ಹರಿದಾಡುತ್ತಿದೆ.

ತಲಕಾಡು ಗ್ರಾಮದಲ್ಲಿ ಇಬ್ಬರು ಅಭ್ಯರ್ಥಿಗಳ ಪರವಾಗಿ ಮೇಕೆ, ಬೈಕ್‌ನ ಜೊತೆ ಮೆಕ್ಕೆಜೋಳದ ಫಸಲನ್ನೇ ಬೆಟ್ಟಿಂಗ್‌ಗೆ ಇಟ್ಟಿದ್ದಾರೆ.

ಕರಾವಳಿಯಲ್ಲಿ ಜೋರು ಹಳೇ ಮೈಸೂರು ಮಾತ್ರವಲ್ಲ, ಈ ಬಾರಿ ಕರಾವಳಿಯಲ್ಲಿ ಬೆಟ್ಟಿಂಗ್ ಜೋರು ಎಂದು ಹೇಳಲಾಗುತ್ತಿದೆ.

ಪುತ್ತೂರು ಸ್ವತಂತ್ರ ಅಭ್ಯರ್ಥಿ ಅರುಣ್ ಕುಮಾರ್ ಪುತ್ತಿಲ ಪರ ಮತ್ತು ವಿರುದ್ಧ ಹೆಚ್ಚಿನ ಮೊತ್ತದ ಬೆಟ್ಟಿಂಗ್ ನಡೆಯುತ್ತಿದೆ ಎಂದು ಮೂಲಗಳು ತಿಳಿಸಿವೆ. ಬಿಜೆಪಿ ಟಿಕೆಟ್ ಆಕಾಂಕ್ಷಿ ಯಾಗಿದ್ದ ಪುತ್ತಿಲ ಸ್ವತಂತ್ರವಾಗಿ ಸ್ಪರ್ಧೆ ಮಾಡಿದ್ದು, ತೀವ್ರ ಕುತೂಹಲ ಕೆರಳಿಸಿದ್ದಾರೆ. ಬಂಟ್ವಾಳ, ಬೆಳ್ತಂಗಡಿ, ಮಂಗಳೂರು ಕಾರ್ಕಳದಲ್ಲಿ ಬೆಟ್ಟಿಂಗ್ ನಡೆಯುತ್ತಿದೆ.

ಬೆಟ್ಟಿಂಗ್ ದಂಧೆ ಮೇಲೆ ಸೂಕ್ಷ್ಮ ನಿಗಾ ವಹಿಸುವಂತೆ ಸಿಸಿಬಿ ಅಧಿಕಾರಿಗಳು ಪೊಲೀಸರಿಗೆ ಕಟ್ಟುನಿಟ್ಟಿನ ಸೂಚನೆ ನೀಡಿದ್ದಾರೆ. ಆದರೆ ಇದು ಸುಲಭ ಕೆಲಸ ಅಲ್ಲ. ಎಲ್ಲವೂ ಬಾಯಿ ಮೂಲಕ ನಡೆಯುತ್ತಿದ್ದು, ದಾಖಲೆ ಇರುವುದಿಲ್ಲ. ಕ್ರಿಕೆಟ್ ನಲ್ಲಿ ಆನ್ ಲೈನ್ ಬೆಟ್ಟಿಂಗ್ ನಡೆಯುತ್ತದೆ ಮತ್ತು ಇದನ್ನು ಕಂಡು ಹಿಡಿಯುವುದು ಸುಲಭ.

ಈ ಮಧ್ಯೆ, ಚುನಾವಣೆಗೆ ಸಂಬಂಧಿಸಿದಂತೆ ಬೆಟ್ಟಿಂಗ್ ಕಂಡುಬಂದರೆ ಕಠಿಣ ಕ್ರಮ ಜರುಗಿಸುವುದಾಗಿ ಪೊಲೀಸರು ಎಚ್ಚರಿಕೆ ನೀಡಿದ್ದಾರೆ. ಆದರೆ ಪೊಲೀಸರ ಕೈಗೆ ಸಿಗದ ಪ್ರಕರಣಗಳೇ ಹೆಚ್ಚು. ಕುರಿ,ಆಡು, ಕೋಳಿ ಪಣಕ್ಕಿಟ್ಟರೆ ಪತ್ತೆ ಹಚ್ಚುವುದಾದರೂ ಹೇಗೆ?

# ಕಷ್ಟ ಕಾಲದಲ್ಲಿ ಪಕ್ಷ ಮುನ್ನಡೆಸಿದ್ದೇನೆ: ಡಿಕೆಶಿ

ಬೆಂಗಳೂರು: ಸಂಕಷ್ಟದ ಕಾಲದಲ್ಲಿ ಪಕ್ಷವನ್ನು ಮುನ್ನಡೆಸಿದ್ದೇನೆ. ಈಗ ಹಿರಿಯರು, ಕಿರಿಯರು ಎಲ್ಲರೂ ನನಗೆ ಸಹಕಾರ ಕೊಡುತ್ತಾರೆ ಎಂದು ಕೆಪಿಸಿಸಿ ಅಧ್ಯಕ್ಷ ಡಿ.ಕೆ. ಶಿವಕುಮಾರ್ ಹೇಳಿದರು.

ಸುದ್ದಿಗಾರರ ಜತೆ ಶುಕ್ರವಾರ ಮಾತನಾಡಿದ ಅವರು, ದಿನೇಶ್ ಗುಂಡೂರಾವ್ ಸ್ವಯಂಪ್ರೇರಿತವಾಗಿ ರಾಜೀನಾಮೆ ಕೊಟ್ಟಾಗ ಸೋನಿಯಾ ಗಾಂಧಿಯವರು ನನಗೆ ಅಧಿಕಾರ ಕೊಟ್ಟರು. ಕಾಂಗ್ರೆಸ್ ಶಾಸಕಾಂಗ ಪಕ್ಷದ ನಾಯಕ ಸಿದ್ದರಾಮಯ್ಯ ಕೂಡ ಉಪ ಚುನಾವಣೆ ಮುಗಿದ ಬಳಿಕ ನೈತಿಕ ಹೊಣೆ ಹೊತ್ತು ರಾಜೀನಾಮೆ ನೀಡುವುದಾಗಿ ಹೇಳಿದ್ದರು. ನಾನು ಅಧಿಕಾರ



ಸ್ವೀಕರಿಸಿದ ದಿನದಿಂದ ನಿದ್ದೆ ಇಲ್ಲದೆ ಕೆಲಸ ಮಾಡಿದ್ದೇನೆ ಎಂದರು.

ಪಕ್ಷಕ್ಕೆ ಏನು ಮಾಡಬೇಕೋ ಎಲ್ಲವನ್ನೂ ಮಾಡಿದ್ದೇನೆ. ಶ್ರಮ ಹಾಕಿ ದುಡಿದಿದ್ದೇನೆ. ಈಗ ಬೇರೆ ಯಾವ ಸಂದರ್ಭವೂ ಉದ್ಭವವವಾಗುವುದಿಲ್ಲ. ಎಲ್ಲರೂ ನನಗೆ ಸಹಕಾರ ಕೊಟ್ಟು, ಆಶೀರ್ವಾದ ಮಾಡುತ್ತಾರೆ. ಒಂದು ಉತ್ತಮವಾದ ಕಾಂಗ್ರೆಸ್ ಸರ್ಕಾರ ನೀಡುತ್ತೇವೆ ಎಂದು ಹೇಳಿದರು.

ಕಾಂಗ್ರೆಸ್‌ನಲ್ಲಿ ಯಾವುದೇ ರೀತಿಯ ಅಧಿಕಾರ ಹಂಚಿಕೆಯ ಚರ್ಚೆ ನಡೆದಿಲ್ಲ. ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ, ನಾಯಕರಾದ ಸೋನಿಯಾ ಗಾಂಧಿ, ರಾಹುಲ್ ಗಾಂಧಿ ಏನು ತೀರ್ಮಾನ ಮಾಡುತ್ತಾರೋ ಅದೇ ಅಂತಿಮ ಎಂದು ಪ್ರಶ್ನೆಯೊಂದಕ್ಕೆ ಪ್ರತಿಕ್ರಿಯಿಸಿದರು.

ಚುನಾವಣೋತ್ತರ ಸಮೀಕ್ಷೆಗಳ ಬಗ್ಗೆ ನನಗೆ ನಂಬಿಕೆ ಇಲ್ಲ. ಒಂದು ತಿಂಗಳ ಹಿಂದೆ ಸಮೀಕ್ಷೆಯಲ್ಲಿ ಕಾಂಗ್ರೆಸ್‌ಗೆ ಬಹುಮತ ದೊರಕುತ್ತದೆ ಎಂದು ಹೇಳಲಾಗಿತ್ತು.

ನಂತರ 20 ಸ್ಥಾನ ಕಡಿಮೆ ತೋರಿಸಿದರು. ಕಾಂಗ್ರೆಸ್ ಈ ಚುನಾವಣೆಯಲ್ಲಿ ಖಚಿತವಾಗಿ 141 ಸ್ಥಾನಗಳನ್ನು ಗಳಿಸಲಿದೆ ಎಂದು ಹೇಳಿದರು.

ಜೆಡಿಎಸ್ ಶಾಸಕಾಂಗ ಪಕ್ಷದ ನಾಯಕ ಎಚ್.ಡಿ. ಕುಮಾರಸ್ವಾಮಿ ಅವರ ಸಿಂಗಪುರ ಪ್ರವಾಸ ಕುರಿತು ಪ್ರತಿಕ್ರಿಯಿಸಿದ ಶಿವಕುಮಾರ್, ಅವರು ನನಗಿಂತ ಒಂದು ವರ್ಷ ಹಿರಿಯರು. ಅವರು ಆರೋಗ್ಯ ಸುಧಾರಣೆಗೆ ಹೋಗಿರಬಹುದು. ಅವರ ಲೆಕ್ಕಾಚಾರ ನಮಗೆ ಏಕೆ ಎಂದರು.

ರೆಸಾರ್ಟ್ ರಾಜಕಾರಣ 25 ವರ್ಷಗಳ ಹಿಂದೆಯೇ ಮುಗಿದಿದೆ. ಎಷ್ಟೇ ಸ್ಥಾನ ಬಂದರೂ ಸರ್ಕಾರ ರಚಿಸುವುದಾಗಿ ಬಿಜೆಪಿಯವರು ಹೇಳಿದ್ದಾರೆ. ಅದು ಅವರ ಭ್ರಮೆ ಎಂದು ಪ್ರಶ್ನೆಯೊಂದಕ್ಕೆ ಉತ್ತರಿಸಿದರು.



ಬೈಲಹೊಂಗಲ: ಬುಧವಾರ ನಡೆದ ಕರ್ನಾಟಕ ವಿಧಾನಸಭೆಯ 2023 ರ ಚುನಾವಣೆಯ ಅಂಗವಾಗಿ ಮತದಾನದ ಮರುದಿನ ಸ್ವಾಭಿಮಾನಿ ಪಕ್ಷೇತರ ಅಭ್ಯರ್ಥಿ ಡಾ.ವಿಶ್ವನಾಥ ಪಾಟೀಲ ಅವರು ತಮ್ಮ ವಿರಾಮದ ಸಮಯದಲ್ಲಿ ಕುಟುಂಬದೊಂದಿಗೆ ಕಾಲ ಕಳೆದು ಸಂಭ್ರಮಿಸಿದರು.

## ಹೊಸ ವಂಟಮೂರಿಯಿಂದ ಯುವತಿ ನಾಪತ್ತೆ

ಬೆಳಗಾವಿ: ಸಮೀಪದ ನ್ಯೂ ವಂಟಮೂರಿನ 18 ವರ್ಷದ ಯುವತಿ ಶ್ರೀದೇವಿ ದಶರಥ ಹರಿಜನ ನಾಪತ್ತೆಯಾಗಿದ್ದಾಳೆ.ಈ ಕುರಿತು ಆಕೆಯ ತಂದೆ ಕಾಕತಿ ಪೊಲೀಸ್ ಠಾಣೆಯಲ್ಲಿ ದೂರು ದಾಖಲಿಸಿದ್ದು, ಕಾಕತಿ ಪೊಲೀಸರು ಆಕೆ ಇರುವ ಬಗ್ಗೆ ಮಾಹಿತಿ ನೀಡುವಂತೆ ಮನವಿ ಮಾಡಿದ್ದಾರೆ. ಕಳೆದ ಮೇ 9 ರಂದು ಬೆಳಗ್ಗೆ 6 ಅಥವಾ 7 ಗಂಟೆಯ ನಡುವೆ ಶ್ರೀದೇವಿ ಎಂಬ ಯುವತಿ ಮನೆಯಿಂದ ಹೊರ ಹೋಗಿದ್ದು ಇನ್ನು ವರೆಗೂ ಕೂಡ ವಾಪಸಾಗಿಲ್ಲ. ಪಿಯುಸಿ ಮೊದಲ ವರ್ಷದಲ್ಲಿ ಓದುತ್ತಿದ್ದು,ತೆಳ್ಳಗಿನ ಮೈಕಟ್ಟು, 5 ಅಡಿ 4 ಇಂಚು ಎತ್ತರ ಮತ್ತು ಕಂದು ಮೈಬಣ್ಣವನ್ನು ಹೊಂದಿದ್ದಾಳೆ.ಈಕೆಯ ಬಗ್ಗೆ ಮಾಹಿತಿ ಮೇರೆಗೆ ಕಾಕತಿ ಪೊಲೀಸ್ ಠಾಣೆ ನಂ. 0831–2405203, 9480804115 ಬೆಳಗಾವಿ ಪೊಲೀಸ್ ನಿಯಂತ್ರಣ ಕೊಠಡಿ ಸಂ. 0831–2405233ಗೆ ಸಂಪರ್ಕಿಸಲು ಕಾಕತಿ ಪೊಲೀಸರು ಮನವಿ ಮಾಡಿದ್ದಾರೆ.

# ಸರ್ಕಾರ, ಪೊಲೀಸರ ಬೇಜವಾಬ್ದಾರಿತನದಿಂದ ಯುವ ಡಾಕ್ಟರ್ ಹತ್ಯೆ: ಖಂಡನೆ

ಬಳ್ಳಾರಿ: ಕೇರಳದ ಕೊಟ್ಟರಕರ್ ತಾಲೂಕಿನ ಸರ್ಕಾರಿ ಆಸ್ಪತ್ರೆಯ ತುರ್ತು ಚಿಕಿತ್ಸಾ ಘಟಕಕ್ಕೆ ಪೊಲಿಸರೊಂದಿಗೆ ಬಂದಿದ್ದ ಮಾದಕ ದ್ರವ್ಯ ಸೇವಿಸಿರುವ ವ್ಯಕ್ತಿಯು ಅಲ್ಲಿನ ವೈದ್ಯರ ಮೇಲೆ ಆಕ್ರಮಣ ಮಾಡಿದ್ದರಿಂದ ಡಾ. ವಂದನಾ ದಾಸ್ ಹತ್ಯೆಗೊಳಗಾಗಿದ್ದಾರೆ. ಸರ್ಕಾರ ಹಾಗೂ ಪೋಲಿಸರ ನಿರ್ಲಕ್ಷ್ಯದಿಂದ ಇಂತಹ ದುರ್ಘಟನೆ ಘಟಿಸಿದೆ.

ಖೈದಿಯನ್ನು ಸಮರ್ಪಕ ರಕ್ಷಣೆಯಿಲ್ಲದೆ ಆಸ್ಪತ್ರೆಗೆ ಕರೆತರಲಾಗಿದೆ. ಖೈದಿಯು ಮಾದಕ ದ್ರವ್ಯ ಸೇವಿಸಿದ್ದಾಗಿಯೂ ಸಮರ್ಪಕ ರಕ್ಷಣೆ ನೀಡದೇ ವೈದ್ಯರ ನಡುವೆ ಬಿಟ್ಟು ವೈದ್ಯರನ್ನು ಅಪಾಯಕ್ಕೆ ತಳ್ಳಿರುವುದು ಪೋಲಿಸರ ನಿರ್ಲಕ್ಷ್ಯ ಎತ್ತಿ ತೋರಿಸುತ್ತಿದೆ. ಪೋಲಿಸರು ಹಾಗೂ ಸರ್ಕಾರದ ನಿರ್ಲಕ್ಷ್ಯ ಧೋರಣೆಯಿಂದ ಆಗಿರುವ ಈ ಘಟನೆಯ ಸಂಪೂರ್ಣ




ಜವಾಬ್ದಾರಿಯನ್ನು ಸರ್ಕಾರ ವಹಿಸಬೇಕಿತ್ತು.

ಬದಲಾಗಿ ಆರೋಗ್ಯ ಸಚಿವರು, ವೈದ್ಯೆ ಅನಾನುಭವಿಯಾಗಿದ್ದರಿಂದ ಇಂತಹ ಘಟನೆ ಜರುಗಿದೆ ಎಂಬ ಹೇಳಿಕೆಯು ವೈದ್ಯರ ಕುರಿತಾಗಿ ಸರ್ಕಾರದ ಧೋರಣೆಯು ವ್ಯಕ್ತವಾಗುತ್ತಿದೆ. ಅವರ ಬೇಜವಾಬ್ದಾರಿ ಹೇಳಿಕೆಯನ್ನು ಈ ಕೂಡಲೇ ಹಿಂಪಡೆಯಬೇಕೆಂದು ಎಐಡಿಎ ಜಿಲ್ಲಾ ಅಧ್ಯಕ್ಷರಾದ ಹಯ್ಯಾಳಪ್ಪ ತಿಳಿಸಿದರು. ರಾಯಚೂರಿನ ರಿಮ್ಸ್ ಆಸ್ಪತ್ರೆ ಹತ್ತಿರ ಒಂದು ನಿಮಿಷ ಮೌನಾಚರಣೆ ಮಾಡಲಾಯಿತು ಪೀರ್ ಸಾಬ್,ಹೇಮಂತ್, ಬಸವರಾಜ್ ಮತ್ತು ಮೆಡಿಕಲ್ ವಿದ್ಯಾರ್ಥಿಗಳು ಭಾಗವಹಿಸಿದರು.

# ಅಂತರರಾಷ್ಟ್ರೀಯ ದಾದಿಯರ ದಿನ ಆಚರಣೆ

ಬೆಳಗಾವಿ: ಎಸ್‌ಬಿಜಿ ಕಾಲೇಜ್ ಆಫ್ ನರ್ಸಿಂಗ್ ನ ಅಧ್ಯಾಪಕರು ಮತ್ತು ವಿದ್ಯಾರ್ಥಿಗಳು ಅಂತರರಾಷ್ಟ್ರೀಯ ದಾದಿಯರ ದಿನವನ್ನು "ನಮ್ಮ ದಾದಿಯರು, ನಮ್ಮ ಭವಿಷ್ಯ" ಎಂಬ ವಿಷಯದ ಮೇಲೆ ಬೆಳಗಾವಿಯ ಎಸ್‌ಬಿಜಿ ಕಾಲೇಜ್ ಆಫ್ ನರ್ಸಿಂಗ್‌ನಲ್ಲಿ ಆಚರಿಸಲಾಯಿತು.



ದಾದಿಯರ ದಿನವು ಪ್ರಪಂಚದಾದ್ಯಂತ ದಾದಿಯರ ಕೊಡುಗೆಗಳನ್ನು ಗೌರವಿಸಲು ಮತ್ತು ಆಚರಿಸಲು ವಿಶೇಷ ದಿನವಾಗಿದೆ.

ಪ್ರತಿ ವರ್ಷ ಮೇ 12 ರಂದು ಫ್ಲಾರೆನ್ಸ್ ನೈಟಿಂಗೇಲ್ ಅವರ ಜನ್ಮದಿನದಂದು ದಿನವನ್ನು ಆಚರಿಸಲಾಗುತ್ತದೆ.

ಪ್ರಪಂಚದಾದ್ಯಂತ ದಾದಿಯರ ಪ್ರಯತ್ನಗಳನ್ನು ಗೌರವಿಸಲು ಮತ್ತು ಗುರುತಿಸಲು ಪ್ರತಿ ವರ್ಷ ಮೇ 12 ರಂದು ಅಂತರರಾಷ್ಟ್ರೀಯ ದಾದಿಯರ ದಿನವನ್ನು ಗುರುತಿಸಲಾಗುತ್ತದೆ.

ಪ್ರಾಂಶುಪಾಲರಾದ ಶ್ರೀಮತಿ ಸೆಂತಾಮರೈ ರಾಣಿ ಮೇಡಂ ಅವರು ಶುಶ್ರೂಷಕರ ದಿನದ ವಿಷಯವನ್ನು ಉದ್ಘಾಟಿಸಿದರು ಮತ್ತು ಉಪಪ್ರಾಂಶುಪಾಲ ಅರುಣ್ ಅಂಗಡಿ ಅವರು ಸಭೆ ಯನ್ನುದ್ದೇಶಿಸಿ "ನರ್ಸಿಂಗ್‌ನಲ್ಲಿ ಹೂಡಿಕೆ ಮಾಡಿ", "ದಾದಿಯರನ್ನು ರಕ್ಷಿಸಿ", "ನರ್ಸ್ ಮತ್ತು ನರ್ಸಿಂಗ್ ವೃತ್ತಿಯನ್ನು ಗೌರವಿಸಿ" ಎಂದು ಹೇಳಿದರು. ಜೂಲಿ, ಆನಂದ್ ರೌತ್, ಬೆರ್ಶೀಬಾ. ಇ, ಮತ್ತು ವಿದ್ಯಾಶ್ರೀ. ಶಿಕ್ಷಕ ವೃಂದದವರು ಉಪಸ್ಥಿತರಿದ್ದರು.

# ೨೦೦೮-೨೦೨೩ರವರೆಗೆ ಮುಖ್ಯಮಂತ್ರಿ ಹುದ್ದೆಗೇರಿದವರ

# ಗೆಲುವು–ಸೋಲು ಹೇಗಿತ್ತು ಗೊತ್ತೇ?

ಎಚ್.ಮಾರುತಿ


ಚುನಾವಣೆಗಳು ಗಣತಂತ್ರದ ಹಬ್ಬಗಳಿದ್ದಂತೆ. ಸೊಗಸು ಕೂಡಾ. ಕರ್ನಾಟಕದಲ್ಲಿ ಇದೀಗ ಈ

ಹಬ್ಬ ಮುಕ್ತಾಯಗೊಂಡಿದ್ದು, ಫಲಿತಾಂಶಕ್ಕೆ ಕೆಲವೇ ಗಂಟೆಗಳು ಮಾತ್ರ ಬಾಕಿ ಉಳಿದಿವೆ.

ಶ್ರೀಸಾಮಾನ್ಯನಿಂದ ಹಿಡಿದು ಮುಖ್ಯಮಂತ್ರಿ ಹುದ್ದೆಯ ಆಕಾಂಕ್ಷಿಯವರೆಗೂ ಎಲ್ಲರೂ

ಮತದಾನೋತ್ತರ ಸಮೀಕ್ಷೆಯ ಲೆಕ್ಕಾಚಾರದಲ್ಲಿ ತೊಡಗಿದ್ದಾರೆ. ಎಲ್ಲರೂ ಹಿಂದೆ ಬಿದ್ದಿದ್ದು ಹಾಗಾದರೆ ಹೀಗಾದರೆ ಎಂದು ಕೂಡಿ ಕಳೆಯುವ ಲೆಕ್ಕಾಚಾರದಲ್ಲಿ ತೊಡಗಿದ್ದಾರೆ. ಅದು ಅವರಿಗೆ ಅನಿವಾರ್ಯ ಕೂಡಾ. ಹಾಗಾದರೆ ನಾವು ಏಕೆ ಸುಮ್ಮನಿರಬೇಕು? ನಾವೂ ಕೂಡಾ ಕಳೆದ ಮೂರು ಸಾರ್ವತ್ರಿಕ ಚುನಾವಣೆಗಳ ಅಂಕಿ ಅಂಶಗಳೊಂದಿಗೆ ಆಟವಾಡೋಣ ಬನ್ನಿ.

## ಬಿ.ಎಸ್.ಯಡಿಯೂರಪ್ಪ



ಮೊದಲಿಗೆ ಮಾಜಿ ಮುಖ್ಯಮಂತ್ರಿ ಬಿ.ಎಸ್.ಯಡಿಯೂರಪ್ಪ ಅವರ ಚುನಾವಣಾ ಫಲಿತಾಂಶಗಳನ್ನು ನೋಡೋಣ. ವೀರಶೈವ–ಲಿಂಗಾಯತ ಸಮುದಾಯದ ಪ್ರಬಲ ನಾಯಕ, ನಾಲ್ಕು ಬಾರಿ ಮುಖ್ಯಮಂತ್ರಿಯಾಗಿ

ಪ್ರಮಾಣ ವಚನ ಸ್ವೀಕರಿಸಿದ್ದ ಅವರು ಕಳೆದ ನಾಲ್ಕು ಚುನಾವಣೆಗಳಲ್ಲಿ ಅವರು ಸಾಗಿ ಬಂದ ಹಾದಿ ಹೀಗಿದೆ.

ಶಿವಮೊಗ್ಗ ಜಿಲ್ಲೆಯ ಶಿಕಾರಿಪುರ ಯಡಿಯೂರಪ್ಪ ಅವರ ತವರು ಕ್ಷೇತ್ರ. 2008 ರಲ್ಲಿ ಅವರು

ಸಮಾಜವಾದಿ ಪಕ್ಷದ ಅಭ್ಯರ್ಥಿಯಾಗಿ ಕಣಕ್ಕಿಳಿದಿದ್ದ ಮಾಜಿ ಮುಖ್ಯಮಂತ್ರಿ ಎಸ್.ಬಂಗಾರಪ್ಪ ಅವರ ವಿರುದ್ಧ ಸ್ಪರ್ಧಿಸಿದ್ದರು. ಇಡೀ ರಾಜ್ಯದ ಗಮನ ಸೆಳೆದಿದ್ದ ಈ ಚುನಾವಣೆಯಲ್ಲಿ ಯಡಿಯೂರಪ್ಪ 83,491 ಮತಗಳನ್ನು ಪಡೆಯುವ ಮೂಲಕ ಬಂಗಾರಪ್ಪ ಅವರನ್ನು ಭಾರಿ ಬಹುಮತದ ಅಂತರದಿಂದ ಪರಾಭವಗೊಳಿಸಿದ್ದರು. ಬಂಗಾರಪ್ಪ ಕೇವಲ 37,564 ಮತಗಳನ್ನು ಮಾತ್ರ ಗಳಿಸಿದ್ದರು. ಶೇ.36.4ರಷ್ಟು ಹೆಚ್ಚಿನ ಮತಗಳನ್ನು ಗಳಿಸಿದ್ದರು ಎಂದರೆ ಅವರ ಕ್ಷೇತ್ರದ ಮೇಲಿನ ಹಿಡಿತ ಅರ್ಥವಾದೀತು.

2013ರಲ್ಲಿ ಯಡಿಯೂರಪ್ಪ ಕರ್ನಾಟಕ ಜನತಾ ಪಕ್ಷ(ಕೆಜೆಪಿ) ಸ್ಥಾಪಿಸಿ ಬಿಜೆಪಿ ವಿರುದ್ಧ ತೊಡೆ ತಟ್ಟಿದ್ದರು. ಈ ಚುನಾವಣೆಯಲ್ಲಿ ಕಾಂಗ್ರೆಸ್ ನ ಶಾಂತವೀರಪ್ಪಗೌಡ ಅವರನ್ನು 20,000 ಮತಗಳ ಅಂತರದಲ್ಲಿ ಸೋಲಿಸಿದ್ದರು. ಯಡಿಯೂರಪ್ಪ 69,711 ಮತ ಗಳಿಸಿದ್ದರೆ ಶಾಂತವೀರಪ್ಪ 44,701ಮತಗಳಿಸಲಷ್ಟೇ ಸಾಧ್ಯವಾಗಿತ್ತು.

2018ರಲ್ಲಿ ಯಡಿಯೂರಪ್ಪ ಮತ್ತೆ ಬಿಜೆಪಿ ಪಕ್ಷದಿಂದ ಕಣಕ್ಕಿಳಿದಿದ್ದರು. ಅವರು ಕಾಂಗ್ರೆಸ್‌ನ ಗೋಣಿ ಮಾಲತೇಶ ಅವರ ವಿರುದ್ಧ ಶೇ.23ರಷ್ಟು ಮತಗಳ ಅಂತರದಿಂದ ಜಯ ಸಾಧಿಸಿದ್ದರು. ಯಡಿಯೂರಪ್ಪ 86,983 ಮತಗಳನ್ನು ಮತ್ತು ಮಾಲತೇಶ ಅವರು 51,586 ಮತಗಳನ್ನು ಗಳಿಸಿದ್ದರು.

## ಸಿದ್ದರಾಮಯ್ಯ



ಯಡಿಯೂರಪ್ಪ ಅವರಂತೆಯೇ ಸಿದ್ದರಾಮಯ್ಯ ಅವರೂ ಸಹ ಮಾಸ್ ಲೀಡರ್ ಎನ್ನುವುದುರಲ್ಲಿ ಎರಡು ಮಾತಿಲ್ಲ. ದೇವರಾಜ ಅರಸು ನಂತರ ಐದು ವರ್ಷದ ಪೂರ್ಣಾವಧಿ ಸರಕಾರ ನಡೆಸಿದ ಖ್ಯಾತಿ ಇವರದ್ದು.

2008ರಲ್ಲಿ ಸಿದ್ದರಾಮಯ್ಯ ವರುಣ ಕ್ಷೇತ್ರದ ಕಾಂಗ್ರೆಸ್ ಅಭ್ಯರ್ಥಿ. ಇವರ ವಿರುದ್ಧ ನಿವೃತ್ತ ಪೊಲೀಸ್ ಅಧಿಕಾರಿ ಎಲ್.ರೇವಣ್ಣಸಿದ್ದಯ್ಯ ಬಿಜೆಪಿ ಅಭ್ಯರ್ಥಿ ಸಿದ್ದರಾಮಯ್ಯ 71,908 ಮತಗಳಿಸಿ 53,081ಮತ ಗಳಿಸಿದ ರೇವಣ್ಣಸಿದ್ದಯ್ಯ ಅವರನ್ನು ಶೇ.13.2ಮತಗಳ ಅಂತರದಿಂದ ಸೋಲಿಸಿದ್ದರು.

2013ರಲ್ಲಿ ಮತ್ತೆ ಸಿದ್ದರಾಮಯ್ಯ ವರುಣಾದಲ್ಲಿ 84,385 ಮತಗಳನ್ನು ಗಳಿಸುವ ಮೂಲಕ ಕೆಜೆಪಿ ಅಭ್ಯರ್ಥಿ ಕಾಪು ಸಿದ್ದಲಿಂಗಸ್ವಾಮಿ ಅವರನ್ನು ಶೇ.18.5 ಮತಗಳ ಅಂತರದಲ್ಲಿ ಪರಾಭವಗೊಳಿಸಿ ಮುಖ್ಯಮಂತ್ರಿಯಾಗಿದ್ದು ಈಗ ಇತಿಹಾಸ.


2018ರಲ್ಲಿ ಸಿದ್ದರಾಮಯ್ಯ ಚಾಮುಂಡೇಶ್ವರಿ ಮತ್ತು ಬಾದಾಮಿ ಎರಡೂ ಕ್ಷೇತ್ರಗಳಿಂದ ಸ್ಪರ್ಧೆ ಮಾಡಿದ್ದರು. ಚಾಮುಂಡೇಶ್ವರಿಯಲ್ಲಿ ಜೆಡಿಎಸ್ ಹುರಿಯಾಳು ಜಿ.ಟಿ.ದೇವೇಗೌಡ ಅವರು 1,21,325 ಮತ ಗಳಿಸಿದರೆ ಸಿದ್ದರಾಮಯ್ಯ 85,283 ಮತಗಳಿಸಿ ಪರಾಭವ ಹೊಂದಿದ್ದರು.

ಜಿಟಿಡಿ ಶೇ.16ರಷ್ಟು ಮತಗಳ ಅಂತರದಿಂದ ಗೆಲುವು ದಾಖಲಿಸಿದ್ದರು.

ಬಾದಾಮಿಯಲ್ಲಿ ಸಿದ್ದರಾಮಯ್ಯ 77,599 ಮತ ಪಡೆಯುವ ಮೂಲಕ 65,,903 ಮತಗಳನ್ನು ಪಡೆದ

ಬಿಜೆಪಿ ಅಭ್ಯರ್ಥಿ ಶ್ರೀರಾಮುಲು ಅವರನ್ನು ಸೋಲಿಸಿ ವಿಧಾನಸಭೆ ಪ್ರವೇಶಿಸಿದ್ದರು.

## ಎಚ್.ಡಿ.ಕುಮಾರಸ್ವಾಮಿ



ಎರಡು ಬಾರಿ ಮುಖ್ಯಮಂತ್ರಿ ಪಟ್ಟವನ್ನು ಅಲಂಕರಿಸಿದ್ದ ಎಚ್.ಡಿ.ಕುಮಾರಸ್ವಾಮಿ ಬಿಜೆಪಿ ಮತ್ತು ಕಾಂಗ್ರೆಸ್ ಎರಡೂ ಪಕ್ಷಗಳ ಜತೆ ಮೈತ್ರಿ ಸಾಧಿಸಿ ಅಧಿಕಾರ ಹಿಡಿದಿದ್ದರು.

2008ರಲ್ಲಿ ರಾಮನಗರ ಕ್ಷೇತ್ರದಲ್ಲಿ ಬಿಜೆಪಿಯ ಎಂ.ರುದ್ರೇಶ್ ಅವರನ್ನು ಶೇ.37ರಷ್ಟು ಮತಗಳ ಅಂತರದಲ್ಲಿ ಸೋಲಿಸಿ ಮುಖ್ಯಮಂತ್ರಿಯಾಗಿದ್ದರು. ಎಚ್‌ಡಿಕೆ 71,700 ಮತ ಪಡೆದರೆ ರುದ್ರೇಶ್ ಕೇವಲ24, 440 ಮತಗಳನ್ನು ಮಾತ್ರ ಪಡೆಯಲು ಸಾಧ್ಯವಾಗಿತ್ತು.

2013ರಲ್ಲಿ ರಾಮನಗರದಿಂದ ಕಣಕ್ಕಿಳಿದು ಕಾಂಗ್ರೆಸ್‌ನ ಮರಿದೇವರು ಅವರನ್ನು ಸೋಲಿಸಿದ್ದರು. ಕುಮಾರಸ್ವಾಮಿ 83,447 ಮತ ಮತ್ತು ಮರಿದೇವರು 58, 049 ಮತಗಳನ್ನು

ಪಡೆದಿದ್ದರು. ಗೆಲುವಿನ ಅಂತರ ಶೇ.17.01ಕ್ಕೆ ಇಳಿದಿತ್ತು.

2018ರಲ್ಲಿ ರಾಮನಗರ ಮತ್ತು ಚನ್ನಪಟ್ಟಣ ಎರಡೂ ಕ್ಷೇತ್ರಗಳಿಂದ ಸ್ಪರ್ಧೆ ಮಾಡಿದ ಕುಮಾರಸ್ವಾಮಿ ಎರಡೂ ಕಡೆ ಗೆಲುವು ದಾಖಲಿಸಿದ್ದರು. ಚನ್ನಪಟ್ಟಣದಲ್ಲಿ 87,995 ಮತ ಪಡೆದು 66,465 ಮತ ಪಡೆದ ಬಿಜೆಪಿಯ ಸಿ.ಪಿ.ಯೋಗೀಶ್ವರ್ ಅವರನ್ನು ಸೋಲಿಸಿದ್ದರು.

ರಾಮನಗರದಲ್ಲಿ 92,626 ಮತ ಗಳಿಸಿ ಕಾಂಗ್ರೆಸ್‌ನ ಇಕ್ಬಾಲ್ ಹುಸೇನ್ ಅವರನ್ನು ಶೇ.13.3 ಮತಗಳ ಅಂತರದಿಂದ ಸೋಲಿಸಿದ್ದರು. ಇಕ್ಬಾಲ್ 69,990 ಮತಗಳನ್ನು ಪಡೆದಿದ್ದರು.

ಕಾಂಗ್ರೆಸ್ ಜತೆ ಮೈತ್ರಿ ಸಾಧಿಸಿ ಕುಮಾರಸ್ವಾಮಿ ಮುಖ್ಯಮಂತ್ರಿಯಾಗಿ ಪ್ರಮಾಣ ವಚನ

ಸ್ವೀಕರಿಸಿದರು.


## ಜಗದೀಶ ಶೆಟ್ಟರ್



2008ರಲ್ಲಿ ಹುಬ್ಬಳ್ಳಿ–ಧಾರವಾಡ ಸೆಂಟ್ರಲ್ ಕ್ಷೇತ್ರದಿಂದ ಸ್ಪರ್ಧಿಸಿ 58,747ಮತ ಗಳಿಸಿ ಕಾಂಗ್ರೆಸ್‌ನ ಶಂಕ್ರಣ್ಣ ಮುನವಳ್ಳಿ ಅವರನ್ನು ಸೋಲಿಸಿ ಆಯ್ಕೆಯಾಗಿದ್ದರು. ಮುನವಳ್ಳಿ 32,738ಮತ ಗಳಿಸಿದ್ದರು. ಗೆಲುವಿನ ಅಂತರ ಶೇ.24.2ರಷ್ಟಿತ್ತು. 2013ರಲ್ಲಿ ಇದೇ ಕ್ಷೇತ್ರದಿಂದ ಶೆಟ್ಟರ್ 58,201 ಮತಗಳನ್ನು ಪಡೆದು ಕಾಂಗ್ರೆಸ್‌ನ ಮಹೇಶ್ ನಲ್ವಾಡ್ ಅವರನ್ನು ಪರಾಭವಗೊಳಿಸಿದ್ದರು. 2018 ರಲ್ಲಿಯೂ ಶೆಟ್ಟರ್ ತಮ್ಮ ಸಾಂಪ್ರದಾಯಿಕ ಕ್ಷೇತ್ರದಿಂದ ಕಣಕ್ಕಿಳಿದು ಗೆಲುವು ದಾಖಲಿಸಿದ್ದರು. ಶೆಟ್ಟರ್ 75,794 ಮತ ಮತ್ತು ನಲ್ವಾಡ್ 54,488ಮತ ಗಳಿಸಿದ್ದರು.

ಬದಲಾದ ರಾಜಕೀಯ ಸನ್ನಿವೇಶದಲ್ಲಿ ಶೆಟ್ಟರ್ 2023ರಲ್ಲಿ ಕಾಂಗ್ರೆಸ್ ಅಭ್ಯರ್ಥಿಯಾಗಿ ಅದೇ ಕ್ಷೇತ್ರದಿಂದ ಸ್ಪರ್ಧೆ ಮಾಡಿದ್ದಾರೆ. ಫಲಿತಾಂಶ ನಿರೀಕ್ಷೆ ಮಾಡೋಣ.

## ಬಸವರಾಜ ಬೊಮ್ಮಾಯಿ



2008ರಲ್ಲಿ ಬಸವರಾಜ ಬೊಮ್ಮಾಯಿ ಅವರು ಶಿಗ್ಗಾಂವಿ ಕ್ಷೇತ್ರದಿಂದ ಸ್ಪರ್ಧೆ ಮಾಡಿ ಶೇ.10.4ರಷ್ಟು ಮತಗಳ ಅಂತರದಿಂದ ಗೆಲುವು ಸಾಧಿಸುತ್ತಾರೆ. ಇವರು 63,780 ಮತ ಮತ್ತು ಕಾಂಗ್ರೆಸ್‌ನ ಖಾದ್ರಿ ಸಯ್ಯದ್ ಅಝೀಂಪೀರ್ ಅವರು 50,918 ಮತ ಗಳಿಸುತ್ತಾರೆ. 2013ರಲ್ಲಿ ಮತ್ತೆ ಬೊಮ್ಮಾಯಿ 73,007 ಮತ ಗಳಿಸಿ ತಮ್ಮ ಎದುರಾಳಿ 63,504 ಮತ ಗಳಿಸಿದ ಖಾದ್ರಿ ಸಯ್ಯದ್ ಅಝೀಂಪೀರ್ ಅವರ ವಿರುದ್ಧ ಶೇ.6.3ರಷ್ಟು ಮತಗಳ ಅಂತರದಿಂದ ಗೆಲುವು ಸಾಧಿಸುತ್ತಾರೆ. 2018ರಲ್ಲಿ 83,868 ಮತ ಗಳಿಸಿ ಇದೇ ಎದುರಾಳಿಯ ವಿರುದ್ಧ

ಶೇ.5.5ರಷ್ಟು ಮತಗಳ ಅಂತರದಿಂದ ಗೆಲುವು ದಾಖಲಿಸುತ್ತಾರೆ. ಖಾದ್ರಿ ಸಯ್ಯದ್ ಅವರು 74,603 ಮತ ಗಳಿಸುವಲ್ಲಿ ಮಾತ್ರ ಸಾಧ್ಯವಾಗುತ್ತದೆ.

ಮುಂದಿನ 24 ಗಂಟೆಗಳಲ್ಲಿ 224 ಅಭ್ಯರ್ಥಿಗಳ ಹಣೆಬರಹ ಬಹಿರಂಗವಾಗುತ್ತದೆ. ಯಾರು ಗೆಲ್ಲುತ್ತಾರೆ ಯಾರು ಸೋಲುತ್ತಾರೆ ಎಂದು ಹೇಳುವುದು ಕಷ್ಟಸಾಧ್ಯ.

ಪ್ರಜಾಪ್ರಭುತ್ವದಲ್ಲಿ ಪ್ರಜೆಗಳೇ ಪ್ರಭುಗಳು. ದೇಶದ ಚುನಾವಣಾ ಇತಿಹಾಸವನ್ನು ಗಮನಿಸಿದರೆ ಸೋಲು ಕಾಣದ ರಾಷ್ಟ್ರೀಯ ಮಟ್ಟದ ನಾಯಕರೇ ಇಲ್ಲ ಎನ್ನಬಹುದು. ರಾಜ್ಯದ ಮಟ್ಟಿಗೆ ಎಚ್.ಡಿ.ದೇವೇಗೌಡ, ಕುಮಾರಸ್ವಾಮಿ, ಯಡಿಯೂರಪ್ಪ, ಸಿದ್ದರಾಮಯ್ಯ ಹೀಗೆ ಎಲ್ಲರೂ ಸೋತು ಗೆದ್ದವರು. ಸೋತ ಮಾತ್ರಕ್ಕೆ ಅವರ ರಾಜಕೀಯ ಜೀವನ ಮುಗಿದೇ ಹೋಯಿತು ಎಂದು ಅರ್ಥವಲ್ಲ. ಮತ್ತೆ ಪುಟಿದೇಳುವ ಎಲ್ಲ ಅವಕಾಶಗಳು ಇದ್ದೇ ಇರುತ್ತವೆ. ನಾಳೆಯ ಫಲಿತಾಂಶದ ಪಾಠವೂ ಇದೇ ಆಗಿರುತ್ತದೆ.

# ರವೀಂದ್ರನಾಥ ಟ್ಯಾಗೋರ್‌ರ ಅರಿತಿರುವ, ತತ್ವ ಅನುಸರಿಸುವ ಕೆಲವೇ ನಾಯಕರಲ್ಲೊಬ್ಬರು ಅಮಿತ್ ಶಾ

ವಿಶ್ವಗುರು ರವೀಂದ್ರನಾಥರ ಬೋಧನೆಗಳು, ಆಲೋಚನೆಗಳು ಮತ್ತು ತತ್ವಚಿಂತನೆಗಳು ಪ್ರಪಂಚದಾದ್ಯಂತ ಅನೇಕರನ್ನು ಇಂದಿಗೂ ಆಕರ್ಷಿಸುತ್ತಿವೆ, ಆದರೆ ಕೆಲವರು ಮಾತ್ರ ಅವುಗಳನ್ನು ನಿಜಜೀವನದಲ್ಲಿ ಅನುಸರಿಸುತ್ತಾರೆ.

ಶಿಕ್ಷಣ ಮತ್ತು ರಾಜಕೀಯ ಸೇ–ರಿದಂತೆ ವಿವಿಧ ಅಂಶಗಳಲ್ಲಿ ಗುರುದೇವರ ತತ್ವಶಾಸ್ತ್ರದ ಮೇಲೆ ದೃಢ ನಂಬಿಕೆಯುಳ್ಳ ಮತ್ತು ಅವರನ್ನು ತಮ್ಮ ಮಾರ್ಗದರ್ಶಕನಂತೆ ನೋಡುವ ಗೃಹ ಸಚಿವ ಅಮಿತ್ ಶಾ ರವೀಂದ್ರನಾಥ ಟ್ಯಾಗೋರ್ ಅವರ ನಿಜವಾದ ಶಿಷ್ಯರೊಲ್ಲಬ್ಬರು ಎಂದು ಹೇಳಬಹುದು.

ರವೀಂದ್ರನಾಥರ ಕೃತಿಗಳನ್ನು ಆಳವಾಗಿ ಅಧ್ಯಯನ ಮಾಡಿರುವ ಅಮಿತ್ ಶಾ, ಈಗ ಕಂಡುಬರುತ್ತಿರುವ ಸಂಕುಚಿತ ಮನೋಭಾವಕ್ಕಿಂತ ಭಿನ್ನವಾಗಿರುವ, ಗುರುದೇವರ ರಾಜ–ಕೀಯ, ಸಾಮಾಜಿಕ ಜೀವನ, ಕಲೆ ಮತ್ತು ದೇಶಭಕ್ತಿ ಮತ್ತು ಅವರ ಮುಕ್ತ ಚಿಂತನೆಗಳೆಡೆಗೆ ಮೊದಲಿನಿಂದಲೂ ಆಕರ್ಷಿತರು. ಗುರುದೇವರ ಚಿಂತನೆಗಳು ತಮಗೆ ದಾರಿದೀಪ ಎನ್ನುವ ಶಾ ಅವರ ವಿಚಾರಗಳಲ್ಲಿ ಸ್ಫೂರ್ತಿಯನ್ನು ಕಂಡುಕೊಳ್ಳುತ್ತಾರೆ.

ಮಹಾನ್ ಕವಿ ಮತ್ತು ದಾರ್ಶನಿಕ ಟ್ಯಾಗೋರ್‌ರ ಬರಹಗಳಿಂದ ಬಗ್ಗೆ ಅಪಾರ ಗೌರವ ಹೊಂದಿರುವ ಶಾ, ಗುರುದೇವರ ಶ್ರೇಷ್ಠ ವ್ಯಕ್ತಿತ್ವವನ್ನು ವರ್ಣಿಸಲು 'ಮಹಾಮಾನವ' ಎಂಬ ಪದವು ಸಾಕಾಗುವುದಿಲ್ಲ ಎಂದು ನಂಬುತ್ತಾರೆ.

ರವೀಂದ್ರನಾಥ ಟ್ಯಾಗೋರ್‌ರ ಚಿಂತನೆಯಾದ ಮಾತೃಭಾಷೆಯಲ್ಲಿ ಶಿಕ್ಷಣವನ್ನು ನೀಡುವುದನ್ನು ವಾಸ್ತವತೆಗೆ ತರಲು, ರಾಷ್ಟ್ರೀಯ ಶಿಕ್ಷಣ ನೀತಿಯನ್ನು (ಎನ್‌ಇಪಿ) ಟಾಗೋರ್‌ರವರ ಸಿದ್ಧಾಂತದ ಮಾದ–ರಿಯಲ್ಲಿ ರೂಪಿಸಬೇಕು ಎಂಬುದನ್ನು ಶಾ ಮೊದಲಿನಿಂದಲೂ ಪ್ರತಿಪಾದಿಸುತ್ತ ಬಂದಿದ್ದಾರೆ.

ಮಾತೃಭಾಷೆಯಲ್ಲಿನ ಶಿಕ್ಷಣದಿಂದ ಮಗುವಿನಲ್ಲಿ ಆಲೋಚನಾ ಸಾಮರ್ಥ್ಯ ಮತ್ತು ಸಂಶೋಧ ನಾತ್ಮಕ ಮನಸ್ಥಿತಿಯನ್ನು ಬೆಳಸಬಹುದು.

"ಗುರುದೇವ ರವೀಂದ್ರನಾಥ



ಠಾಗೋರ್‌ರವರು ಯಾವಾಗಲೂ ಮಾತೃಭಾಷೆಯಲ್ಲಿನ ಶಿಕ್ಷಣಕ್ಕೆ ಹೆಚ್ಚಿನ ಒತ್ತು ನೀಡುತ್ತಿದ್ದರು.

ಮಗುವಿಗೆ ತನ್ನ ಮಾತೃಭಾಷೆಯಲ್ಲಿ ಮಾತನಾಡಲು ಸಾಧ್ಯವಾಗದಿದ್ದಲ್ಲಿ, ಅವನ ಆಲೋಚನಾ ಮತ್ತು ಸಂಶೋಧನಾ ಸಾಮಥ–ರ್ಯವನ್ನು ತೀವ್ರವಾಗಿ ನಿರ್ಬಂಧಿಸಿದ ಹಾಗಾಗುತ್ತದೆ. ಪ್ರಧಾನಮಂತ್ರಿ ಶ್ರೀ ನರೇಂದ್ರ ಮೋದಿಯವರ ಮಾರ್ಗದರ್ಶನದಲ್ಲಿ ರೂಪಿಸಲಾದ ಹೊಸ ಶಿಕ್ಷಣ ನೀತಿಯು ಗುರುದೇವರ ಚಿಂತನೆಗಳಿಂದ ಸ್ಫೂರ್ತಿ ಪಡೆದಿದೆ ಮತ್ತು ಮಾತೃಭಾಷೆಯಲ್ಲಿ ಶಿಕ್ಷಣಕ್ಕೆ ಒತ್ತು ನೀಡಿದೆ" ಎಂದು ಶಾ ಹೇಳಿದರು.

ವಿದೇಶಿ ಶಿಕ್ಷಣ ಮತ್ತು ವಿಶ್ವವಿದ್ಯಾನಿಲಯಗಳನ್ನು ವೈಭವೀಕ–ರಿಸುವುದು ನಮ್ಮ ಶಿಕ್ಷಣ ವ್ಯವಸ್ಥೆಯ ಗುರಿಯಾಗಬಾರದು ಎಂದು ಗುರುದೇವರು ನಂಬಿದ್ದರು.

ಊರು ಹೊಡೆಯಲು ಹೇಳಿಕೊಡುವ ಶಿಕ್ಷಣಕ್ಕೆ ವಿರುದ್ಧವಾಗಿ ಗುರುದೇವ ರವೀಂದ್ರನಾಥ ಟ್ಯಾಗೋರ್‌ರವರು ಶಿಕ್ಷಣದ ಈ ಹೊಸ ಕಲ್ಪನೆಯನ್ನು ಮುಂದಿಟ್ಟಿದ್ದರು.

ಇದೇ ಹೊಸ ಶಿಕ್ಷಣ ನೀತಿಯಲ್ಲಿ(–ಎನ್‌ಇಪಿ)ಯಲ್ಲಿ ಪ್ರತಿಧ್ವನಿಸುತ್ತಿದೆ.

ಶಾಂತಿ ನಿಕೇತನದಲ್ಲಿ, ಟ್ಯಾಗೋರ್‌ರವರು ಪ್ರಾಚೀನ ಭಾರತೀಯ ಜ್ಞಾನ ವ್ಯವಸ್ಥೆಯನ್ನು ಆಧುನಿಕ ಕಲಿಕೆಯ ತಂತ್ರಗಳೊಂದಿಗೆ ಸಂಯೋಜಿಸಿದ್ದರು. ಹಾಗೇ ಮಾತೃಭಾಷೆಯಲ್ಲಿನ ಕಲಿಕೆಗೆ ಅತ್ಯುನ್ನತ ಮಹತ್ವ ನೀಡಿದ್ದರು. ಒಬ್ಬ ವ್ಯಕ್ತಿ ತನ್ನ ಮಾತೃಭಾಷೆಯನ್ನು ಬಳಸದೆ ತನ್ನ ಅಂತರಂಗವನ್ನು ಅನ್ವೇಷಿಸಲು ಸಾಧ್ಯವಿಲ್ಲ ಎಂದು ಅವರು ನಂಬಿದ್ದರು. ಶಾರವರು ಮಾತೃಭಾಷೆಯಲ್ಲಿನ ಶಿಕ್ಷಣಕ್ಕೆ ಒತ್ತು ನೀಡುತ್ತಿರುವುದಕ್ಕೆ ಟ್ಯಾಗೋರ್‌ರವರ ಬೋಧನೆಗಳೆ ಪ್ರಮುಖ ಕಾರಣ.

'ಬಂಗಾಳದ ಜಮೀನ್ದಾರ್ ಕುಟುಂಬದ ಕುಡಿಯಾಗಿದ್ದರೂ ಸಹ, ರವೀಂದ್ರನಾಥರು ಸಾಮಾನ್ಯ ಜನರ ಆಲೋಚನೆಗಳನ್ನು ಎಷ್ಟು ನಿರರ್ಗಳವಾಗಿ ವ್ಯಕ್ತಪಡಿಸುತ್ತಿದ್ದರು ಎನ್ನುತ್ತಾ' ಅಮಿತ್ ಶಾ ಗುರುದೇವರದ ಬಗ್ಗೆ ಮೆಚ್ಚುಗೆ ವ್ಯಕ್ತಪಡಿಸಿದರು . ರವೀಂದ್ರನಾಥ ಟ್ಯಾಗೋರ್‌ರವರು ನಿಜವಾದ ಅರ್ಥದಲ್ಲಿ ಜಾಗತಿ–ಕ ವ್ಯಕ್ತಿಯಾಗಿದ್ದರು, ಅವರು ಭಾರತದಲ್ಲಿನ ಕಲೆಗೆ ಮಾತ್ರವಲ್ಲ, ಜಾಗತಿಕವಾಗಿ ವಿವಿಧ ವಿಭಾಗಗಳಿಗೆ ಅಭೂತಪೂರ್ವ ಕೊಡುಗೆ ನೀಡಿದ್ದಾರೆ ಎಂಬುದು ಶಾರ ನಂಬಿಕೆ.

## ಅತ್ಯಾಚಾರವೆಸಗಲು ಮುಂದಾದ ಧರ್ಮಗುರು ಮರ್ಮಾಂಗವನ್ನೇ ಕಟ್ ಮಾಡಿದ ಮಹಿಳೆ



ಅಸ್ಸಾಂ: ಮಾನಭಂಗ ಮಾಡಲು ಯತ್ನಿಸಿದ ಮುಸ್ಲಿಂ ಧರ್ಮಗುರುವಿನ ಮರ್ಮಾಂಗವನ್ನು ಮಹಿಳೆಯೊಬ್ಬರು ಕತ್ತರಿಸಿದ ಘಟನೆ ಅಸ್ಸಾಂನ ಮೊರಿಗಾಂವ್ ಜಿಲ್ಲೆಯ ಬರಲಿಮರಿ ಗ್ರಾಮದಲ್ಲಿ ನಡೆದಿದೆ.

ಹೀಗೆ ಮಹಿಳೆ ಮೇಲೆ ಅತ್ಯಾಚಾರಕ್ಕೆ ಮುಂದಾಗಿ ಮರ್ಮಾಂಗ ಕಳೆದುಕೊಂಡ ವ್ಯಕ್ತಿಯನ್ನು ಉಸ್ಮನ್ ಆಲಿ ಎಂದು ವರದಿಯಿಂದ ತಿಳಿದು ಬಂದಿದೆ.


ಉಸ್ಮಾನ್ ಆಲಿ ಅಸ್ಸಾಂನ ದರ್ರಾಂಗ್ ಜಿಲ್ಲೆಯ ಧುಲಾ ಗ್ರಾಮದವನಾಗಿದ್ದು, ಮಕ್ಕಳಿಲ್ಲದ ದಂಪತಿಗೆ ಮಕ್ಕಳಾಗುವಂತೆ ಸಹಾಯ ಮಾಡಲು ಬಂದಿದ್ದ ಎಂದು ವರದಿ ಆಗಿದೆ. ಆದರೆ ಮನೆಗೆ ನುಗ್ಗುತ್ತಿದ್ದಂತೆ ಆತ ಮಹಿಳೆ ಮೇಲೆ ಅತ್ಯಾಚಾರಕ್ಕೆ ಮುಂದಾಗಿದ್ದು, ದಂಗಾದ ಮಹಿಳ ಮಾನ ಉಳಿಸಿಕೊಳ್ಳಲು ಹರಿತವಾದ ವಸ್ತುವಿನಿಂದ ಆತನ ಮರ್ಮಾಂಗವನ್ನು ಕತ್ತರಿಸಿದ್ದಾಳೆ. ತನ್ನನ್ನು ತಾನು ರಕ್ಷಿಸಿಕೊಳ್ಳುವ ಸಲುವಾಗಿ ಈ ಕೃತ್ಯವೆಸಗಿದ್ದಾಗಿ ಮಹಿಳೆ ಹೇಳಿಕೊಂಡಿದ್ದಾಳೆ.

ಗಾಯಾಳು ಉಸ್ಮಾನ್‌ನನ್ನು ಮೊದಲಿಗೆ ಮೊ–ರಿಗಾಂವ್‌ನ ಸಾರ್ವಜನಿಕ ಆಸ್ಪತ್ರೆಗೆ ದಾಖಲಿಸಲಾಗಿದ್ದು, ನಂತರ ಹೆಚ್ಚಿನ ಚಿಕಿತ್ಸೆಗೆ ಗುವಾಹಟಿಯ ಮೆಡಿಕಲ್ ಕಾಲೇಜು ಆಸ್ಪತ್ರೆಗೆ ಕರೆದೊಯ್ಯಲಾಗಿದೆ ಎಂದು ವರದಿಯಾಗಿದೆ.

## 31 ಸಾವಿರ ಬೂತ್‌ಗಳಲ್ಲಿ ಮುನ್ನಡೆ: ಬಿ.ಎಲ್.ಸಂತೋಷ್

ಬೆಂಗಳೂರು: ಎಲ್ಲ ಮತಗಟ್ಟೆ ಸಮೀಕ್ಷೆಗಳು ಕಾಂಗ್ರೆಸ್ ಪಕ್ಷ ಬಹುಮತದ ಸನಿಹ ಬಂದಿದೆ ಎಂದು ಭವಿಷ್ಯ ನುಡಿದಿದ್ದರೆ, ಬಿಜೆಪಿಯ ರಾಷ್ಟ್ರೀಯ ಸಂಘಟನಾ ಪ್ರಧಾನ ಕಾರ್ಯದರ್ಶಿ ಬಿ.ಎಲ್. ಸಂತೋಷ್ ಅವರು, ಬಿಜೆಪಿ 31 ಸಾವಿರ ಬೂತ್‌ಗಳಲ್ಲಿ ಮುನ್ನಡೆ ಸಾಧಿಸುವುದು ನಿಶ್ಚಿತ ಎಂದು ಟ್ವೀಟ್ ಮಾಡಿದ್ದಾರೆ.

ಪ್ರಖ್ಯಾತ ಸಮೀಕ್ಷಾ ಸಂಸ್ಥೆಗಳು 2014 ರಲ್ಲಿ 282 ಅಥವಾ 2019 ರಲ್ಲಿ 303 ಸೀಟುಗಳು, 2022 ರಲ್ಲಿ 156 ಬರುತ್ತವೆ ಎಂದು ಭವಿಷ್ಯ



ನುಡಿದಿರಲಿಲ್ಲ.

2018 ರಲ್ಲಿ 104 ಬರುತ್ತವೆ ಎಂದೂ ಹೇಳಿರಲಿಲ್ಲ.

2018 ರಲ್ಲಿ 24 ಸಾವಿರ ಬೂತ್‌ಗಳಲ್ಲಿ ಬಿಜೆಪಿ ಮುನ್ನಡೆ ಸಾಧಿಸಿತ್ತು.

ಈ ಬಾರಿ 31 ಸಾವಿರ ಬೂತ್‌ಗಳಲ್ಲಿ ನಾವು ಮುನ್ನಡೆ ಸಾಧಿಸಲಿದ್ದೇವೆ.

ಸಂಖ್ಯೆ ಎಷ್ಟು ಎಂದು ನೀವೇ ಊಹಿಸಿ' ಎಂದು ಹೇಳಿದ್ದಾರೆ.

'ಪ್ರಭು ಶ್ರೀರಾಮನಿಗಾಗಿ ರಾಮನ ಸೇನೆ ಯುದ್ಧವನ್ನು ಗೆದ್ದಂತೆ, ಮೋದಿಯವ–ರಿಗಾಗಿ ಬೂತ್ ಸಮಿತಿ ಕಾರ್ಯಕರ್ತರು ಮತ್ತು ಪೇಜ್ ಪ್ರಮುಖರು ಚುನಾವಣೆ ಎಂಬ ಯುದ್ಧದಲ್ಲಿ ಪ್ರತಿ ಬೂತ್‌ನಲ್ಲೂ ಗೆಲ್ಲಲಿದ್ದಾರೆ ಬಿಜೆಪಿಗೆ ಪೂರ್ಣ ಬಹುಮತ ಸಿಗಲಿದೆ ಎಂದು ಟ್ವೀಟ್‌ನಲ್ಲಿ ತಿಳಿಸಿದ್ದಾರೆ.

## ಬೆಳಗಾವಿ: ಹೈವೇಯಲ್ಲಿ ಹೊತ್ತಿ ಉರಿದ ಕ್ಯಾಂಟರ್ ಲಾರಿಗಳು



ಬೆಳಗಾವಿ : ಬೆಳಗಾವಿ ಜಿಲ್ಲೆಯ ಹುಕ್ಕೇರಿ ತಾಲೂಕಿನ ಹಿಟ್ನಿ ಕ್ರಾಸ್ ಬಳಿಯ ರಾಷ್ಟ್ರೀಯ ಹೆದ್ದಾರಿಯಲ್ಲಿ ಶುಕ್ರವಾರ ಬೆಳಿಗ್ಗೆ 10.30 ಗಂಟೆಗೆ ದಾಬಾ ಮುಂದೆ ಕಾರುಗಳನ್ನು ಹೊತ್ತು ನಿಂತಿದ್ದ ಎರಡು ಕ್ಯಾಂಟರ್ ಲಾರಿಗಳಿಗೆ ಆಕಸ್ಮಿಕವಾಗಿ ಬೆಂಕಿ ತಗುಲಿ ಲಕ್ಷಾಂತರ ರೂ. ಹಾನಿಯಾದ ಘಟನೆ ನಡೆದಿದೆ.

ಹುಕ್ಕೇರಿ ತಾಲೂಕಿನ ಹಿಟ್ನಿ ಕ್ರಾಸ್ ಬಳಿ ಪುಣೆ– ಬೆಂಗಳೂರು ರಾಷ್ಟ್ರೀಯ ಹೆದ್ದಾರಿ ಬಳಿಯ ಧಾಬಾ ಒಂದರ ಮುಂದೆ ನಿಂತಿದ್ದ ಕ್ಯಾಂಟರ್ ಲಾರಿಗಳಿಗೆ ಬೆಂಕಿ ಬಿದ್ದು ಈ ಅವಘಡ ಸಂಭವಿಸಿದೆ.

ಈ ಬೆಂಕಿ ಅವಘಡ ನಡೆದ ಸ್ಥಳದಿಂದ ಸ್ವಲ್ಪ ಅಂತರದಲ್ಲಿಯೇ ಪೆಟ್ರೋಲ್ ಬಂಕ್ ಇದ್ದು, ಸಂಭವನೀಯ ಭಾರೀ ಅಪಾಯ ತಪ್ಪಿದಂತಾಗಿದೆ. ಇನ್ನೂ ಈ ಲಾರಿಗಳು ವಾಹನಗಳನ್ನು ಸಾಗಿಸುತ್ತಿದ್ದವು ಎಂದು ತಿಳಿದುಬಂದಿದೆ.

ಘಟನಾ ಸ್ಥಳಕ್ಕೆ ಸಂಕೇಶ್ವರ ಪೊಲೀಸರು ದೌಡಾಯಿಸಿದ್ದಾರೆ.

## ಕರ್ನಾಟಕ ವಿಧಾನಸಭಾ ಸಾರ್ವತ್ರಿಕ ಚುನಾವಣೆ: ಜಿಲ್ಲೆಯಾದ್ಯಂತ ನಿಷೇಧಾಜ್ಞೆ ಜಾರಿ

ಬೆಳಗಾವಿ: ಕರ್ನಾಟಕ ವಿಧಾನಸಭಾ ಸಾರ್ವತ್ರಿಕ ಚುನಾವಣೆ –2023 ಹಿನ್ನೆಲೆಯಲ್ಲಿ ಬೆಳಗಾವಿ ಜಿಲ್ಲೆಯಲ್ಲಿ ಒಟ್ಟು 18 ವಿಧಾನಸಭಾ ಕ್ಷೇತ್ರಗಳ ಮತ ಎಣಿಕೆ ಕಾರ್ಯವು ಮೇ.13 2023 ರಂದು ಆಣಿ ಪಾರ್ವತಿ ದೇವಿ ಮಹಾವಿದ್ಯಾಲಯದಲ್ಲಿ ಜರುಗಲಿದೆ.

ಮತ ಎಣಿಕೆ ಕಾರ್ಯದ ಪಾವಿತ್ರ್ಯತೆಯನ್ನು ಕಾಪಾಡುವ ಹಿತ ದೃಷ್ಟಿಯಿಂದ ಹಾಗೂ ಆಯ್ಕೆಯಾದ ಅಭ್ಯರ್ಥಿಗಳು ವಿಜಯೋತ್ಸವ ಆಚರಣೆ ಮಾಡುವುದು, ಬಣ್ಣ ಎರಚುವುದು ಹಾಗೂ ಮೆರವಣಿಗೆ ಮಾಡುವ ಸಾಧ್ಯತೆ ಇದ್ದು, ಈ ಸಂದರ್ಭದಲ್ಲಿ ಇತರೆ ಅಭ್ಯರ್ಥಿಗಳು ಹಾಗೂ ಆ ಪಕ್ಷದ ಕಾರ್ಯಕರ್ತರು ಹಾಗೂ ಬೆಂಬಲಿಗರು ತಂಟೆ ತಕರಾರು ಮಾಡುವ ಸಾಧ್ಯತೆ ಇರುತ್ತದೆ.

ಸಾರ್ವಜನಿಕ ಸಭೆ ಸಮಾರಂಭಗಳನ್ನು ಮಾಡಿ ವಿಜಯೋತ್ಸವ ಆಚರಣೆ ಮಾಡುವ ಸಂಭವ ಇರುವುದರಿಂದ ಕಾನೂನು ಮತ್ತು ಸುವ್ಯವಸ್ಥೆ ಕಾಪಾಡುವ ಹಿತ ದೃಷ್ಟಿಯಿಂದ ಮೇ.12 2023 ರ ಸಂಜೆ 5 ಗಂಟೆ ಯಿಂದ ಮೇ.14 ರ ಬೆಳಗ್ಗೆ 7 ಗಂಟೆಯವರೆಗೆ ಸಿ.ಆರ್.ಪಿ.ಸಿ 1973 ರ ಕಲಂ 144 ಮತ್ತು ಕರ್ನಾಟಕ ಪೊಲೀಸ್ ಕಾಯ್ದೆ 1963 ರ ಕಲಂ 35 ರನ್ವಯ ಜಿಲ್ಲಾ ಚುನಾವಣಾ ಅಧಿಕಾರಿಗಳು ಹಾಗೂ ಜಿಲ್ಲಾ ದಂಡಾಧಿಕಾರಿಗಳಾದ ನಿತೇಶ್ ಕೆ ಪಾಟೀಲ್ ನಿಷೇಧಾಜ್ಞೆ ಹೊರಡಿಸಿ ಆದೇಶಿಸಿದ್ದಾರೆ.

ನಿಷೇಧಾಜ್ಞೆಯ ಅವಧಿಯಲ್ಲಿ ಬೆಳಗಾವಿ ಜಿಲ್ಲೆಯಲ್ಲಿ 5 ಕ್ಕಿಂತ ಹೆಚ್ಚು ಜನರು ಗುಂಪು ಸೇರುವುದು, ಮರವಣಿಗೆ ಅಥವಾ ಸಾರ್ವಜನಿಕ/ರಾಜಕೀಯ ಸಭೆ ಸಮಾರಂಭ ಜರುಗುಸುವುದನ್ನು ನಿಷೇಧಿಸಲಾಗಿದೆ.

ಶಸ್ತ್ರ, ಬಡಿಗೆ, ಬರ್ಚಿ, ಖಡ್ಗ, ಗಧೆ, ಬಂದೂಕು, ಚೂರಿ, ಲಾಠಿ, ಡೊಣ್ಣೆ, ಚಾಕೂ ಅಥವಾ ದೇಹಕ್ಕೆ ಅಪಾಯವನ್ನುಂಟು ಮಾಡಲು ಉಪಯೋಗಿಸಬಹುದಾದ ಯಾವುದೇ ಮಾರಕಾಸ್ತ್ರವನ್ನು ತೆಗೆದುಕೊಂಡು ಹೋಗುವದನ್ನು ಮತ್ತು ತಿರುಗಾಡುವುದನ್ನು ಪ್ರತಿಬಂಧಿಸಲಾಗಿದೆ.

ಕಲ್ಲುಗಳನ್ನು ಕ್ಷಾರ ಪದಾರ್ಥ ಇಲ್ಲವೇ ಸ್ಫೋಟಕ ವಸ್ತುಗಳು ಯಾವುದೇ ದಹನಕಾರಿ ವಸ್ತುಗಳು ಇತ್ಯಾದಿಗಳನ್ನು ಸದರಿ ಸ್ಥಳಕ್ಕೆ ತೆಗೆದುಕೊಂಡು ಹೋಗುವುದನ್ನು ಮತ್ತು ಶೇಖ–ರಿಸುವುದನ್ನು ನಿಷೇಧಿಸಲಾಗಿದೆ.

ಮನುಷ್ಯ ಶವಗಳ ಅಥವಾ ಅವುಗಳ ಆಕೃತಿ ಅಥ–ವಾ ಪ್ರತಿಮೆಗಳನ್ನು ಪ್ರದರ್ಶನ ಮಾಡುವುದನ್ನು ಪ್ರತಿಬಂಧಿಸಲಾಗಿದೆ.

ಸಾರ್ವಜನಿಕವಾಗಿ ಯಾವುದೇ ವ್ಯಕ್ತಿ ಪ್ರಚೋದನಾತ್ಮಕ ಹಾಗೂ ಉದ್ರೇಕಕಾರಿ ಹಾಡುಗಳು, ಕೂಗಾಟ ಮಾಡುವುದನ್ನು ಹಾಗೂ ವ್ಯಕ್ತಿಗಳ ತೇಜೋವಧೆ ಮಾಡುವಂತಹ ಚಿತ್ರಗಳು, ಚಿಹ್ನೆಗಳು, ಪ್ರತಿಕೃತಿಗಳು ಮುಂತಾದವುಗಳನ್ನು ಪ್ರದರ್ಶಿಸುವುದಾಗಲಿ ಹಾಗೂ ಸಾರ್ವಜನಿಕರ ಗಾಂಭೀರ್ಯ ಹಾಗೂ ನೈತಿಕತೆಗೆ ಭಂಗ ತರುವಂತಹ ಅಥವಾ ಕಾನೂನು ಮತ್ತು ಸುವ್ಯವಸ್ಥೆಗೆ ಭಂಗ ತರುವಂತಹ ಯಾವುದೇ ಕೃತ್ಯಗಳಲ್ಲಿ ತೊಡಗುವುದನ್ನು ನಿಷೇಧಿಸಲಾಗಿದೆ.

ಯಾವುದೇ ವ್ಯಕ್ತಿ ಸಾರ್ವಜನಿಕರಾಗಲಿ ಮೇಲೆ ವಿವ–ರಿಸಿದ ಮಾರಕಾಸ್ತ್ರಗಳು, ಸ್ಫೋಟಕ ವಸ್ತುಗಳು, ವಿನಾಶಕಾರಿ ವಸ್ತುಗಳು ಹಾಗೂ ಇತರೆ ಆಕ್ಷೇಪಾರ್ಹ ವಸ್ತುಗಳು ಹೊಂದಿದ್ದು ಕಂಡುಬಂದ ಕೂಡಲೇ ಅವುಗಳನ್ನು ವಶಪಡಿಸಿಕೊಳ್ಳಲು ಯಾವುದೇ ಪೊಲೀಸ್ ಅಧಿಕಾರಿಗಳಿಗೆ ಅಧಿಕಾರ ಇರುತ್ತದೆ.

ಅಂಥಹ ಮಾರಕಾಸ್ತ್ರಗಳನ್ನು ಸರಕಾರಕ್ಕೆ ಮುಟ್ಟುಗೋಲು ಹಾಕಿಕೊಳ್ಳಲಾಗುವುದು ಅಲ್ಲದೆ ಸಂಬಂಧಿಸಿದ ವ್ಯಕ್ತಿಗಳ ಮೇಲೆ ಕಾನೂನು ರೀತ್ಯ ಕ್ರಮ ಜರುಗಿಸಲಾಗುವುದು.

ಶವ ಸಂಸ್ಕಾರಕ್ಕೆ ಅಥವಾ ಮದುವೆ ಮತ್ತು ಧಾರ್ಮಿಕ ಮೆರವಣಿಗೆಗಳಿಗೆ ಈ ಆಜ್ಞೆ ಅನ್ವಯಿಸುವುದಿಲ್ಲ. ಮದುವೆ ಮತ್ತು ಧಾರ್ಮಿಕ ಮೆರವಣಿಗೆಗಳು ಯಾವತ್ತೂ ಚುನಾವಣಾ ನೀತಿ ಸಂಹಿತೆ ಉಲ್ಲಂಘನೆಯಾಗದಂತೆ ಕಾನೂನು ಮತ್ತು ಸುವ್ಯವಸ್ಥೆ ಧಕ್ಕೆ ತರದಂತೆ ನಿಯಮಗಳನ್ನು ಪಾಲಿಸುವುದು.

ಸದರಿ ಆಜ್ಞೆಯನ್ನು ಉಲ್ಲಂಘಿಸುವವರ ವಿರುದ್ಧ ಕಲಂ 188 ಭಾರತೀಯ ದಂಡ ಸಂಹಿತೆಯ ಪ್ರಕಾರ ಕ್ರಮವನ್ನು ಜರುಗಿಸಲಾಗುವುದು ಎಂದು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ದಲಿತರಿಬ್ಬರ ಹತ್ಯೆ ಆರೋಪ: ಕ್ರಮಕ್ಕೆ ಆಗ್ರಹಿಸಿ ದರಣಿ

ಬೆಂಗಳೂರು: ಇತ್ತೀಚೆಗೆ ಹೋಟೆಲ್ಲೊಂದರಲ್ಲಿ ನೀರು ಕುಡಿದ ವಿಚಾರಕ್ಕೆ ನಡೆದ ಗಲಾಟೆಯನ್ನೆ ಮುಂದಿಟ್ಟುಕೊಂಡು ಇಪ್ಪತ್ತು ದಿನಗಳ ಬಳಿಕ ಕಾರು ಹತ್ತಿಸಿ ಇಬ್ಬರು ದಲಿತರನ್ನು ಹತ್ಯೆಗೈದಿರುವ ಆರೋಪ ಕೇಳಿಬಂದಿದ್ದು, ಈ ಸಂಬಂಧ ದುಷ್ಕರ್ಮಿಗಳನ್ನು ಬಂಧಿಸುವಂತೆ ಆಗ್ರಹಿಸಿ ಇಲ್ಲಿನ ರಾಜಾನಕುಂಟೆ ಪೊಲೀಸ್ ಠಾಣೆ ಎದುರು ಶವವಿಟ್ಟು ಬೃಹತ್ ಪ್ರತಿಭಟನೆ ನಡೆಸಿ ಆಕ್ರೋಶ ಹೊರಹಾಕಲಾಯಿತು.

ಹೆಸರಘಟ್ಟ ಹೋಬಳಿಯ ಚಲ್ಲಹಳ್ಳಿ ನಿವಾಸಿಗಳಾದ ನಾಗರಾಜ್ ಹಾಗೂ ರಾಮಯ್ಯ ಎಂಬುವರನ್ನು ಉದ್ದೇಶ ಪೂರಕವಾಗಿ ಜಾತಿಯ ವಿಚಾರಕ್ಕೆ




ಕಾರು ಹತ್ತಿಸಿ ಹಾಡುಹಾಗಲೇ ಹತ್ಯೆ ಮಾಡಲಾಗಿದ್ದು, ಈ ಸಂಬಂಧ ಕೃತ್ಯವೆಸಗಿದ ವ್ಯಕ್ತಿಗಳ ವಿರುದ್ಧ ಕಠಿಣ ಕಾನೂನು ಕ್ರಮ ಕೈಗೊಳ್ಳುವಂತೆ ಗುರುವಾರ ಇಲ್ಲಿನ ಪ್ರತಿಭಟನಾ ನಿರತ ಮೃತರ ಸಂಬಂಧಿಕರು, ಬಿಎಸ್ಪಿ ನಾಯಕರು ಆಗ್ರಹಿಸಿದರು.

ಘಟನೆ ಸಂಬಂಧ ಇಲ್ಲಿನ ರಾಜಾನಕುಂಟೆ ಠಾಣಾ ಪೊಲೀಸರಿಗೆ ದೂರು ನೀಡಿರುವ ಮೃತರ ಸಂಬಂಧ ವೆಂಕಟೇಶ್, ಗುರುವಾರ ಮುಂಜಾನೆ ನಾಗರಾಜ್, ರಾಮಯ್ಯ ಹಾಗೂ ಗೋಪಾಲ್ ಎಂಬುವರು ಒಂದೇ ಬೈಕ್ನಲ್ಲಿ ಇಲ್ಲಿನ ಕೆಎಂಎಫ್ ಕಾರ್ಖಾನೆಗೆ ಕೆಲಸಕ್ಕೆ ಹೋಗುತ್ತಿದ್ದ ಸಂದರ್ಭದಲ್ಲಿ ಹಿಂಬದಿಯಿಂದ ಬಂದ ಕಾರು ಢಿಕ್ಕಿ ಹೊಡೆದಿದೆ.

ಇದರ ರಭಸಕ್ಕೆ ನಾಗರಾಜ್, ರಾಮಯ್ಯ ಸ್ಥಳದಲ್ಲಿಯೇ ಮೃತಪಟ್ಟರೆ, ಗೋಪಾಲ್ ಅವರು ಗಂಭೀರವಾಗಿ ಗಾಯಗೊಂಡು ಖಾಸಗಿ ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆಯುತ್ತಿದ್ದಾರೆ. ಇನ್ನೂ, ಈ ಕಾರನ್ನು ರೌಡಿಶೀಟರ್ ಭರತ್, ನಿಶಾಂತ್, ವಿನಯ್ ಸೇರಿದಂತೆ ಇತರರು ಶರವೇಗವಾಗಿ ಚಲಾಯಿಸಿಕೊಂಡು ಬಂದು ಉದ್ದೇಶ ಪೂರಕವಾಗಿ ಹತ್ಯೆ ಮಾಡಲಾಗಿದೆ ಎಂದು ಅವರು ಆರೋಪಿಸಿದ್ದಾರೆ.

20 ದಿನಗಳ ಹಿಂದೆ ಹಲ್ಲೆ: ಕಳೆದ ಇಪ್ಪತ್ತು ದಿನಗಳ ಹಿಂದೆ ಹೆಸರುಘಟ್ಟದಲ್ಲಿ ಹೋಟೆಲ್ನಲ್ಲಿ ನಾಗರಾಜ್ ನೀರು ಕುಡಿದ ವಿಚಾರಕ್ಕೆ ಭರತ್ ಎಂಬಾತ ಜಾತಿ ನಿಂದನೆ ಮಾಡಿ ಅವಾಚ್ಯ ಶಬ್ದಗಳಿಂದ ನಿಂತನೆ ಮಾಡಿದ್ದ. ಅಲ್ಲದೆ, ಚುನಾವಣೆ ಬಳಿಕೆ ಕೊಲೆ ಮಾಡುವುದಾಗಿ ಬಹಿರಂಗ ಬೆದರಿಕೆವೊಡ್ಡಿದ್ದ.ಇನ್ನೂ, ಈ ಭರತ್ ಈಗಾಗಲೇ ರೌಡಿಶೀಟರ್ ಆಗಿದ್ದು, ಈತನ ತಂದೆ ವಿರುದ್ಧವೂ ಅನೇಕ ಗಂಭೀರ ಆರೋಪಗಳಿವೆ. ಹೀಗಾಗಿ, ಭರತ್, ನಿಶಾಂತ್, ವಿನಯ್ ಎಂಬುವರ ವಿರುದ್ಧ ಕಠಿಣ ಕಾನೂನು ಕ್ರಮ ಜರುಗಿಸುವಂತೆ ಅವರು ದೂರಿನಲ್ಲಿ ಆಗ್ರಹಿಸಿದ್ದಾರೆ.

## ವಿದ್ಯಾರ್ಥಿಗಳ ಅತ್ಯುತ್ತಮ ಸಾಧನೆಗೆ ಬಿಇಓ ದಂಡಿನ್ ಮೆಚ್ಚುಗೆ

ಹುಕ್ಕೇರಿ : ಫಲಿತಾಂಶ ವೃದ್ಧಿಗೆ ವಿಭಿನ್ನ ಪ್ರಯೋಗಗಳನ್ನು ಪ್ರಯೋಗಿಸಿದ್ದ ಹುಕ್ಕೇರಿ ತಾಲೂಕು ಶಿಕ್ಷಣ ಇಲಾಖೆಗೆ ಯಶಸ್ಸು ಲಭಿಸಿದೆ. ಕಳೆದ ವರ್ಷಕ್ಕಿಂತ ಈ ಸಲದ 2022–23 ನೇ ಸಾಲಿನ ಎಸ್‌ಎಸ್‌ಎಲ್‌ಸಿ ಶೇಕಡಾವಾರು ಫಲಿತಾಂಶದಲ್ಲಿ ಏರಿಕೆಯಾಗಿದೆ.

ರಾಜ್ಯಕ್ಕೆ 12 ನೇ ಸ್ಥಾನವನ್ನು ಚಿಕ್ಕೋಡಿ ಶೈಕ್ಷಣಿಕ ಜಿಲ್ಲೆ ಪಡೆದಿದೆ. ಈ ಶೈಕ್ಷಣಿಕ ಜಿಲ್ಲೆ ವ್ಯಾಪ್ತಿಗೆ ಬರುವ 8 ವಲಯಗಳ ಪೈಕಿ ಹುಕ್ಕೇರಿ 5 ನೇ ಸ್ಥಾನ ಪಡೆಯುವ ಮೂಲಕ ಶೇಕಡಾವಾರು ಫಲಿತಾಂಶದಲ್ಲಿ ಹೆಚ್ಚಳ ಕಂಡಿದೆ. ತನ್ಮೂಲಕ ಶಿಕ್ಷಕ ಸಮೂಹ, ಪಾಲಕ–ಪೋಷಕರು ಮತ್ತು ವಿದ್ಯಾರ್ಥಿಗಳ ನೆಮ್ಮದಿಗೆ ಕಾರಣವಾಗಿದೆ.

ಹಲವು ರಚನಾತ್ಮಕ ಕಾರ್ಯಕ್ರಮಗಳನ್ನು ಪರಿಣಾಮಕಾರಿಯಾಗಿ ಅನುಷ್ಠಾನಗೊಳಿಸಿದ ಹಿನ್ನಲೆಯಲ್ಲಿ ಎಸ್‌ಎಸ್‌ಎಲ್‌ಸಿ ಫಲಿತಾಂಶದಲ್ಲಿ ಅತ್ಯುತ್ತಮ ಸಾಧನೆ ಮಾಡಲು ಸಾಧ್ಯವಾಗಿದೆ ಎಂದು ಬಿಇಓ ಮೋಹನ ದಂಡಿನ್ ಅವರು ಗುರುವಾರ ನಡೆದ ಸುದ್ಧಿಗೋಷ್ಠಿಯಲ್ಲಿ ತಿಳಿಸಿದರು.



2023 ರಲ್ಲಿ ನಡೆದ ಎಸ್‌ಎಸ್‌ಎಲ್‌ಸಿಯಲ್ಲಿ ಹುಕ್ಕೇರಿ ತಾಲೂಕು ಶೇ.89.78 ರಷ್ಟು ಗಳಿಸಿದ್ದು ಡಿಸ್ಟಿಂಕ್ಷನ್ ಮತ್ತು ಪ್ರಥಮ ದರ್ಜೆಯಲ್ಲಿ ಹೆಚ್ಚಿನ ವಿದ್ಯಾರ್ಥಿಗಳು ಉತ್ತೀರ್ಣರಾಗಿದ್ದಾರೆ. ಅದರಲ್ಲೂ ಗ್ರಾಮೀಣ ಮತ್ತು ಸರ್ಕಾರಿ ಪ್ರೌಢ ಶಾಲೆ ವಿದ್ಯಾರ್ಥಿಗಳ ಸಾಧನೆ ಮೆಚ್ಚುವಂಥ–ದ್ದಾಗಿದೆ ಎಂದು ಅವರು ಹೇಳಿದರು.

ತಾಲೂಕಿನಲ್ಲಿ 6817 ವಿದ್ಯಾರ್ಥಿಗಳು ನೊಂದಣಿಯಾಗಿದ್ದು 6676 ವಿದ್ಯಾರ್ಥಿಗಳು ಪರೀಕ್ಷೆಗೆ ಹಾಜರಾಗಿದ್ದರು. ಅದರಲ್ಲಿ ಒಟ್ಟು 5994 ವಿದ್ಯಾರ್ಥಿಗಳು ಉತ್ತೀರ್ಣರಾಗಿದ್ದು ಈ ಪೈಕಿ ಡಿಸ್ಟಿಂಕ್ಷನ್ 995, 3641 ಪ್ರಥಮ ದರ್ಜೆ, 1113 ದ್ವಿತೀಯ ದರ್ಜೆಯಲ್ಲಿ ಪಾಸಾಗಿದ್ದಾರೆ. ತಾಲೂಕಿಗೆ ಶಿರಗಾಂವ ಸರ್ಕಾರಿ ಪ್ರೌಢ ಶಾಲೆಯ ಬಾಬು ಸಿದ್ದಲಿಂಗ ಗೌರಿ–ಶೇ.99.2 (620)–ಪ್ರಥಮ, ಗುಡಸ ಬಿ.ಎಂ.ಅಮ್ಮಣಗಿ ಪ್ರೌಢ ಶಾಲೆಯ ಐಶ್ವರ್ಯಾ ಮಹಾದೇವ ತಂಬಡಿ–ಶೇ.98.71 (617)–ದ್ವಿತೀಯ, ಬೆಲ್ಲದ ಬಾಗೇವಾಡಿ ಭರತೇಶ ಪ್ರೌಢ ಶಾಲೆಯ ದಿವ್ಯಾ ಕೃಷ್ಣಮೂರ್ತಿ ಹಂಜಿ–ಶೇ.98.72 (617)–ದ್ವಿತೀಯ, ಇಶ್ವರಿ ಮಲಕಯ್ಯಾ ಮಠದ–ಶೇ.98.56 (616)–ತೃತೀಯ ಸ್ಥಾನ ಪಡೆದಿದ್ದಾರೆ ಎಂದು ಅವರು ಮಾಹಿತಿ ನೀಡಿದರು.

## ಕರ್ನಾಟಕ ವಿಧಾನಸಭಾ ಸಾರ್ವತ್ರಿಕ ಚುನಾವಣೆ ಮತ ಎಣಿಕೆ: ಮದ್ಯ ಮಾರಾಟ ನಿಷೆಧ

ಬೆಳಗಾವಿ: ಕರ್ನಾಟಕ ವಿಧಾನಸಭಾ ಸಾರ್ವತ್ರಿಕ ಚುನಾವಣೆ –2023 ಹಿನ್ನೆಲೆಯಲ್ಲಿ ಬೆಳಗಾವಿ ಜಿಲ್ಲೆಯಲ್ಲಿ ಒಟ್ಟು 18 ವಿಧಾನಸಭಾ ಕ್ಷೇತ್ರಗಳ ಮತ ಎಣಿಕೆ ಕಾರ್ಯವು ಮೇ.13 2023 ರಂದು ಜರುಗಲಿದ್ದು, ಕಾನೂನು ಸುವ್ಯವಸ್ಥೆ ಕಾಪಾಡುವ ಮತ್ತು ಚುನಾವಣಾ ಪ್ರಕ್ರಿಯೆಗಳ ಮುಕ್ತ ಹಾಗೂ ನಿಷ್ಪಕ್ಷಪಾತ ರೀತಿಯಲ್ಲಿ ಶಾಂತಿಯುತವಾಗಿ ನಡೆಯಬೇಕೆಂಬ ದೃಷ್ಟಿಯಿಂದ ಹಾಗೂ ಈ ಸಮಯದಲ್ಲಿ ಯಾವುದೇ ಅಹಿತಕರ ಘಟನೆಗಳು ನಡೆಯದಂತೆ ಮುಂಜಾಗ್ರತಾ ಕ್ರಮವಾಗಿ ಮೇ.08 2023 ರಂದು ಸಂಜೆ 5 ಗಂಟೆಯಿಂದ ಮೇ.11 ರ ಬೆಳಿಗ್ಗೆ 11 ಗಂಟೆಯವರೆಗೆ ಹಾಗೂ ಮೇ.13 ಮತ ಎಣಿಕೆಯ ದಿನದಂದು ಬೆಳಿಗ್ಗೆ 6 ಗಂಟೆಯಿಂದ ಮೇ.14 2023 ರ ಬೆಳಿಗ್ಗೆ 6 ಗಂಟೆಯವರೆಗೆ ಬೆಳಗಾವಿ ಜಿಲ್ಲೆಯಾದ್ಯಂತ ಎಲ್ಲ ಮದ್ಯದ ಅಂಗಡಿ/ಬಾರ್‌ಗಳನ್ನು ಬಂದ್ ಇಡಲು ಹಾಗೂ ಎಲ್ಲ ರೀತಿಯ ಮದ್ಯ ತಯಾರಿಕಾ ಘಟಕಗಳು/ಸಾಗಾಣಿಕೆ/ಸಂಗ್ರಹಣೆಯನ್ನು/ಮಾರಾಟ ಮಳಿಗೆಗಳನ್ನು ಬಂದ್ ಇಡಲು ಜಿಲ್ಲಾ ಚುನಾವಣಾ ಅಧಿಕಾರಿಗಳು ಹಾಗೂ ಜಿಲ್ಲಾ ದಂಡಾಧಿಕಾರಿಗಳಾದ ನಿತೇಶ್ ಕೆ ಪಾಟೀಲ್ ಅವರು ಆದೇಶಿಸಿದ್ದಾರೆ. ಆದೇಶದಲ್ಲಿಯ ಸೂಚನೆಯನ್ನು ಉಲ್ಲಂಘಿಸಿದಲ್ಲಿ ಅಂಥವರು ಪ್ರಜಾ ಪ್ರತಿನಿಧಿ ಕಾಯ್ದೆ 1951 ರ ಕಲಂ 135 ಅ (2) ಮತ್ತು (3) ರನ್ವಯ ಶಿಕ್ಷೆಗೆ ಒಳಪಡುವರು ಎಂದು ತಿಳಿಸಿದ್ದಾರೆ.



CHAITRA S CHANDAPPGOL TANISHA S KANABARGI RASHMI B ITAGI

## ಭರತೇಶ ಸೆಂಟ್ರಲ್ ಶಾಲೆ ಸಿಬಿಎಸ್‌ಸಿ ವಿದ್ಯಾರ್ಥಿಗಳ ಸಾಧನೆ

ಬೆಳಗಾವಿ; ಹಲಗಾ ಗ್ರಾಮದಲ್ಲಿರುವ ಭರತೇಶ ಸೆಂಟ್ರಲ ಶಾಲೆ ( ಸಿಬಿಎಸ್‌ಸಿ ) ಶಾಲೆಯ ವಿದ್ಯಾರ್ಥಿಗಳು 10 ನೇ ತರಗತಿಯ ಫಲಿತಾಂಶದಲ್ಲಿ ಉತ್ತಮ ಸಾಧನೆಗೈದಿದ್ದು ಶಾಲೆಯ ಫಲಿತಾಂಶ ಶೇ.100 ರಷ್ಟಾಗಿದೆ.

ಶಾಲೆಯ ವಿದ್ಯಾರ್ಥಿನಿ ಚೈತ್ರಾ ಚಂದಪ್ಪಗೋಳ ಶೇ. 85 ರಷ್ಟು ಅಂಕ ಪಡೆದು ಪ್ರಥಮ ಸ್ಥಾನ ಪಡೆದುಕೊಂಡಿದ್ದಾರೆ.

ತನಿಷಾ ಕಣಬರ್ಗಿ ಶೇ.81 ಅಂಕ ಪಡದು ದ್ವಿತಿಯ ಸ್ಥಾನ, ಹಾಗೂ ರಶ್ಮಿ ಇಟಗಿ ಶೇ. 80.6 ಅಂಕ ಪಡೆದು ತೃತಿಯ ಸ್ಥಾನ ಪಡೆದುಕೊಂಡಿದ್ದಾರೆ.

ವಿದ್ಯಾರ್ಥಿಗಳ ಈ ಸಾಧನೆಗೆ ಭರತೇಶ ಆಡಳಿತ ಮಂಡಳಿ, ಪ್ರಾಂಶುಪಾಲ ಹಾಗೂ ಶಿಕ್ಷಕರು ಮೆಚ್ಚುಗೆ ವ್ಯಕ್ತ ಪಡಿಸಿದ್ದಾರೆ.

## ಇಂದು ಮುಂಜಾನೆ ಮತ ಎಣಿಕೆಗೆ ಜಿಲ್ಲಾಡಳಿತ ಸಕಲ ಸಿದ್ಧತೆ

ಬೆಳಗಾವಿ : ಬೆಳಗಾವಿ ಜಿಲ್ಲೆಯ ಎಲ್ಲ 18 ವಿಧಾನಸಭಾ ಮತಕ್ಷೇತ್ರದ ಮತ ಎಣಿಕೆ ಬೆಳಗಾವಿಯ ಆರ್ ಪಿಡಿ ಕಾಲೇಜಿನಲ್ಲಿ ಶನಿವಾರ ಮುಂಜಾನೆ 8 ಗಂಟೆಯಿಂದ ನಡೆಯಲಿದ್ದು, ಮಧ್ಯಾಹ್ನ 12 ಗಂಟೆಯವರೆಗೆ ಫಲಿತಾಂಶ ಮತ್ತು ಪಕ್ಷಗಳ ಬಲಾಬಲ ಸ್ಪಷ್ಟವಾಗಲಿದೆ.

ಜಿಲ್ಲಾ ಚುನಾವಣಾಧಿಕಾರಿಯೂ ಆಗಿರುವ ಜಿಲ್ಲಾಧಿಕಾರಿ ನಿತೇಶ ಪಾಟೀಲ ಅವರು ಶುಕ್ರವಾರ ನಗರದ ಆರ್ ಪಿಡಿ ಕಾಲೇಜನಲ್ಲಿ ಸ್ಥಾಪನೆ ಮಾಡಲಾದ ಸ್ಟ್ರಾಂಗ್ ರೂಂ ಬಳಿ ಸುದ್ದಿಗಾರರೊಂದಿಗೆ ಮಾತನಾಡಿದರು.

ಆರ್ ಪಿ ಡಿ ಕಾಲೇಜಿನಲ್ಲಿ ಸ್ಥಾಪಿಸಲಾಗಿರುವ ಮತ ಎಣಿಕೆ ಕೇಂದ್ರ ರಾಜ್ಯದಲ್ಲಿ ದೊಡ್ಡ ಮತ ಏಣಿಕೆ ಕೇಂದ್ರವಾಗಿದೆ. 8 ಗಂಟೆಗೆ ಪೋಸ್ಟಲ್ ಬ್ಯಾಲೆಟ್ ಪೇಪರ್ ಕೌಂಟಿಗ್ ಮಾಡಲಾಗುವುದು.

8.30ರಿಂದ ಇವಿಎಂ ಮತ ಎಣಿಕೆ ಪ್ರಾರಂಭವಾಗುತ್ತದೆ. ಒಂದು ಟೇಬಲ್ ನಲ್ಲಿ 500 ಮತಗಳನ್ನು ಎಣಿಕೆ ಮಾಡಲು



ಸಾಧ್ಯವಾಗುತ್ತದೆ. ಮಧ್ಯಾಹ್ನದವರೆಗೆ ಎಲ್ಲ ಫಲಿತಾಂಶ ಹೊರ ಬರುವ ಸಾಧ್ಯತೆ ಇದೆ ಎಂದು ಅವರು ತಿಳಿಸಿದರು.

ಮೂರು ಹಂತದಲ್ಲಿ ಭದ್ರತೆ ವ್ಯವಸ್ಥೆ ಮಾಡಲಾಗಿದೆ. ಗುರುತಿನ ಚೀಟಿ ಇಲ್ಲದೇ ಯಾರಿಗೂ ಒಳಗಡೆ ಬಿಡುವುದಿಲ್ಲ.

ಸುಮಾರು 5 ಸಾವಿರ ಜನ ಇರುವುದ–ರಿಂದ ಏಜೆಂಟರಿಗೂ ಗುರುತಿನ ಚೀಟಿ ನೀಡಲಾಗಿದೆ.

200 ಮೀಟರ್ ಹೊರಗಡೆ ಅಭ್ಯರ್ಥಿಗಳ ಬೆಂಬಲಿಗರು ವಿಜಯೋತ್ಸವ ಮಾಡಬಹುದು ಎಂದರು.

ನಗರ ಪೊಲೀಸ್ ಆಯುಕ್ತ ಡಾ. ಎಂ. ಬಿ. ಬೋರಲಿಂಗಯ್ಯ ಮಾತನಾಡಿ, ಮೇ.13 ರಂದು ಚುನಾವಣೆಯ ಮತ ಎಣಿಕೆ ಸಂದರ್ಭದಲ್ಲಿ ಪೊಲೀಸ್ ಬಿಗಿ ಬಂದೋಬಸ್ತ್ ಏರ್ಪಡಿಸಲಾಗಿದೆ.

ಸ್ಟ್ರಾಂಗ್ ರೂಂ ಹೊರಗಡೆ ಸೂಕ್ತ ಪೊಲೀಸ್ ಬಂದೋಬಸ್ತ ಏರ್ಪಡಿಸಲಾಗಿದೆ. 18 ವಿಧಾನಸಭಾ ಕ್ಷೇತ್ರದ ಜನರು ಬರುತ್ತಾರೆ. ಮತ ಎಣಿಕೆ ಎಜೆಂಟ್, ಅಧಿಕಾ–ರಿಗಳು ಸೇರಿದಂತೆ ಸುಮಾರು 5 ಸಾವಿರ ಜನ ಆಗಮಿಸುವ ಸಾಧ್ಯತೆ ಇದೆ. ಆದ್ದರಿಂದ ನಗರ ಪೊಲೀಸ್ ಇಲಾಖೆಯಿಂದ ಸಕಲ ಸಿದ್ಧತೆ ಮಾಡಿಕೊಳ್ಳಲಾಗಿದೆ ಎಂದರು.

ಇಂದು ಬೆಳಗ್ಗೆ 5 ಗಂಟೆಯಿಂದ ಮತ ಎಣಿಕೆ ಕೇಂದ್ರದ ಸುತ್ತ ಕೆಎಸ್ ಆರ್ ಪಿ ತುಕಡಿ ಸೇರಿದಂತೆ ಸುಮಾರು 1,500 ಜನ ಪೊಲೀಸ್ ಸಿಬ್ಬಂದಿ ನೇಮಕ ಮಾಡಲಾಗುತ್ತಿದೆ. ಕಾನೂನು ಸುವ್ಯವಸ್ಥೆ ಕಾಪಾಡುವ ನಿಟ್ಟಿನಲ್ಲಿ ಅಲ್ಲಲ್ಲಿ ಪೊಲೀಸ್ ನಿಯೋಜನೆ ಮಾಡಲಾಗಿದೆ ಎಂದರು.

# ಭಾರತದ ಸಂವಿಧಾನವೇ ಒಂದು ಅನ್ವಯಿಕ ರಾಜ್ಯಶಾಸ್ತ್ರವಾಗಿದೆ: ಶಿವಾನಂದ ಜಾಮದಾರ

ಬೆಳಗಾವಿ: ಭಾರತದ ಸಂವಿಧಾನದ ರಚನಾಕಾರರು ಯಾರು ರಾಜ್ಯಶಾಸ್ತ್ರವನ್ನು ಓದಿದವರಲ್ಲ ಆದರೂ ಜಗತ್ತು ಮೆಚ್ಚುವಂತಹ ಸಂವಿಧಾನವನ್ನು ನೀಡಿದರು. ಅವರೆಲ್ಲರೂ ರಾಜಕೀಯ ತತ್ವಜ್ಞಾನದ ಆಳವಾದ ಜ್ಞಾನವನ್ನು ಹೊಂದಿದ್ದರು.

ರಾಜ್ಯಶಾಸ್ತ್ರ ಪ್ರಾಧ್ಯಾಪಕರು ಸುಮಾರು 10000 ಪುಟಗಳಷ್ಟು ಇರುವ ಸಂವಿಧಾನ ರಚನೆಯ ನಡಾವಳಿಯನ್ನು ಓದಬೇಕು. ರಾಜ್ಯಶಾಸ್ತ್ರವು ಕೇವಲ ಸೈದ್ಧಾಂತಿಕ ವಿಷಯವಾಗಿರದೆ ಒಂದು ಅನ್ವಯಿಕ ವಿಷಯವಾಗಿದೆ.

ಅದಕ್ಕೆ ಉತ್ತಮ ಉದಾಹರಣೆಯೇ ನಮ್ಮ ಸಂವಿಧಾನ. ಭಾರತದ ಸಂವಿಧಾನವು ಅನ್ವಯಿಕ ರಾಜ್ಯಶಾಸ್ತ್ರವಾಗಿದೆ ಎಂದು ಕರ್ನಾಟಕ ರಾಜ್ಯ ಸರ್ಕಾರದ ನಿವೃತ್ತ ಪ್ರಧಾನ ಕಾರ್ಯದರ್ಶಿಗಳಾದ ಶಿವಾನಂದ ಎಂ. ಜಾಮದಾರ ಅಭಿಪ್ರಾಯ ಪಟ್ಟಿದ್ದಾರೆ.

ರಾಣಿ ಚನ್ನಮ್ಮ ವಿಶ್ವವಿದ್ಯಾಲಯ ಕಾಲೇಜು ರಾಜ್ಯಶಾಸ್ತ್ರ ಪ್ರಾಧ್ಯಾಪಕರ ಸಂಘ ಹಾಗೂ ಸಂಗೊಳ್ಳಿ ರಾಯಣ್ಣ ಪ್ರಥಮ ದರ್ಜೆ ಘಟಕ ಮಹಾವಿದ್ಯಾಲಯದ ರಾಜ್ಯಶಾಸ್ತ್ರ ವಿಭಾಗದ ಸಂಂ–ಮುಕ್ತಾಶ್ರಯದಲ್ಲಿ "ಒಂದು ಅನ್ವಯಿಕ ವಿಜ್ಞಾನವಾಗಿ ರಾಜ್ಯಶಾಸ್ತ್ರ ಹಾಗೂ ರಾಜ್ಯಶಾಸ್ತ್ರ ಶಿಕ್ಷಕರ ಪಾತ್ರ ಕು–ರಿತು ಒಂದು ದಿನದ ರಾಜ್ಯಮಟ್ಟದ ಕಾರ್ಯಗಾರವನ್ನು ದಿನಾಂಕ 12–



05–2023 ರಂದು ನಗರದ ಸಂಗೊಳ್ಳಿ ರಾಯಣ್ಣ ಪ್ರಥಮ ದರ್ಜೆ ಘಟಕ ಮಹಾವಿದ್ಯಾಲಯದ ಸಭಾಂಗಣದಲ್ಲಿ ಹಮ್ಮಿಕೊಳ್ಳಲಾಗಿ–ತ್ತು. ಈ ಕಾರ್ಯಗಾರದಲ್ಲಿ ವಿಶೇಷ ಸಂಪನ್ಮೂಲ ವ್ಯಕ್ತಿಯಾಗಿ ಆಗಮಿಸಿದ ಜಾಮದಾರ ಅವರು ರಾಜ್ಯಶಾಸ್ತ್ರವು ಗ್ರೀಕದಿಂದ ಹಿಡಿದು ಇಂದಿನ ಆಧುನಿಕ ಜಗತ್ತಿನವರೆಗೆ ಅನ್ವಯಿಕ ವಿಜ್ಞಾನವಾಗಿ ಹೊರಹೊಮ್ಮುತ್ತಿದೆ. ಅದು ಮಾನವ ಸ್ವಭಾವದ ಮೇಲೆ ಕೇಂದ್ರಿಕೃತವಾಗಿದೆ. ನಾವು ರಾಜ್ಯಶಾಸ್ತ್ರವನ್ನು ಆಳವಾಗಿ ತಿಳಿದುಕೊಳ್ಳಬೇಕಾದರೆ ಕ್ಲಾಸಿಕ್‌ಗಳನ್ನು ಓದುವುದು ಅವಶ್ಯಕವಾಗಿದೆ. ಪ್ಲೇಟೋನ ದಿ ರಿಪಬ್ಲಿಕ್, ಅರಿಸ್ಟಾಟಲ್‌ನ ಪಾಲಿಟಿಕ್ಸ್, ಥಾಮಸ್ ಹಾಬ್ಸ್‌ನ ದಿ ಲೇವಿಥಾನ್, ನಿಕೊಲೊ ಮೆಕೆವಲ್ಲಿಯ ದಿ ಪ್ರಿನ್ಸ್, ಕೌಟಿಲ್ಯನ ಅರ್ಥಶಾಸ್ತ್ರ ಮುಂತಾದ ಮಹಾನ್ ಗ್ರಂಥಗಳ ಅಧ್ಯಯನ ಅವಶ್ಯಕವಾಗಿದೆ ಎಂದು ಹೇಳಿದರು.

ಉದ್ಘಾಟಕರಾಗಿ ರಾಣಿ ಚನ್ನಮ್ಮ ವಿಶ್ವವಿದ್ಯಾಲಯದ ರಾಚವಿಯ ಮೌಲ್ಯಮಾಪನ ಕುಲಸಚಿವರಾದ ಪ್ರೊ. ಶಿವಾನಂದ ಎಸ್. ಗೊರನಾಳೆ ಅವರು ಮಾತನಾಡಿ ರಾಜ್ಯಶಾಸ್ತ್ರ ಶಿಕ್ಷಕರ ಸಂಘದ ಸಮಾಜಮುಖಿ ಹಾಗೂ ವೃತ್ತಿಪರತೆ ಹಾಗೆ ಮುಂದುವರೆಯಲಿ ಎಂದು ಶ್ಲಾಘಿಸಿದರು.

ಅಧ್ಯಕ್ಷತೆ ವಹಿಸಿದ ಕಾಲೇಜಿನ ಪ್ರಾಚಾರ್ಯರಾದ ಡಾ. ಎಸ್.ಎಸ್. ತೇರದಾಳ ಮಾತನಾಡಿ ರಾಜ್ಯಶಾಸ್ತ್ರ ವಿಷಯವು ಸಮಾಜ ವಿಜ್ಞಾನದಲ್ಲಿ ಅತಿ ಮಹತ್ವದ ವಿಷಯವಾಗಿದ್ದು, ಅದು ನಾಗರಿಕರಲ್ಲಿ ಸ್ಥಿತಪ್ರಜ್ಞೆ ಮೂಡಿಸುವಲ್ಲಿ ಮಹತ್ವದ ಪಾತ್ರವಹಿಸುತ್ತದೆ ಎಂದು ಅಭಿಪ್ರಾಯಪಟ್ಟರು.

ಇದೇ ಸಂದರ್ಭದಲ್ಲಿ ನಿವೃತ್ತರಾದ ಪಿ.ಆರ್. ಜೋಶಿ ಅವರನ್ನು ಅಲ್ಲದೇ, ವಿವಿಧ ಸಾಧನೆಗೈದ ಹಾಗೂ ಪಿಹೆಚ್.ಡಿ. ಪದವಿ ಪಡೆದ ಪ್ರಾಧ್ಯಾಪಕರನ್ನು ಸನ್ಮಾನಿಸಲಾಯಿತು.

ರಾಜ್ಯಶಾಸ್ತ್ರ ವಿಭಾಗದ ಮುಖ್ಯಸ್ಥರಾದ ಪ್ರೊ. ಕಮಲಾಕ್ಷಿ ತಡಸದ ಗೌರವಾನ್ವಿತ ಅತಿಥಿಗಳಾಗಿ ಆಗಮಿಸಿದ್ದರು.

ಸಮಾರಂಭವನ್ನು ಎಸ್. ಎಂ. ಬಿರಾದಾರ ನಿರೂಪಿಸಿ, ಡಾ. ಎಸ್. ಪಿ. ತಳವಾರ ವಂಧಿಸಿದರು. ಅನಿಲಕುಮಾರ ಅಸೋದೆ ಪ್ರಾರ್ಥಿಸಿದರು. ಸಂಘದ ಅಧ್ಯಕ್ಷರಾದ ಡಾ. ವಿ. ಬಿ. ಪಾಟೀಲ ಸ್ವಾಗತಿಸಿದರು. ಗೌರವಾಧ್ಯಕ್ಷರಾದ ಬಿ.ಜಿ. ಪಾಟೀಲ ಪರಿಚಯಿಸಿದರು.

ಕಾರ್ಯ ಗಾರದಲ್ಲಿ ಕಾರ್ಯದರ್ಶಿಗಳಾದ ಬಿ.ಎಸ್. ಬಾಪಗೊಂಡ, ರಾಜ್ಯಶಾಸ್ತ್ರ ವಿಷಯದ ಮೌಲ್ಯಮಾಪನ ಮೇಲ್ವಿಚಾರಕರಾದ ಡಾ. ಎಸ್. ಹೆಚ್. ಪಾಟೀಲ ಹಾಗೂ ರಾಚವಿ ರಾಜ್ಯಶಾಸ್ತ್ರ ಸಂಘದ ಪಧಾಧಿಕಾರಿಗಳು ಹಾಗೂ ಬೆಳಗಾವಿ, ಬಾಗಲಕೋಟೆ ಹಾಗೂ ವಿಜಯಪುರದ ಪದವಿ ಕಾಲೇಜುಗಳ ರಾಜ್ಯಶಾಸ್ತ್ರ ಪ್ರಾಧ್ಯಾಪಕರುಗಳು ಉಪಸ್ಥಿತರಿದ್ದರು.

# ನಮ್ಮ ನಾಯಕರೇ ಗೆಲ್ಲೋದು ಅಂತ ಬೆಟ್ಟಿಂಗ್ ಅಗ್ರಿಮೆಂಟ್: ಜಮೀನು ಮಾರಾಟಕ್ಕೆ ಮುಂದಾದ ಮುಖಂಡ

ಮೈಸೂರು : ಕರ್ನಾಟಕ ವಿಧಾನಸಭಾ ಚುನಾವಣೆ ಮುಗಿದಿದ್ದು, ರಾಜ್ಯದ ಜನರು ಆ ಪಕ್ಷ ಗೆಲ್ಲುತ್ತೆ, ಈ ಪಕ್ಷ ಗೆಲ್ಲುತ್ತೆ ಅಂತ ತಮ್ಮದೇ ಲೆಕ್ಕಾಚಾರದಲ್ಲಿ ತೊಡಗಿದ್ದಾರೆ.

ಅಲ್ಲದೇ ಬಹುತೇಕ ಕಡೆ ಬೆಟ್ಟಿಂಗ್ ಅಬ್ಬರ ಜೋರಾಗಿದೆ. ಆಯಾ ಪಕ್ಷದ ಕಾರ್ಯಕರ್ತರು ಹಾಗೂ ಅಭಿಮಾನಿಗಳು ಪರಸ್ಪರ ಬೆಟ್ಟಿಂಗ್‌ನಲ್ಲಿ ತೊಡಗಿದ್ದಾರೆ.

ಈ ಮಧ್ಯೆ ಜಮೀನು ಮಾರಾಟಕ್ಕೂ ಮುಂದಾಗಿರುವಂತಹ ಘಟನೆ ಮೈಸೂರ ಜಿಲ್ಲೆಯಲ್ಲಿ ನಡೆದಿದೆ.

ಪಿರಿಯಾಪಟ್ಟಣ ತಾಲೂಕಿನ ಹಾರನಹಳ್ಳಿ ಗ್ರಾಮದ ಕಾಂಗ್ರೆಸ್ ಮುಖಂಡ ಯೋಗೇಶಗೌಡ ಚುನಾವಣಾ ಬೆಟ್ಟಿಂಗ್‌ಗಾಗಿ ತಮ್ಮ ಜಮೀನು ಮಾರಾಟ ಮಾಡಲು ಮುಂದಾಗಿದ್ದು, ಇವರ ಹುಚ್ಚುತನ ಗ್ರಾಮದಲ್ಲಿ ಅಚ್ಚರಿ ಮೂಡಿಸಿದೆ.

ಪಿರಿಯಾಪಟ್ಟಣ ಕ್ಷೇತ್ರದ ಕಾಂಗ್ರೆಸ್ ಅಭ್ಯರ್ಥಿ ಗೆಲ್ತಾರೆಂದು 1 ಎಕರೆ 37 ಗುಂಟೆ ಜಮೀನನ್ನು ಬೆಟ್ಟಿಂಗ್‌ಗೆ ಇಟ್ಟಿರುವ ಕಾಂಗ್ರೆಸ್ ಮುಖಂಡ ಯೋಗೇಶ್ ಗೌಡ ಈ ಬಗ್ಗೆ ಮಾತನಾಡಿರುವ ವಿಡಿಯೋ ವೈರಲ್ ಆಗಿದೆ.



ಪಿರಿಯಾಪಟ್ಟಣ ಕ್ಷೇತ್ರದಲ್ಲಿ ಕೈ ಅಭ್ಯರ್ಥಿ ಕೆ.ವೆಂಕಟೇಶ್ ಹಾಗೂ ಜೆಡಿಎಸ್ ಅಭ್ಯರ್ಥಿ ಕೆ.ಮಹದೇವ್ ನಡುವೆ ಜಿದ್ದಾಜಿದ್ದಿನ ಪೈಪೋಟಿ ಇದೆ.

ಇನ್ನೊಂದೆಡೆ ಮೈಸೂರಿನ ಹೆಚ್ ಡಿ ಕೋಟೆ ಕ್ಷೇತ್ರದಲ್ಲಿ ಬೆಟ್ಟಿಂಗ್ ಅಗ್ರಿಮೆಂಟ್ ಫೋಟೋವೊಂದು ಸ್ಥಳೀಯರ ವಾಟ್ಸಾಪ್‌ಗಳಲ್ಲಿ ಹ–ರಿದಾಡುತ್ತಿದೆ.

ಜಯರಾಮು ನಾಯಕ, ಪ್ರಕಾಶ್ ಹಾಗೂ ಶಿವರಾಜ್ ನಡುವೆ ಬೆಟ್ಟಿಂಗ್‌ಗೆ ಸಂಬಂಧಿಸಿದಂತೆ ಅಗ್ರಿಮೆಂಟ್ ಆಗಿದೆ.

ಛಾಪಾ ಕಾಗದದಲ್ಲಿ 5ಲಕ್ಷದ ಬೆಟ್ಟಿಂಗ್ ಅಗ್ರಿಮೆಂಟ್ ಮಾಡಿಸಿಕೊಂಡಿದ್ದು, ಇದು ವೈರಲ್ ಆಗಿದೆ.

ಜಯರಾಮ ನಾಯ್ಕ ಕಾಂಗ್ರೆಸ್ ಅಭ್ಯರ್ಥಿ ಪರ ಬೆಟ್ಟಿಂಗ್ ಕಟ್ಟಿದ್ದರೆ, ಪ್ರಕಾಶ್ ಹಾಗೂ ಶಿವರಾಜ್ ಜೆಡಿಎಸ್ ಅಭ್ಯರ್ಥಿ ಪರ ಬೆಟ್ಟಿಂಗ್ ಕಟ್ಟಿದ್ದಾರೆ.

ಇಬ್ಬರೂ ತಲಾ 5 ಲಕ್ಷ ಬೆಟ್ಟಿಂಗ್ ಕಟ್ಟಿದ್ದು, ಈ ಬಗ್ಗೆ ಛಾಪಾ ಕಾಗದದಲ್ಲಿ ಅಗ್ರಿಮೆಂಟ್ ಮಾಡಿಕೊಂಡಿದ್ದಾರೆ.

ಇವರಿಬ್ಬರು ಸೇರಿಸಿದ 10 ಲಕ್ಷ ಹಣವನ್ನು ಪೂಜಾ ಎಲೆಕ್ಟ್ರಾನಿಕ್ ಅಂಗಡಿ ಮಾಲೀಕ ನೇಮಿಚಂದ್ ಬಳಿ ನೀಡಿರುವ ಬಗ್ಗೆ ಅಗ್ರಿಮೆಂಟ್‌ನಲ್ಲಿ ಉಲ್ಲೇಖಿಸಿದ್ದು, ಒಂದು ವೇಳೆ ಬಿಜೆಪಿ ಗೆದ್ದರೆ ಇಬ್ಬರು ತಮ್ಮ ಹಣ ತಾವು ವಾಪಸ್ಸು ಪಡೆಯುವ ಬಗ್ಗೆ ಒಪ್ಪಂದ ಮಾಡಿಕೊಳ್ಳಲಾಗಿದೆ.

## ವಿದ್ಯುತ್ ನಿಲುಗಡೆ

ಬೆಳಗಾವಿ: ದಿನಾಂಕ 21.08.2021 ರಂದು ಬೆಳಿಗ್ಗೆ 10.00 ಘಂಟೆಯಿಂದ ಸಾಯಂಕಾಲ 06.00 ಘಂಟೆಯವರೆಗೆ ಹುವಿಸಕಂನಿ ವತಿಯಿಂದ ತುರ್ತು ನಿರ್ವಹಣಾ ಕಾರ್ಯಗಳನ್ನು ಕೈಗೊಳ್ಳುತ್ತಿರುವುದ–ರಿಂದ 110 ಕೆ.ವ್ಹಿ. ಹೊನಗಾ ಉಪಕೇಂದ್ರದಿಂದ ಸರಬರಾಜು ಆಗುವ ಎಫ್–05, ಸಿದ್ದಗಂಗಾ ಐಯಿಲ್ ಮಿಲ್ ಫೀಡರ್ ಮೇಲೆ ಬರುವ ಗೋಮಟೇಶ ಗ್ರಾನೈಟ್ಸ, ಮರಾಠಾ ಮಂಡಳ ಕಾಲೇಜ, ಜಿನಾಬಕುಲ್, ಪಿನಿಕ್ಸ ಸ್ಕೂಲ್, ರಾಣಿಚನ್ನಮ್ಮ ಯುನಿವರ್ಸಿಟ್ಟಿ , ಶೇಖ ಕಾಲೇಜ, ಸಿದ್ದೇಶ್ವರ ಪೆಟ್ರೋಲ್ ಪಂಪ್, ಮಾಳಗಿ ಪೆಟ್ರೋಲ್ ಪಂಪ್, ಮತ್ತು ಸುತ್ತಮುತ್ತಲಿನ ಪ್ರದೇಶಗಳಿಗೆ ವಿದ್ಯುತ್ ಸರಬರಾಜಿನಲ್ಲಿ ವ್ಯತ್ಯಯವಾಗಲಿದೆ ಎಂಬ ವಿಷಯವನ್ನು ಸಾರ್ವಜನಿಕ ಹಿತದೃಷ್ಟಿಯಿಂದ ಪತ್ರಿಕಾ ಪ್ರಕಟಣೆ ನೀಡುವಂತೆ ಈ ಮೂಲಕ ವಿನಂತಿಸಲಾಗಿದೆ.

# ಲೋಕಾಯುಕ್ತ ಬಲೆಗೆ ಬಿದ್ದ ಎಂಜಿನಿಯರ್

ಗದಗ : ಗದಗ– ಬೆಟಗೇರಿ ನಗರಸಭೆ ಸಹಾಯಕ ಎಂಜಿನಿಯರ್ ರಸ್ತೆ ಕಾಮಗಾರಿಯ ಬಿಲ್ ಮಾಡಿಕೊಡಲು 1.50 ಲಕ್ಷ ಲಂಚದ ಹಣ ಪಡೆಯುವಾಗ ಲೋಕಾಯುಕ್ತ ಪೊಲೀಸರಿಗೆ ರೆಡ್ ಹ್ಯಾಂಡ್ ಆಗಿ ಸಿಕ್ಕಿಬಿದ್ದ ಘಟನೆ ನಡೆದಿದೆ.

ಗದಗ–ಬೆಟಗೇರಿ ನಗರಸಭೆಯ ಸಹಾಯಕ ಎಂಜಿನಿಯರ್ ವೀರೇಂದ್ರ ಸಿಂಗಾ ಕಾಟೇವಾಲ ಅವರು, ಗುತ್ತಿಗೆದಾರ ಅಬ್ದುಲ್ ಮನಿಯಾರ್ ಎಂಬುವರು ರಸ್ತೆ ಕಾಮಗಾರಿ ನಡೆಸಿದ್ದ 9 ಲಕ್ಷ ಬಾಕಿ ಹಣ ಬಿಡುಗಡೆಗಾಗಿ ಮನವಿ ಮಾಡಿದ್ದರು.

ಆದರೆ ಈ ಹಣ ಬಿಡುಗಡೆ ಮಾಡಲು 1.50 ಲಕ್ಷ ಲಂಚ ನೀಡುವಂತೆ ಬೇಡಿಕೆ ಇಟ್ಟಿದ್ದರು. ಗುತ್ತಿಗೆದಾರ ಅಬ್ದುಲ್ ಮನಿಯಾರ್ ಈ ಸಂಬಂಧ ಲೋಕಾಯುಕ್ತ ಪೊಲೀಸರಿಗೆ ದೂರು ನೀಡಿದ್ದರು.

ಇಂದು ಎಇ ವೀರೇಂದ್ರ ಸಿಂಗ್ ಲಂಚದ ಹಣವನ್ನು ನೀಡುವಂತೆ ಹೇಳಿದ್ದರು. ಅದರಂತೆ



ಲಂಚದ ಹಣ 1.50 ಲಕ್ಷ ಪಡೆದು, ಬೈಕ್ ಸೈಡ್ ಬ್ಯಾಗ್ ನಲ್ಲಿ ಇಡುತ್ತಿದ್ದಾಗ ಲೋಕಾಯುಕ್ತ ಪೊಲೀಸರು ದಾಳಿ ನಡೆಸಿದ್ದಾರೆ. ಈ ಮೂಲಕ ಎಇ ವೀರೇಂದ್ರ ಸಿಂಗಾ ಅವರನ್ನು ರೆಡ್ ಹ್ಯಾಂಡ್ ಆಗಿ ಹಿಡಿದಿದ್ದಾರೆ.

ಲೋಕಾಯುಕ್ತ ಎಸ್ಪಿ ಸತೀಶ್, ಡಿವೈಎಸ್ಪಿ ಶಂಕರ್ ಮಾರ್ಗದರ್ಶನದಲ್ಲಿ ಇನ್ಸ್ ಪೆಕ್ಟರ್ ರವಿ ನೇತೃತ್ವದಲ್ಲಿ ತಂಡ ದಾಳಿ ಮಾಡಿತ್ತು. ಆರೋಪಿಯನ್ನು ವಶಕ್ಕೆ ಪಡೆದು, ಪ್ರಕರಣ ದಾಖಲಿಸಿಕೊಂಡು ತನಿಖೆ ನಡೆಸುತ್ತಿದ್ದಾರೆ.

# ಬೈಲಹೊಂಗಲ ಮತಕ್ಷೇತ್ರದಲ್ಲಿ ತ್ರಿಕೋಣ ಸ್ಪರ್ಧೆ: ವಿಜಯ ಮಾಲೆ ಯಾರಿಗೆ?

ಬೈಲಹೊಂಗಲ: ವಿಧಾನಸಭಾ ಚುನಾವಣೆಯ ಫಲಿತಾಂಶ ದಿ. 13 ರಂದು ಶನಿವಾರ ಹೊರಬಿಳಲಿದೆ. ಪ್ರತಿಯೊಬ್ಬರು ಈ ಕ್ಷಣಕ್ಕಾಗಿ ಕೂತೂಹಲದಿಂದ ಜಾತಕ ಪಕ್ಷಿಯಂತೆ ಕಾಯುತ್ತಿದ್ದಾರೆ. ತಮ್ಮ ತಮ್ಮ ಮತಕ್ಷೇತ್ರದಲ್ಲಿ ಹೊಸ ಶಾಸಕರು ಯಾರಾಗಬಹುದು ಎಂಬ ಕಾತರ ಎಲ್ಲರನ್ನೂ ತೀವ್ರವಾಗಿ ಕಾಡುತ್ತಿದೆ. ಬೈಲಹೊಂಗಲ ಮತಕ್ಷೇತ್ರದಲ್ಲಿ ಬಿಜೆಪಿ, ಕಾಂಗ್ರೆಸ್, ಸ್ವಾಭಿಮಾನಿ ಪಕ್ಷೇತರ ಅಭ್ಯರ್ಥಿಯಿಂದ ತ್ರಿಕೋಣ ಸ್ಪರ್ದೆ ಏರ್ಪಟ್ಟಿದೆ. ಆದರೂ ಕಾಂಗ್ರೆಸ್ ಪಕ್ಷದ ಅಭ್ಯರ್ಥಿ ಶಾಸಕ ಮಹಾಂತೇಶ ಕೌಜಲಗಿ ಅವರ ಸರಳತೆ, ಕ್ಷೇತ್ರದಲ್ಲಿ ಸಾವಿರಾರು ಕೋಟಿ ಅಭಿವೃದ್ಧಿ ಕಾಮಗಾರಿಗಳನ್ನು ಪರಿಗಣಿಸಿ ಜನತೆ ಅವರನ್ನು ಮತ್ತೊಮ್ಮೆ ಪ್ರಚಂಡ ಬಹುಮತದಿಂದ ಆರಿಸಿ ತರಲಿದ್ದಾರೆ ಎಂದು ಅವರ ಬೆಂಬಲಿಗರಾದ ಶಂಕರ ಅವಟಗಿ, ಹಸನ ಗೋರವನಕೊಳ್ಳ ತಮ್ಮ ಮುಕ್ತ ಅನಿಸಿಕೆಗಳನ್ನು ಹಂಚಿಕೊಂಡಿದ್ದಾರೆ.

ಕಳೆದ 15 ದಿನದಿಂದ ನಾಮಪತ್ರ ಸಲ್ಲಿಕೆಯಿಂದ ಮತದಾನದ ಕೊನೆಯವರೆಗೂ ಬಹಳಷ್ಟು ಬ್ಯೂಸಿಯಲ್ಲಿದ್ದ ಬೈಲಹೊಂಗಲ ಕ್ಷೇತ್ರದ ಸ್ಪರ್ಧಾಳು ಅಭ್ಯರ್ಥಿಗಳು



ನಿನ್ನೆ ಮತ್ತು ಇಂದು ಬೆಳಿಗ್ಗೆಯಿಂದ ಸ್ವಲ್ಪ ರಿಲ್ಯಾಕ್ಸ್ ಮೂಡಲ್ಲಿದ್ದು ತಮ್ಮ ತಮ್ಮ ಮನೆಗಳ ಕುಟುಂಬದವರೊಂದಿಗೆ ಕಾಲ ಕಳೆದರು.

ಪಕ್ಷೇತರ ಅಭ್ಯರ್ಥಿ ಡಾ.ವಿಶ್ವನಾಥ ಪಾಟೀಲ ಅವರು ತಮ್ಮ ಮನೆಯ ಆವರಣದಲ್ಲಿ ಕುಟುಂಬದವ ರೊಂದಿಗೆ ಸೇರಿ ಸಂತಸದ ಕ್ಷಣಗಳನ್ನು ಹಂಚಿಕೊಂಡು ಕ್ಷೇತ್ರವಾರು ನಡೆದ ಮತಗಟ್ಟೆಗಳಲ್ಲಿನ ಮತದಾನದ ಲೆಕ್ಕಾಚಾರ ಕುರಿತಾಗಿ ಚರ್ಚೆ ನಡೆಸುತ್ತ ಕುಳಿತಿದ್ದರು.

ಕ್ಷೇತ್ರದ ಬಿಜೆಪಿ ಅಭ್ಯರ್ಥಿ ಜಗದೀಶ ಮೆಟಗುಡ್ಡ ಅವರು ಬೆಳಗಿನವರೆಗೆ ತಮ್ಮ ನಿವಾಸದಲ್ಲಿದ್ದು ತಮ್ಮ ಹಿತೈಷಿಗಳ ಜೊತೆ ಮತದಾನದ ಕುರಿತು ರಿಲ್ಯಾಕ್ಸ್ ಮೂಡಿನ ಚರ್ಚೆ ನಡೆಸಿ, ರಿಲ್ಯಾಕ್ಸ್ ಮೂಡಲ್ಲಿ ಸಂತಸದ ಕ್ಷಣದಲ್ಲಿ ಕಾಲ ಕಳೆದರು.

ಕ್ಷೇತ್ರದ ಕಾಂಗ್ರೆಸ್ ಅಭ್ಯರ್ಥಿ ಶಾಸಕ ಮಹಾಂತೇಶ ಕೌಜಲಗಿ ಅವರು ಬೆಳಿಗ್ಗೆಯಿಂದ ಕಾರ್ಯಕರ್ತರೊಂದಿಗೆ ಚರ್ಚೆ ನಡೆಸಿದರು. ಜೆಡಿಎಸ್ ಅಭ್ಯರ್ಥಿ ಶಂಕರ ಮಾಡಲಗಿ ಮನೆಯಲ್ಲಿ ರಿಲ್ಯಾಕ್ಸ್ ಮೂಡಲ್ಲಿ ಇದ್ದಾರೆ.

ಮೇ 10ರಂದು ಮತದಾರರು ನಿರ್ಧಾರ ಮಾಡಿ ಮತ ಚಲಾಯಿಸಿದ ಮತಗಳು ಮತಯಂತ್ರಗಳಲ್ಲಿ ಭದ್ರವಾಗಿದ್ದು ಅಭ್ಯರ್ಥಿಗಳ ಭವಿಷ್ಯ ಮೇ 13 ರಂದು ಹೊರಬೀಳಲಿದೆ ಅಲ್ಲಿಯವರೆಗೂ ರಿಲ್ಯಾಕ್ಸ್ ಮೂಡಲ್ಲಿರುವ ಅಭ್ಯರ್ಥಿಗಳ ಎದೆಯಲ್ಲಿ ಢವ ಢವ ಎನ್ನುತ್ತಿರುವದು ಅಕ್ಷರಶ: ಸತ್ಯ.


# ಬೆಳಗಾವಿಯ ಆಕಾಶ್ ಬೈಜೂಸ್‌ನ ಗೌರವಿ ನಾಯಕ್‌ಗೆ 3 ನೇ ರ್‍ಯಾಂಕ್ ಪಟ್ಟ

ಬೆಳಗಾವಿ: ಬೆಳಗಾವಿಯ ಆಕಾಶ್ ಬೈಜೂಸ್ ನ ವಿದ್ಯಾರ್ಥಿನಿಯಾದ ಗೌರವಿ ನಾಯಕ್ ಅವರು 2023 ರ ಕರ್ನಾಟಕ ಎಸ್ ಎಸ್ ಎಲ್ ಸಿ ಪರೀಕ್ಷೆಯಲ್ಲಿ 3 ನೇ ರ್‍ಯಾಂಕ್ ಗಳಿಸುವ ಮೂಲಕ ಸಿಟಿ ಟಾಪರ್ ಆಗಿದ್ದಾರೆ. ಇದು ಅವರ ಆಕೆಯ ಪೋಷಕರು ಮತ್ತು ಸಂಸ್ಥೆಯ ಇಡೀ ಸಿಬ್ಬಂದಿಗೆ ಖುಷಿ ನೀಡುವ ವಿಚಾರವಾಗಿದೆ. ಕರ್ನಾಟಕ ಶಾಲಾ ಪರೀಕ್ಷೆ ಮತ್ತು ಮೌಲ್ಯಮಾಪನ ಮಂಡಳಿಯು ಫಲಿತಾಂಶಗಳನ್ನು ಪ್ರಕಟಿಸಿದೆ.

ಗೌರವಿ ನಾಯಕ್ ಅವರು ಇಂಗ್ಲಿಷ್, ಕನ್ನಡ, ಹಿಂದಿ, ಗಣಿತ, ವಿಜ್ಞಾನ ಮತ್ತು ಸಮಾಜ ವಿಜ್ಞಾನದಂತಹ ವಿಷಯಗಳಲ್ಲಿ ಎ + ಪಡೆದಿದ್ದಾರೆ. ಕರ್ನಾಟಕ ಎಸ್ ಎಸ್ ಎಲ್ ಸಿ ಪರೀಕ್ಷೆ 2023 ರಲ್ಲಿ ಸುಮಾರು 8.25 ಲಕ್ಷ ವಿದ್ಯಾರ್ಥಿಗಳು ಪರೀಕ್ಷೆ ಬರೆದಿದ್ದು. ಪರೀಕ್ಷೆಯಲ್ಲಿ 7 ಲಕ್ಷ ವಿದ್ಯಾರ್ಥಿಗಳು ಉತ್ತೀರ್ಣರಾಗಿದ್ದಾರೆ.

ಆಕಾಶ್ ಬೈಜೂಸ್ ವಿದ್ಯಾರ್ಥಿಗಳಿಗೆ ಗಣಿತ, ವಿಜ್ಞಾನ ಮತ್ತು ಇತರ ವಿಷಯಗಳ ಎಲ್ಲಾ ಮೂಲಭೂತ ಪರಿಕಲ್ಪನೆಗಳ ಆಳವಾದ ತಿಳುವಳಿಕೆಯನ್ನು ಅಭಿವೃದ್ಧಿಪಡಿಸಲು ಸಹಾಯ ಮಾಡುತ್ತದೆ, ಇದು ಅವರ ಗ್ರೇಡ್ ಗಳಿಗೆ ಸೂಕ್ತವಾಗಿದೆ, ಇದರಿಂದ ಅವರು ಬೋರ್ಡ್ ಪರೀಕ್ಷೆಗಳಲ್ಲಿ ಉನ್ನತ ಸಾಧನೆ ಮಾಡಬಹುದು.

ಕಲಿಕೆಯ ವೇಳಾಪಟ್ಟಿಯನ್ನು ಕಟ್ಟುನಿಟ್ಟಾಗಿ ಪಾಲಿಸಿದ್ದೇ ತನ್ನ ಯಶಸ್ಸಿಗೆ ಕಾರಣ ಎಂದು ಗೌರವಿ ಹೇಳಿದ್ದಾರೆ. ಹಾಗೇ ತನ್ನ ಕಲಿಕೆಗೆ ಸಹಾಯ ಮಾಡಿದ



ಆಕಾಶ್ ಬೈಜೂಸ್ ಕು–ರಿತು ತಮ್ಮ ಅಭಿಪ್ರಾಯಗಳನ್ನು ಹಂಚಿಕೊಂಡಿದ್ದು ಹೀಗೆ "ಆಕಾಶ್ ಬೈಜೂಸ್ ನೀಡಿದ ಬೆಂಬಲ ಹಾಗೂ ಮಾರ್ಗದರ್ಶನಕ್ಕಾಗಿ ಧನ್ಯವಾದಗಳನ್ನು ಅರ್ಪಿಸುತ್ತೇನೆ. ಕಲಿಕೆಯ ಈ ಸಂದರ್ಭದಲ್ಲಿ ಅವರು ಒದಗಿಸಿದ ಸಂಪನ್ಮೂಲಗಳು ನನ್ನ ಶೈಕ್ಷಣಿಕ ಮತ್ತು ವೈಯಕ್ತಿಕ ಬೆಳವಣಿಗೆಯ ಮೇಲೆ ಹೆಚ್ಚಿನ ಪ್ರಭಾವ ಬೀರಿವೆ" ಎಂದು ತಿಳಿಸಿದರು.

ಇನ್ನು ಉತ್ತಮ ಫಲಿತಾಂಶವನ್ನು ಪಡೆದು ಸಂಸ್ಥೆಯು ಹೆಮ್ಮೆ ಪಡುವಂತೆ ಮಾಡಿದ ಗೌರವಿ ಅವರನ್ನು ಅಭಿನಂದಿಸಿದ ಆಕಾಶ್ ಬೈಜೂಸ್ ನ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಅಭಿಷೇಕ್ ಮಹೇಶ್ವರಿ ಅವರು "2023 ರ ಕರ್ನಾಟಕ ಎಸ್ ಎಸ್ ಎಲ್ ಸಿ ಪರೀಕ್ಷೆಯಲ್ಲಿ ಅಸಾಧಾರಣ ಸಾಧನೆಗಾಗಿ ನಾನು ನನ್ನ ಹೃತ್ಪೂರ್ವಕ ಅಭಿನಂದನೆಗಳನ್ನು ಸಲ್ಲಿಸುತ್ತೇನೆ ಎಂದು ಹೇಳಿದರು. ಇದು ಶೈಕ್ಷಣಿಕ ವರ್ಷದುದ್ದಕ್ಕೂ ಅನುಕರಣೀಯ ಮಟ್ಟದ ನಿರ್ಣಯ ಮತ್ತು ಶಿಸ್ತಿನ ಪ್ರದರ್ಶನವಾಗಿದೆ. ಹಾಗೇ ಇದು ಅವರ ಅಚಲ ಬದ್ಧತೆಗೆ ಸಾಕ್ಷಿಯಾಗಿದೆ. ಅವರ ಮುಂದಿನ ಪ್ರಯತ್ನಗಳಿಗೆ ನಾವು ಶುಭ ಹಾರೈಸುತ್ತೇವೆ" ಎಂದು ಅಭಿನಂದಿಸಿದರು.

ಆಕಾಶ್ ಬೈಜೂಸ್ ಹೈಸ್ಕೂಲ್ ಮತ್ತು ಹೈಯರ್ ಸೆಕೆಂಡರಿ ಶಾಲಾ ವಿದ್ಯಾರ್ಥಿಗಳಿಗೆ ಬಹು ಕೋರ್ಸ್ ಸ್ವರೂಪಗಳಲ್ಲಿ IIT–ಎಇಇ ಕೋಚಿಂಗ್ ನೀಡುತ್ತದೆ. ಇತ್ತೀಚಿನ ದಿನಗಳಲ್ಲಿ, ಆಕಾಶ್ ಕಂಪ್ಯೂಟ–ರ್ ಆಧಾರಿತ ತರಬೇತಿಯನ್ನು ಅಭಿವೃದ್ಧಿಪಡಿಸುವಲ್ಲಿ ತನ್ನ ಗಮನವನ್ನು ಹೆಚ್ಚಿಸಿದೆ. ಇದರ iTutor ರೆಕಾರ್ಡ್ ಮಾಡಿದ ವೀಡಿಯೊ ಉಪನ್ಯಾಸಗಳನ್ನು ಒದಗಿಸುತ್ತದೆ. ಅಣಕು ಪರೀಕ್ಷೆಗಳು ನೈಜ ಪರೀಕ್ಷೆಯ ಸನ್ನಿವೇಶವನ್ನು ಅನುಕರಿಸುತ್ತದೆ, ಹೀಗಾಗಿ ವಿದ್ಯಾರ್ಥಿಗಳಿಗೆ ಪರೀಕ್ಷೆಯನ್ನು ಎದುರಿಸಲು ಅಗತ್ಯವಾದ ಮಾಹಿತಿ ಮತ್ತು ಆತ್ಮವಿಶ್ವಾಸವನ್ನು ನೀಡುತ್ತದೆ.

# ಎಸ್.ಎಸ್.ಎಲ್.ಸಿ. ಪರೀಕ್ಷೆಯಲ್ಲಿ ಸಾಧನೆಗೈದ ವಿದ್ಯಾರ್ಥಿಗಳಿಗೆ ಸತ್ಕಾರ

ಅಂಕಲಿ: ಸ್ಥಳೀಯ ಕೆ–ಎಲ್‌ಇ ಸಂಸ್ಥೆಯ ಶ್ರೀಮತಿ ಶಾರದಾಕೋರೆ ಪ್ರೌಢ ಶಾಲೆಯಲ್ಲಿ 2022–23ನೇ ಸಾಲಿನ ಎಸ್‌ಎಸ್–ಎಲ್‌ಸಿ ವಾರ್ಷಿಕ ಪರೀಕ್ಷೆಯಲ್ಲಿ ಸಾಧನೆಗೈದ ವಿದ್ಯಾರ್ಥಿಗಳಿಗೆ ಸತ್ಕಾರ ಸಮಾರಂಭ ನೆರವೇ–ರಿಸಲಾಯಿತು.

ಕೆಎಲ್‌ಇ ಸಂಸ್ಥೆಯ ಕಾರ್ಯಾಧ್ಯಕ್ಷರಾದ ಡಾ. ಪ್ರಭಾಕರ ಕೋರೆ, ರಾಯಬಾಗ ವಿಧಾನಸಭಾ ಶಾಸಕರಾದ ದುರ್ಯೋಧನ ಐಹೊಳೆ, ಸಿ.ಬಿ ಕೋರೆ ಸಕ್ಕರೆ ಕಾರ್ಖಾನೆ ನಿ, ಚಿಕ್ಕೋಡಿಯ ಅಧ್ಯಕ್ಷರು ಹಾಗೂಸ್ಥಾನಿಕ ಆಡಳಿತ ಮಂಡಳಿಯ ಸದಸ್ಯರಾದ ಮಲ್ಲಿಕಾರ್ಜುನ ಗ ಕೋರೆಯವರು ಕೇಂದ್ರಕ್ಕೆ



ಪ್ರಥಮ ಸ್ಥಾನ ಪಡೆದ ಕುಮಾರಿ ರಮ್ಯಾಜಯಂತ ನಾಯಿಕ ಶೇ 97.12%, ಕುಮಾರಿ ಗಂಗಾ ಗಣಪತಿ ಬುಬನಾಳೆ ಶೇ 96.96%, ದ್ವಿತೀಯ ಸ್ಥಾನ ಹಾಗೂ ಕುಮಾರಿ, ದಿವ್ಯಾ ಅಣ್ಣಪ್ಪಾ ಹಿರೆಕುರಬರ 96.16% ಗಳಿಸಿ ತೃತಿಯ ಸ್ಥಾನ ಪಡೆದ ವಿದ್ಯಾರ್ಥಿಗಳನ್ನು ಸನ್ಮಾನಿಸಿ ಅಭಿನಂದಿಸಿ ಶುಭ ಹಾರೈಸಿದರು.

ಈ ಸಂದರ್ಭದಲ್ಲಿ ಕೆಎಲ್‌ಇ ಸಂಸ್ಥೆಯ ಆಜೀವಸದಸ್ಯರಾದ ಶ್ರೀ ಬಿ ಎಸ್ ಅಂಬಿ, ಉಪ ಪ್ರಾಚಾರ್ಯರಾದ ಶ್ರೀಮತಿ ಜೆ. ಎಸ್. ತಮಗೊಂಡ, ಪದವಿ ಪೂರ್ವಕಾಲೇಜಿನ ಪ್ರಾಚಾರ್ಯರಾದ ಶ್ರೀ. ಆರ್. ಸಿ. ಪಾಟೀಲ, ಪದವಿ ಮಹಾ ವಿದ್ಯಾಲಯದ ಪ್ರಾಚಾರ್ಯರಾದ ಎ. ಕೆ. ಪಾಟೀಲ ಹಾಗೂ ಪ್ರೌಢ ಶಾಲೆಯಎಲ್ಲ ಸಿಬ್ಬಂದಿಯವರು ಹಾಜರಿದ್ದರು.

# ಎನ್.ಕೆ.ಇ.ಎಸ್ ಚಿತ್ರಕಲಾ ಶಿಕ್ಷಕ ಶಿವಯೋಗಿ ಸಣ್ಣಮನಿಗೆ ಕಲಾ ತಪಸ್ವಿ ಪ್ರಶಸ್ತಿ ಪ್ರಧಾನ

ಬೈಲಹೊಂಗಲ: ಹೊರನಾಡು ಮಹಾನಗರ ಮುಂಬಯಿಯ ಪ್ರತಿಷ್ಠಿತ ಶಿಕ್ಷಣ ಸಂಸ್ಥೆಯ ಎನ್.ಕೆ.ಇ.ಎಸ್ ಪ್ರೌಢಶಾಲೆಯಲ್ಲಿ ಕಳೆದ 20 ವರ್ಷಗಳಿಂದ ಸುಧೀರ್ಘ ಸೇವೆ ಸಲ್ಲಿಸುತ್ತಿರುವ ಮೂಲತ: ಬೈಲಹೊಂಗಲದ ಉದಯೋನ್ಮುಖ ಚಿತ್ರಕಲಾ ಶಿಕ್ಷಕ ಹಾಗೂ ಪತ್ರಕರ್ತ ಶಿವಯೋಗಿ ಜಿ ಸಣ್ಣಮನಿ ಅವರಿಗೆ ಬೃಹನ್ಮುಂಬಯಿ ಕಲಾಧ್ಯಾಪಕ ಸಂಘ ಮುಂಬಯಿ ಅವರ ಆಶ್ರಯದಲ್ಲಿ ಈಚೆಗೆ ಕಲಾ ತಪಸ್ವಿ ಪ್ರಶಸ್ತಿಯನ್ನು ನೀಡಿ ಗೌರವಿಸಲಾಗಿದೆ.

ಮಹಾರಾಷ್ಟ್ರದ ಮುಂಬಯಿ ವಡಾಲ ನಗರದ ಎನ್.ಕೆ.ಇಎಸ್. ಪ್ರೌಢಶಾಲೆಯ ಸಭಾಗೃಹದಲ್ಲಿ ಈಚೆಗೆ ಜರುಗಿದ ಸಾಧಕರ ಸನ್ಮಾನ ಕಾರ್ಯಕ್ರಮದಲ್ಲಿ ಮುಂಬಯಿ ಚಿತ್ರಕಲಾ ಶಿಕ್ಷಕ ಶಿವಯೋಗಿ ಜಿ. ಸಣ್ಣಮನಿ ಅವರ ಕಲಾ ಆರಾಧನೆಯ ಸೇವೆಯನ್ನು ಪರಿಗಣಿಸಿ ಮಹಾರಾಷ್ಟ ಚಿತ್ರಕಲಾ ನಿರೀಕ್ಷಕ ಸಂದೀಪ ಡೊಂಗ್ರೆ



ಅವರು ಮುಂಬಯಿ ಜಿಲ್ಲಾ ಕಲಾ ತಪಸ್ವಿ ಪ್ರಶಸ್ತಿ ನೀಡಿ ಸನ್ಮಾನಿಸಿದರು.

ಸಮಾರಂಭದ ಉದ್ಘಾಟಣೆಯನ್ನು ವಾರ್ಡ ನಿರೀಕ್ಷಕ ಪಿ.ಟಿ.ಪಾಟೀಲ, ನೆರವೇರಿಸಿ ಚಿತ್ರಕಲೆ ರಂಗದಲ್ಲಿ ಅದ್ವಿತಿಯ ಪ್ರತಿಭೆ ಮೆರೆದ ಶಿವಯೋಗಿ ಅವರ ಸಾಧನೆ ಕರಾವಳಿಯ ಭಾಗಕ್ಕೆ ಮೆರೆಗು ತಂದಿದೆ. ಚಿತ್ರಕಲೆಗಳಲ್ಲಿ ಹಲವಾರು ಪ್ರಕಾರಗಳಿದ್ದು ಅದನ್ನು ಉಳಿಸಿ ಬೆಳೆಸಬೇಕೆಂದರು.

ಮುಖ್ಯ ಅಥಿತಿಯಾಗಿದ್ದ ಸರ್ ಜೆ.ಜೆ.ಸ್ಕೂಲ್ ಆಪ್ ಆರ್ಟ ಮುಂಬಯಿ ಹಾಗೂ ನಾಗಪೂರದ ಚಿತ್ರಕಲಾ ನಿರೀಕ್ಷಕ ಎಸ್. ವಾಘ್ಮೋಡೆ ಮಾತನಾಡಿ, ಚಿತ್ರಕಲೆ ವಿಶ್ವಬಾಷೆಯಾಗಿದ್ದು ಎಲ್ಲ ಭಾಷಾ ವಿಷಯಗಳಿಗೆ ಮಹತ್ತರವಾದ ಸಂಭಂಧ ಹೊಂದಿದೆ. ಚಿತ್ರಕಲೆಯಿಂದ ಮಕ್ಕಳಲ್ಲಿ ಓದಿನಲ್ಲಿ ಏಕಾಗ್ರತೆ ಬೆಳೆಯುವದಲ್ಲದೇ ಬುದ್ದಿಮಟ್ಟವನ್ನು ಹೆಚ್ಚಿಸುವದರಲ್ಲಿ ಪ್ರಮುಖ ಪಾತ್ರ ವಹಿಸುವದು.

ಆದ್ದರಿಂದ ಹೆತ್ತವರು ಮಕ್ಕಳ ಪ್ರತಿಭೆಯನ್ನು ಗುರಿತಿಸಿ ಅವರ ಬುದ್ದಿಮಟ್ಟಕ್ಕೆ ತಕ್ಕಂತೆ ಶಿಕ್ಷಣ ಕೊಡಬೇಕು ಎಂದರು.

ಎನ್.ಕೆ.ಇ.ಎಸ್. ಶಾಲಾ ವಿಶ್ವಸ್ಥ ಮಂಡಳಿಯ ಅನಂತ ಬನವಾಸಿ ಮಾತನಾಡಿ, ಚಿತ್ರಕಲೆ ಎಲ್ಲ ಕ್ಷೇತ್ರಗಳಲ್ಲಿ ಮಹತ್ವದ ಪಾತ್ರ ವಹಿಸಿದ್ದು ಇಂದಿನ ದಿನಗಳಲ್ಲಿ ಒತ್ತಾಯದ ಶಿಕ್ಷಣವಾಗಬಾರದು.

ಈ ಚಿತ್ರಕಲಾ ಶಿಕ್ಷಕರ ಸಂಘದ ಜತೆಗೆ ನಮ್ಮ ಶಾಲೆಯ ಆಡಳಿತ ಮಂಡಳಿಯು ತಮಗೆ ಸಂಪೂರ್ಣ ಸಹಕಾರ ನೀಡುತ್ತದೆ ಎಂದರು.

ಸಂಗೀತ ಶಿಕ್ಷಕ ಸಚಿನ್ ಮೋರೆ ಪ್ರಾಥ–ರ್ನನೆಗೈದರು. ಮುಂಬಯಿ ಕಲಾಧ್ಯಾಪಕ ಸಂಘದ ಅಧ್ಯಕ್ಷ ಹಿರಾಮನ್ ಪಾಟೀಲ ಹಾಗೂ ಕಾರ್ಯದರ್ಶಿ ಬಿರೇಂದ್ರ ಸೋನ್ವಾನೆ ಅವರ ನೇತೃತ್ವದಲ್ಲಿ ಕಾರ್ಯಕ್ರಮ ನಡೆಯಿತು. ಮುಂಬಯಿಯಲ್ಲಿ ಅತ್ಯುತ್ತಮ ಕಲಾ ಸೇವೆಗೈದ ಸುಮಾರು 15 ಮಂದಿ ಚಿತ್ರಕಲಾ ಶಿಕ್ಷಕರಿಗೆ ಜೆ.ಜೆ. ಸ್ಕೂಲ್ ಆಪ್ ಆರ್ಟ ಚಿತ್ರಕಲಾ ಪರೀಕ್ಷೆ ನಿರೀಕ್ಷಕ ವಾಘ್ಮೋಡೆ ಅವರು ಕಲಾ ತಪಸ್ವಿ ಪ್ರಶಸ್ತಿ ಫಲಕ ಹಾಗೂ ಪ್ರಮಾಣ ಪತ್ರ ನೀಡಿ ಗೌರವಿಸಿದರು.

ಮುಂಬಯಿಯ ಕಲಾಧ್ಯಾಪಕ ಸಂಘದ ಅಧ್ಯಕ್ಷ ಹಿರಾಮನ್ ಪಾಟೀಲ ಸಭೆಯ ಅಧ್ಯಕ್ಷತೆ ವಹಿಸಿದ್ದರು. ಮಹಾರಾಷ್ಟ್ರ ರಾಜ್ಯ ಸಂಘದ ಪಿ.ಆರ್.ಪಾಟೀಲ, ಎನ್.ಎಮ್. ಖಾದ್ರಿ ಎನ್.ಕೆಇ.ಎಸ್ ಶಿಕ್ಷಣ ಸಂಸ್ಥೆಯ ವಿಶ್ವಸ್ಥ ಮಂಡಳಿಯ ಅನಂತ ಬನವಾಸಿ, ಗೌರವ ಕಾರ್ಯದರ್ಶಿ ಪದ್ಮಜಾ ಬನವಾಸಿ, ಶಾಲಾ ಪ್ರಾಂಶುಪಾಲೆ ಉಮಾ ಮಹೇಶ್ವರಿ ಹಾಗೂ ಸನಾತನ ಧರ್ಮ ಪ್ರೌಢಸಾಲೆಯ ಮುಖ್ಯೋಪಾಧ್ಯಾಯನಿ ಮನಿಷಾ ಜಿಲ್ಲಾ ಮಹಿಳಾ ಘಟಕದ ಉಪಾಧ್ಯಕ್ಷೆ ಮಿತಾಲಿ ನಾಯರ ಈ ಸಂದರ್ಭದಲ್ಲಿ ಉಪಸ್ಥಿತರಿದ್ದರು. ಜಿಲ್ಲಾ ಕಾರ್ಯದರ್ಶಿ ವಿರೇಂದ್ರ ಸೋನ್ವಾನೆ ವಂದಿಸಿದರು.

# ಯೋಗಾದಲ್ಲಿ ಪ್ರಥಮ



ಬೈಲಹೊಂಗಲ: ಶ್ರೀ ಶಿವಯೋಗೀಶ್ವರ ಗ್ರಾಮೀಣ ಆಯುರ್ವೇದಿಕ ವೈದ್ಯಕೀಯ ಮಹಾವಿದ್ಯಾಲಯ ಮತ್ತು ಆಸ್ಪತ್ರೆ, ಇಂಚಲ ಇಲ್ಲಿನ ಪ್ರಥಮ ವರ್ಷ ಬಿಎಎಂಎಸ್ ತರಗತಿಯಲ್ಲಿ ಓದುತ್ತಿರುವ ವಿದ್ಯಾರ್ಥಿ ಸುಮಿತ ಪೂಜಾರಿ, ಈತನು ದುಬೈನಲ್ಲಿ ಮೇ 10 ರಂದು ನಡೆದ ಮೊದಲನೇ ಅಂತರಾಷ್ಟ್ರೀಯ ಯೋಗಾ ಸ್ಪರ್ಧೆಯಲ್ಲಿ ಪ್ರಥಮ ಸ್ಥಾನವನ್ನು ಪಡೆದಿರುತ್ತಾನೆ.




BELAGAVI VARADI KANNADA DAILY MORNING : Editor, Printer, Publisher & Owned By : **Satish Basavani Gudagenatti,** Basavani House No.53, Ashray Colony, Sarathi Nagar, Tv Center - 590019, TQ & DIST Belagavi, Karnataka.
Printed At : LAXMI PRINTERS, No.627. Auto Nagar - 590016.TQ & DIST Belagavi, Karnataka Mob : 9900332089